ಸಂಪುಟ: 13 Volume | ಸಂಚಿಕೆ: 273 Issue | ಪುಟಗಳು 08 Pages | ಬುಧವಾರ 17 ಡಿಸೆಂಬರ್ 2025 | ₹6 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಒಂದು ಗ್ರಂಥಾಲಯದ ಎಲ್ಲಾ ತಿಳುವಳಿಕೆಗಳನ್ನು ತಲೆಯಲ್ಲಿರಿಸಿ ಅಹಂಕರಿಸಿ ನಡೆಯುವ ಒಬ್ಬ ವ್ಯಕ್ತಿಗಿಂತ ಒಳ್ಳೆಯ ಸ್ವಭಾವ ಮತ್ತು ನಡವಳಿಕೆಯಿರುವ ಒಬ್ಬ ಸಾಧಾರಣ ವ್ಯಕ್ತಿ ಮೇಲು.

–ಸ್ವಾಮಿ ವಿವೇಕಾನಂದ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಕೌಶಲ್ಯಾಭಿವೃದ್ಧಿ ವಿಶ್ವವಿದ್ಯಾಲಯಕ್ಕೆ ಪ್ರಸ್ತಾವನೆ 6 | ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಸಿಇಓ 7 | ಜವಬ್ದಾರಿಯಿಂದ ನುಣುಚಿಕೊಳ್ಳುತ್ತಿರುವ ಖಂಡ್ರೆ 8

## ನಾಡಿನ 2,809 ರೈತರು ಆತ್ಮಹತ್ಯೆ



**ಬೆಂಗಳೂರು:** 2023–24 ರಿಂದ ಇದುವರೆಗೆ ಕರ್ನಾಟಕದಲ್ಲಿ ಒಟ್ಟು 2,809 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈತರ ಆತ್ಮಹತ್ಯೆ ಪ್ರಕರಣದಲ್ಲಿ ರಾಜ್ಯವು ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ ಎಂದು ಸಚಿವ ಎನ್. ಚೆಲುವರಾಯಸ್ವಾಮಿ ರಾಜ್ಯ ವಿಧಾನಸಭೆಗೆ ತಿಳಿಸಿದ್ದಾರೆ. ಅಧಿವೇಶನದಲ್ಲಿ ಶಾಸಕ ಅರವಿಂದ್ ಬೆಲ್ಲದ್ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಕೃಷಿ ಸಚಿವ, 2023–24ರಲ್ಲಿ 1,254 ರೈತರ ಆತ್ಮಹತ್ಯೆಗಳು ವರದಿಯಾಗಿವೆ. 2024–25ರಲ್ಲಿ 1,178 ಮತ್ತು 2025–26ರಲ್ಲಿ ಅಂದರೆ ಪ್ರಸಕ್ತ ವರ್ಷ ಇಲ್ಲಿಯವರೆಗೆ 377 ಪ್ರಕರಣಗಳು ದಾಖಲಾಗಿವೆ ಎಂದಿದ್ದಾರೆ.

## ಭ್ರಷ್ಟರಿಗೆ ಲೋಕಾ ಶಾಕ್

**ಬೆಂಗಳೂರು:** ಲೋಕಾಯುಕ್ತ ಅಧಿಕಾರಿಗಳು ಹಲವು ಭ್ರಷ್ಟ ಅಧಿಕಾರಿಗಳಿಗೆ ಶಾಕ್ ನೀಡಿದ್ದಾರೆ. ಶಿವಮೊಗ್ಗ, ಧಾರವಾಡ ಹಾಗೂ ವಿಜಯನಗರ ಸೇರಿದಂತೆ ರಾಜ್ಯದ ಹಲವು ಕಡೆ ಅಧಿಕಾರಿಗಳಿಗೆ ಸೇರಿದ ಮನೆ, ಕಚೇರಿ ಮೇಲೆ ದಾಳಿ ನಡೆಸಿ, ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ. ಅಕ್ರಮ ಆಸ್ತಿಗಳಿಕೆ ಆರೋಪದ ಹಿನ್ನೆಲೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ರೂಪ್ಲಾ ನಾಯ್ಕ್ ಅವರ ಮನೆ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ.

## ದ್ವೇಷ ಭಾಷಣ ಮಸೂದೆ



**ಬೆಳಗಾವಿ:** ರಾಜ್ಯ ವಿಧಾನಸಭೆಯಲ್ಲಿ ದ್ವೇಷ ಭಾಷಣ ಮಸೂದೆಯನ್ನು ಮಂಡಿಸುವುದಕ್ಕೆ ಭಾರತೀಯ ಜನತಾ ಪಕ್ಷ ವಿರೋಧ ಮಾಡುತ್ತಿರುವುದು ಏಕೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಂಗಳವಾರ ಪ್ರಶ್ನಿಸಿದ್ದಾರೆ. ಸುದ್ದಿಸಂಸ್ಥೆ ಎಎನ್ಐ ಜೊತೆಗೆ ಮಾತನಾಡಿದ ಅವರು, 'ದ್ವೇಷ ಭಾಷಣ ಮಸೂದೆ ಕುರಿತು ವಿಧಾನಸಭೆಯಲ್ಲಿ ಚರ್ಚಿಸಲಾಗುವುದು. ಬಿಜೆಪಿ ಮತ್ತು ಅದರ ಅಂಗಸಂಸ್ಥೆಗಳು ಏಕೆ ಭಯಭೀತರಾಗುತ್ತಿವೆ ಅದಕ್ಕೂ ಅವರಿಗೂ ಯಾವುದೇ ಸಂಬಂಧವಿಲ್ಲ ಎಂದು ತಿಳಿಸಿದ್ದಾರೆ. ಪ್ರಸ್ತಾವಿತ ಕಾನೂನು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟುಗಳಿಗೆ ಅನುಗುಣವಾಗಿದೆ. ಎಲ್ಲದಕ್ಕೂ ಒಂದು ಕಾನೂನು ಇದೆ. ಆದ್ದರಿಂದ ದ್ವೇಷ ಭಾಷಣಕ್ಕೂ ಕಾನೂನು ಜಾರಿಯಾಗುತ್ತಿದೆ. ಅದರಲ್ಲಿ ತಪ್ಪೇನು?' ಎಂದು ಸಚಿವ ಸಂತೋಷ್ ಲಾಡ್ ಪ್ರಶ್ನಿಸಿದ್ದಾರೆ.

## ಕಸ್ತೂರಿರಂಗನ್ ವರದಿ ಜಾರಿ ಇಲ್ಲ

**ಬೆಳಗಾವಿ:** ಪಶ್ಚಿಮಘಟ್ಟದ ಪರಿಸರ ಸೂಕ್ಷ್ಮ ಪ್ರದೇಶಕ್ಕೆ ಸಂಬಂಧಿಸಿದ ಕಸ್ತೂರಿ ರಂಗನ್ ವರದಿಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಸಚಿವ ಈಶ್ವರ ಬಿ ಖಂಡ್ರೆ ವಿಧಾನಪರಿಷತ್ತಿಗಿಂದು ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಐವಾನ್ ಡಿಸೋಜಾ ಅವರ ಪ್ರಶ್ನೆಗೆ ಉತ್ತರಿಸಿ, ಪಶ್ಚಿಮಘಟ್ಟಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ 6 ಅಧಿಸೂಚನೆ ಹೊರಡಿಸಿದ್ದು, 10 ಜಿಲ್ಲೆಗಳ ಜನಪ್ರತಿನಿಧಿಗಳ ಸಭೆ ಕರೆದು ಚರ್ಚಿಸಿ ನಂತರ ಸಚಿವ ಸಂಪುಟದ ಉಪಸಮಿತಿ ಸಭೆಯಲ್ಲೂ ಪರಾಮರ್ಶಿಸಿ, ಸಚಿವ ಸಂಪುಟದಲ್ಲಿ ಕಸ್ತೂರಿ ರಂಗನ್ ವರದಿಗೆ ರಾಜ್ಯದ ಒಪ್ಪಿಗೆ ಇಲ್ಲ ಎಂದು ನಿರ್ಣಯಿಸಿ ಪತ್ರ ಬರೆದಿರುವೆ ಎಂದಿದ್ದಾರೆ.

## ಎಚ್ಡಿಕೆಗೆ ಹರಿಸಿದಿ ಪ್ರಧಾನಿ ನರೇಂದ್ರ ಮೋದಿ



**ಮಂಡ್ಯ:** ಕೇಂದ್ರಸಚಿವ ಎಚ್ಡಿ ಕುಮಾರಸ್ವಾಮಿ ಅವರ ಹುಟ್ಟುಹಬ್ಬಕ್ಕೆ ಪ್ರಧಾನಿ ಮೋದಿ ಶುಭಹಾರೈಸಿದ್ದಾರೆ. ಏತನ್ಮಧ್ಯೆ ಮಂಡ್ಯ ಜಿಲ್ಲೆಯ ಹಾಲಿ ಮತ್ತು ಮಾಜಿ ಜನಪ್ರತಿನಿಧಿಗಳು, ಮುಖಂಡರು, ಕಾರ್ಯಕರ್ತರು ಜಿಲ್ಲೆಯ ಹಲವೆಡೆ ಅದ್ದೂರಿಯಾಗಿ ಆಚರಿಸಿದ್ದಾರೆ. ಈ ವೇಳೆ ಅಭಿಮಾನಿಯೊಬ್ಬರು 30 ಗ್ರಾಂನ ಚಿನ್ನದ ಸರವನ್ನು ಸಚಿವರಿಗೆ ಉಡುಗೊರೆಯಾಗಿ ನೀಡಿದ್ದಾರೆ. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ನೇತೃತ್ವದಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ನೂರಾರು ಮುಖಂಡರು ಕೇಕ್ ಕತ್ತರಿಸಿ ಹುಟ್ಟುಹಬ್ಬ ನೆರವೇರಿಸಿದ್ದಾರೆ.

## ಬೀದರ್ ಶಾಹೀನ್‌ಗೆ ಪ್ರಶಸ್ತಿ ಗೌರವ



**ಬೆಳಗಾವಿ:** ಸುವರ್ಣ ಸೌಧದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಬೀದರಿನ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹಕ್ಕೆ ಪ್ರತಿಷ್ಠಿತ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಸಂಸ್ಥೆಯ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅವರು ಅಕಾಡೆಮಿಯ ಪ್ರಶಸ್ತಿ ಸ್ವೀಕರಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಪ್ರಶಸ್ತಿ ಪ್ರದಾನ ಮಾಡಿದ್ದು, ಆಕಾಡೆಮಿ ಅಧ್ಯಕ್ಷ ಸಂಗಮೇಶ್ ಬಬಲೇಶ್ವರ್, ಇತರ ಪ್ರಶಸ್ತಿ ಪುರಸ್ಕಂತರು. ಅಧಿಕಾರಿಗಳು ಮತ್ತು ಇತರರು ಉಪಸ್ಥಿತರಿದ್ದರು.

# ಸದನ ಸಿಎಂ ಕದನ

## ಮುಖ್ಯಮಂತ್ರಿ ಯಾರು?: ಪ್ರತಿಪಕ್ಷ | ಐದುವರ್ಷ ನಾನೇ ಮುಖ್ಯಮಂತ್ರಿ: ಸಿದ್ದರಾಮಯ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ

ರಾಜ್ಯ ಆಡಳಿತಾರೂಢ ಕಾಂಗ್ರೆಸ್‌ನ ಸಿಎಂ ಕುರ್ಚಿ ಕದನ ಇಂದು ಬೆಳಗಾವಿ ಅಧಿವೇಶನದಲ್ಲಿಯೂ ಪ್ರತಿಧ್ವನಿಸಿದೆ. ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಪ್ರತಿಪಕ್ಷಗಳ ಪ್ರಶ್ನೆಗೆ ನಾನೇ ಮುಂದಿನ 5 ವರ್ಷ ಸಿಎಂ ಎಂದು ಸಿದ್ದರಾಮಯ್ಯ ಘೋಷಿಸಿದ್ದು ಚರ್ಚೆಗೆ ಗ್ರಾಸವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ–ಡಿಕೆ.ಶಿವಕುಮಾರ್ ನಡುವೆ ಹೈಕಮಾಂಡ್ ಸಮ್ಮುಖದಲ್ಲಿ ಮಾತುಕತೆ ನಡೆಯಲಿದ್ದು, ಡಿಸೆಂಬರ್ 20 ಅಥವಾ 21 ರಂದು ಮಾತುಕತೆಗೆ ದಿನಾಂಕ ನಿಗದಿಯಾಗುವ ಸಾಧ್ಯತೆಯಿದೆ ಆಪ್ತ ಮೂಲಗಳು ಖಚಿತ ಪಡಿಸಿವೆ.

**ಮುಂದುವರಿದ ಗೊಂದಲ:** ನಾಯಕತ್ವ ಬದಲಾವಣೆ ವಿಚಾರ ಈಗಾಗಲೇ ರಾಜ್ಯದಲ್ಲಿ ಗೊಂದಲಗಳನ್ನು ಮೂಡಿಸಿದ್ದು, ಈ ಹಿನ್ನೆಲೆಯಲ್ಲಿ ಪರಿಸ್ಥಿತಿಯಿನ್ನು ಚಾಣಕ್ಯತನದಿಂದ ಎದುರಿಸಲು, ತಂತ್ರಗಳನ್ನು ಹೈಕಮಾಂಡ್ ಅಳವಡಿಸಿಕೊಳ್ಳುತ್ತಿದೆ. ಈ ಮೂಲಕ ಅಧಿಕಾರ ವರ್ಗಾವಣೆಯನ್ನು ಸುಗಮ ರೀತಿಯಲ್ಲಿ ನಡೆಸಲು ಮುಂದಾಗಿದೆ.

**ಅವಕಾಶ ನಿರಾಕರಣೆ:** ನಾಯಕತ್ವ ವಿಚಾರವಾಗಿ ಸಿದ್ದರಾಮಯ್ಯ ಹಾಗೂ ಡಿಕೆ.ಶಿವಕುಮಾರ್ ಅವರು ಪ್ರಯತ್ನ ನಡೆಸಿದ್ದರು. ಆದರೆ, ಪ್ರಯತ್ನ ವಿಫಲವಾಗಿತ್ತು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರು ಸೋನಿಯಾ ಅವರ ಬಳಿ ಭೇಟಿಗೆ ಅವಕಾಶ ಕೋರಿದ್ದರು. ಆದರೆ, ಸೋನಿಯಾ ಗಾಂಧಿಯವರು ನಿರಾಕರಿಸಿದ್ದರು.



### ದಲಿತ ಮುಖ್ಯಮಂತ್ರಿ ಕಾರ್ಡ್

ಒಂದು ವೇಳೆ ಹೈಕಮಾಂಡ್ ಸಿದ್ದರಾಮಯ್ಯ ಅವರನ್ನು ರಾಜೀನಾಮೆ ನೀಡುವಂತೆ ಒತ್ತಡ ಹೇರಿದ್ದೇ ಆದರೆ, ತಮ್ಮ ಅಹಿಂದ ಬೆಂಬಲವನ್ನು ಬಳಸಿಕೊಂಡು ಶಿವಕುಮಾರ್ ಅವರನ್ನು ಎದುರಿಸುವ ಸಾಧ್ಯತೆಯಿದೆ. ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಹೆಸರನ್ನು ಪ್ರಸ್ತಾಪಿಸುವ ಮೂಲಕ ದಲಿತ ಸಿಎಂ ಕಾರ್ಡ್ ಅನ್ನು ಬಳಸಬಹುದು ಎನ್ನಲಾಗುತ್ತಿದೆ.

### ಡಿಸೆಂಬರ್‌ನಲ್ಲೇ ಹೈ ನಿರ್ಧಾರ ಅಗತ್ಯ

ಏತನ್ಮಧ್ಯೆ ಸೋನಿಯಾ ಗಾಂಧಿಯವರ ಆಪ್ತ ಎಂಎಲ್ಸಿ ಬಿ.ಕೆ. ಹರಿಪ್ರಸಾದ್ ಅವರು ಪರಸ್ಪರ ಒಪ್ಪಿಗೆ ಮೂಲಕ ಸುಗಮ ಅಧಿಕಾರ ವರ್ಗಾವಣೆಗೆ ಸಲಹೆ ನೀಡಿದ್ದಾರೆ. ಆ ರೀತಿ ಆಗದಿದ್ದರೆ, ಪಕ್ಷವು ಅಹಿಂದ ಮತಗಳ ಒಂದು ಭಾಗವನ್ನು ಕಳೆದುಕೊಳ್ಳಬಹುದು ಎಂದು ಎಚ್ಚರಿಸಿದ್ದಾರೆ. ಸಿಎಂ ಬದಲಾವಣೆಯ ಬಗ್ಗೆ ಹೈಕಮಾಂಡ್ ಡಿಸೆಂಬರ್‌ನಲ್ಲೇ ನಿರ್ಧರಿಸಬೇಕು. ಕಾರಣ; ನೂತನ ಸಿಎಂ 2026–27ರ ಬಜೆಟ್‌ಗೆ ಒಂದು ತಿಂಗಳಾದರೂ ತಯಾರಿ ಬೇಕು ಎಂದು ಕಾಂಗ್ರೆಸ್ ನಾಯಕರೊಬ್ಬರು ತಿಳಿಸಿದ್ದಾರೆ.

### ಮತ್ತೆ ಡಿನ್ನರ್ ಪಾರ್ಟಿ..!

ಡಿಸಿಎಂ ಡಿಕೆಶಿ ಡಿನ್ನರ್ ಪಾರ್ಟಿ ಹಮ್ಮಿಕೊಂಡ ಬೆನ್ನಲ್ಲೇ ಎಸ್‌ಸಿ ಎಸ್‌ಟಿ ಶಾಸಕರಿಗೆ ಸಚಿವ ಸತೀಶ್ ಜಾರಕಿಹೊಳಿ ಪ್ರತ್ಯೇಕ ಔತಣಕೂಟ ಹಮ್ಮಿಕೊಂಡಿದ್ದಾರೆ. ಬೆಳಗಾವಿಯ ಖಾಸಗಿ ಹೋಟೆಲ್‌ನಲ್ಲಿ ಡಿನ್ನರ್ ಮೀಟಿಂಗ್ ಹಮ್ಮಿಕೊಳ್ಳಲಾಗಿದ್ದು, ಶಾಸಕರು, ಪರಿಷತ್ ಸದಸ್ಯರಿಗೆ ಆಹ್ವಾನ ನೀಡಿದ್ದು ಸತೀಶ್ ನಡೆ ಕುತೂಹಲ ಕೆರಳಿಸಿದೆ.

### ಅಶೋಕ್ ಲೇವಡಿ ಸಿಎಂ ನುಡಿ



ಈ ವೇಳೆ, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಧ್ಯಪ್ರವೇಶಿಸಿ, ಸಿಎಂ ಕುರ್ಚಿ ಮೇಲೆ ಕಣ್ಣಿಟ್ಟ ಕಾರಣದಿಂದ ರಂಗನಾಥ್ ಅವರಿಗೆ ಉರಿಯುತ್ತಿದೆ ಎಂದು ಲೇವಡಿ ಮಾಡಿದ್ದಕ್ಕೆ ಕೌಂಟರ್ ಕೊಟ್ಟ ಸಿಎಂ ಸಿದ್ದರಾಮಯ್ಯ, ಐದು ವರ್ಷ ನಾವೇ ಇರುತ್ತೇವೆ. ಜನರು 140 ಶಾಸಕರನ್ನು ಆಶೀರ್ವಾದಿಸಿದ್ದಾರೆ. 2028ಕ್ಕೂ ನಾವೇ ಅಧಿಕಾರಕ್ಕೆ ಬರುತ್ತೇವೆ ಎಂದು ಗುಡುಗಿದ್ದಾರೆ.

## ಚಾಲಕರಿಗೆ ಮಾಸಿಕ ಭತ್ಯೆ ಹೆಚ್ಚಳ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಪಘಾತ ರಹಿತವಾಗಿ ಸೇವೆ ಸಲ್ಲಿಸುವ ಸಾರಿಗೆ ಚಾಲಕರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಮಹತ್ವದ ಪ್ರೋತ್ಸಾಹ ಘೋಷಿಸಿದೆ. ಚಾಲಕರಿಗೆ ನೀಡಲಾಗುತ್ತಿದ್ದ ನಗದು ಪುರಸ್ಕಾರ ಮತ್ತು ಮಾಸಿಕ ಭತ್ಯೆಯನ್ನು ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ನಿಗಮವು ಸೋಮವಾರ ಹೊರಡಿಸಿದ ಸುತ್ತೋಲೆಯ ಪ್ರಕಾರ, ಮುಖ್ಯಮಂತ್ರಿಗಳ ಚಿನ್ನ ಮತ್ತು ಬೆಳ್ಳಿ ಪದಕಗಳನ್ನು ಪಡೆಯುವ ಚಾಲಕರು ಈಗ ಹೆಚ್ಚಿನ ಪ್ರೋತ್ಸಾಹ ಧನಕ್ಕೆ ಅರ್ಹರಾಗಿರುತ್ತಾರೆ. ಪರಿಷ್ಕೃತ ಯೋಜನೆಯಡಿಯಲ್ಲಿ, ಚಿನ್ನದ ಪದಕ ಪಡೆದವರಿಗೆ 10,000 ರೂ. ನಗದು ಬಹುಮಾನವನ್ನು ನೀಡಲಾಗುವುದು, ಇದನ್ನು 5,000 ರೂ.ಗಳಿಂದ ಹೆಚ್ಚಿಸಲಾಗಿದೆ, ಅವರ ಮಾಸಿಕ ಭತ್ಯೆಯನ್ನು 500 ರೂ.ಗಳಿಂದ 1,000 ರೂ.ಗಳಿಗೆ ದ್ವಿಗುಣಗೊಳಿಸಲಾಗಿದೆ. ಅದೇ ರೀತಿ, ಬೆಳ್ಳಿ ಪದಕ ಪಡೆದ ಚಾಲಕರಿಗೆ 2,500 ರೂ.ಗಳ ಬದಲಿಗೆ 5,000 ರೂ.ಗಳನ್ನು ನಗದು ಬಹುಮಾನವಾಗಿ ಮತ್ತು 250 ರೂ.ಗಳಿಂದ 500 ರೂ.ಗಳ ಮಾಸಿಕ ಭತ್ಯೆಯನ್ನು ಪಡೆಯುತ್ತಾರೆ.

## ರಾಹುಲ್ ಸೋನಿಯಾಗೆ ರಿಲೀಫ್

• ಮಲ್ಲಮ್ಮ ನುಡಿ ವಾರ್ತೆ ದಿಲ್ಲಿ





ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮತ್ತು ಇತರ ಐವರಿಗೆ ಸಮಾಧಾನ ತರುವ ರೀತಿಯಲ್ಲಿ ತೀರ್ಪು ನೀಡಿರುವ ದೆಹಲಿ ಕೋರ್ಟ್, ಜಾರಿ ನಿರ್ದೇಶನಾಲಯದ ಹಣ ವರ್ಗಾವಣೆ ಆರೋಪಪಟ್ಟಿಯನ್ನು ಪರಿಗಣಿಸಲು ನಿರಾಕರಿಸಿದೆ. ಈ ಸಂಬಂಧ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ನೀಡಿದ್ದ ಆದೇಶವನ್ನು ರೌಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶ (ಪಿಸಿ ಕಾಯ್ದೆ) ವಿಶಾಲ್ ಗೋಗ್ನೆ ರದ್ದುಗೊಳಿಸಿದ್ದರು. ಆದರೂ, ಆರೋಪಿಗಳಿಗೆ ಎಫ್ಐಆರ್ ದಾಖಲಿಸಲಾಗಿದೆ ಎಂದು ತಿಳಿಸಬಹುದು ಎಂದು ವಿಶೇಷ ನ್ಯಾಯಾಧೀಶ (ಪಿಸಿ ಕಾಯ್ದೆ) ವಿಶಾಲ್ ಗೋಗ್ನೆ ತೀರ್ಪು ನೀಡಿದ್ದಾರೆ.

## ಸಿಂಗನಾಳ ಶಾಲೆ ಮಕ್ಕಳಿಗಿಲ್ಲ ಶೌಚಾಲಯ

• ಮಲ್ಲಮ್ಮ ನುಡಿ ವಾರ್ತೆ ಕಾರಟಗಿ





ತಾಲೂಕಿನ ಗುಂಡೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಸಿಂಗನಾಳ ಗ್ರಾಮದಲ್ಲಿ ಬರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 3 ವರ್ಷದಿಂದ ಮಕ್ಕಳ ಶೌಚಾಲಯ ದುರಸ್ತಿಯಲ್ಲಿದೆ. ಸಿಂಗನಾಳ ಗ್ರಾ.ಪಂ. ಅಧ್ಯಕ್ಷರು ಇದ್ದರೂ ನಿರ್ಲಕ್ಷಿಸಿದ್ದಾರೆ. ಪಂಚಾಯಿತಿ ಅಧಿಕಾರಿಗಳಿಗೆ ತಿಳಿಸಿದರೂ ಯಾವುದೇ ಕ್ರಮ ತೆಗೆದುಕೊಂಡಿಲ್ಲ ಎಂದು ಪೋಷಕರು ದೂರಿದ್ದಾರೆ. ಸ್ಥಳೀಯ ಜನರ ನಿರ್ಲಕ್ಷ, ಗ್ರಾಮದ ಶಾಲೆಯಲ್ಲಿ ಒಂದರಿಂದ ಎಂಟನೇ ತರಗತಿ ಮಕ್ಕಳು ಓದುತ್ತಿದ್ದು ಅಲ್ಲಿನ ಪಾಲಕರು, ಶಾಲೆಯ ದುರಸ್ತೆ ಬಗ್ಗೆ, ಅಲ್ಲಿನ ಆಡಳಿತ ಮಂಡಲ ಬಗ್ಗೆ ನಿರ್ಲಕ್ಷಿಸುತ್ತಿದ್ದಾರೆ ಎಂಬ ದೂರು ವ್ಯಾಪಕವಾಗಿದೆ.

ನನ್ನ ಅವಧಿ ಮುಗಿದು ಎರಡು ವರ್ಷ ಆರು ತಿಂಗಳು ಕಳೆದಿದೆ. ಶಾಲೆ ಮುಖ್ಯ ಶಿಕ್ಷಕರು ಮತ್ತು ಗ್ರಾ.ಪಂ. ಅಧ್ಯಕ್ಷರು ನಿರ್ಲಕ್ಷ, ಶಾಲೆಯಲ್ಲಿ ಮಕ್ಕಳು ಊಟದ ವ್ಯವಸ್ಥೆ ಸರಿಯಾಗಿಲ್ಲ, ಮತ್ತು ಮಕ್ಕಳು ಬಯಲು ಶೌಚಾಲಯಕ್ಕೆ ಹೋಗುವ ವ್ಯವಸ್ಥೆಯಾಗಿದೆ.

–ಮಲ್ಲಿಕಾರ್ಜುನಗೌಡ, ಮಾಜಿ ಎಸ್‌ಡಿಎಂಸಿ ಅಧ್ಯಕ್ಷರು ಸಿಂಗನಾಳ

## ನರೇಗಾ ಹೆಸರು ಬದಲು, ಪ್ರಿಯಾಂಕ ಕಿಡಿ

• ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ

ಗ್ರಾಮೀಣ ಭಾಗದ ಜನರ ಜೀವನಾಡಿಯಾಗಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ರದ್ದುಪಡಿಸಿ, ಅದರ ಬದಲಿಗೆ ಹೊಸ "ವಿಬಿ–ಜಿ ರಾಮ್ ಜಿ" ಮಸೂದೆಯನ್ನು ತರಲು ಬಿಜೆಪಿ ಸರ್ಕಾರವು ಮುಂದಾಗಿದೆ. ಈ ಬಗ್ಗೆ ಲೋಕಸಭೆಯಲ್ಲಿ ಮಂಡಿಸಲಾದ ಹೊಸ ಮಸೂದೆ ವಿರುದ್ಧ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ವಾಗ್ದಾಳಿ ನಡೆಸಿದ್ದಾರೆ. ಕೇಂದ್ರ ಸರ್ಕಾರಕ್ಕೆ ಹೆಸರು ಬದಲಾಯಿಸುವ ಗೀಳು ಹಿಡಿದಿದೆ ಎಂದು ಕಿಡಿಕಾರಿದ್ದಾರೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು, ಹಳೆಯ ಮನರೇಗಾ ಕಾಯ್ದೆಯನ್ನು ರದ್ದುಪಡಿಸಿ, ಅದರ ಬದಲಿಗೆ ವಿಕಸಿತ ಭಾರತ–ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ (ಗ್ರಾಮೀಣ) (ವಿಬಿ–ಜಿ ರಾಮ್ ಜಿ) ಮಸೂದೆ, 2025'ಅನ್ನು ಮಂಡಿಸಲು ಅನುಮತಿ ಕೋರಿದ್ದಾರೆ.





## ಗವಿಸಿದ್ಧೇಶ್ವರ ಜಾತ್ರೆಯ ಸಿದ್ಧತೆ: ಡಿ.ಸಿ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

2026ರ ಜನವರಿ 5ರಂದು ನಡೆಯಲಿರುವ ಕೊಪ್ಪಳ ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವ ಅತ್ಯಂತ ವಿಜೃಂಭಣೆಯಿಂದ ಹಾಗೂ ವ್ಯವಸ್ಥಿತವಾಗಿ ನಡೆಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ದಕ್ಷಿಣ ಭಾರತದ ಕುಂಭ ಮೇಳ ಎಂದೇ ಪ್ರಸಿದ್ಧವಾದ ಶ್ರೀಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವವಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಸುಮಾರು ಲಕ್ಷ್ಯಾಂತರ ಭಕ್ತಾಧಿಗಳು ಜಾತ್ರೆಗೆ ಆಗಮಿಸುವ ನಿರೀಕ್ಷೆ ಇದೆ. ಜನರಿಗೆ ಕುಡಿಯುವ ನೀರು, ವಾಹನಗಳಿಗೆ ಪಾರ್ಕಿಂಗ್, ಜಾತ್ರೆಗೆ ವಿದ್ಯುತ್ ವ್ಯವಸ್ಥೆ ಸೇರಿದಂತೆ ಇತರೆ ಮೂಲಭೂತ ಸೌರ್ಯಕ್ರಮಗಳನ್ನು ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯಕ್ರಮ ಕ್ರಮ ಕೈಗೊಳ್ಳಬೇಕು. ಜಾತ್ರೆಯು ಶಾಂತಿಯುತವಾಗಿ ಹಾಗೂ ವ್ಯವಸ್ಥಿತವಾಗಿ ಜರುಗುವಂತೆ ಜಿಲ್ಲಾಡಳಿತದಿಂದ ಸಕಲ ರೀತಿಯ ಸಹಕಾರ ನೀಡಲಾಗುವುದು. ಈ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಸಮಿತಿಗಳನ್ನು ರಚಿಸಿ ಜವಾಬ್ದಾರಿಯನ್ನು ಹಂಚಿಕೆ ಮಾಡಲಾಗುವುದು ಎಂದು ವಿವರಿಸಿದ್ದಾರೆ.

## ರಾಜ್ಯದಲ್ಲಿ ಪ್ರತಿದಿನ ಕುರ್ಚಿ ಜಗಳ ನಡೆಯುತ್ತಿದೆ, ಅಭಿವೃದ್ಧಿಯ ಮಾತೇ ಇಲ್ಲ: ವಿಜಯೇಂದ್ರ ದೂರು

# ಮೌಲ್ಯ ಪೋಷಣೆಗೆ ಜಾತ್ರೆಗಳು ಪೂರಕ: ಹಾರಕೂಡ ಶ್ರೀ.

ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ: ಒಂದು ಗ್ರಾಮದಲ್ಲಿ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಮೌಲ್ಯಗಳು ಸದಾಕಾಲ ಹಸಿರಾಗಿರಬೇಕಾದರೆ



ಜಾತ್ರೆಗಳು, ಉತ್ಸವಗಳು ಪೂರಕ ವಾತಾವರಣ ನಿರ್ಮಿಸಿ ಕೊಡುತ್ತವೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಯಲದಗುಂಡಿ ಗ್ರಾಮದ ಶ್ರೀ ಪರಮೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ ಧರ್ಮ ಸಭೆ ಉದ್ಘಾಟಿಸಿ ಮಾತನಾಡಿದ ಶ್ರೀಗಳು ಸಮಾಜದಲ್ಲಿ ಸಾಮರಸ್ಯ,ಸಹಬಾಳ್ವೆನೋವು ನಲಿವುಗಳಲ್ಲಿ ಪರಸ್ಪರ ಸಹಕಾರ ಹಾಗೂ ಸಾಂಸ್ಕೃತಿಕವಾಗಿ ಒಂದು ಘನತತ್ವದ ಅಡಿಯಲ್ಲಿ ನಾವೆಲ್ಲರೂ ಒಂದು ಎಂಬ ಭಾವೈಕ್ಯ ಮನೋಭಾವ ಇಂತಹ ಉನ್ನತ ಮೌಲ್ಯಗಳನ್ನು ಒದಗಿಸಿಕೊಡುವಲ್ಲಿ ಜಾತ್ರೆ ಹಾಗೂ ಧರ್ಮಾಚರಣೆಗಳು ಸಹಕಾರಿಯಾಗಿವೆ.

ಜನ ಸಮೂಹದಲ್ಲಿ ಭಿನ್ನಾಭಿಪ್ರಾಯಗಳಿದ್ದರೂ ಕ್ಷೇತ್ರದ ದೈವ ಸನ್ನಿಧಿಯಲ್ಲಿ ಎಲ್ಲರೂ ಬಂದು ಸೇರುವುದರಿಂದ ಹೃದಯದಲ್ಲಿ ದೈವಿ ಭಾವ ಅರಳಿ ಎಲ್ಲರಲ್ಲಿ ಸಹೋದರತೆ ಮೂಡಿ ಬರುತ್ತದೆ.

ಐಕ್ಯತೆಯ ಭಾವದಿಂದ ಒಂದಾಗಿ ಚಂದಾಗಿ ಸರಳ ಸುಂದರವಾಗಿ ನಡೆದುಕೊಳ್ಳುವುದೇ ದೇವರಿಗೆ ನಾವು ಅರ್ಪಿಸುವ ನಿಜವಾದ ನೈವಿದ್ಯವಾಗಿದೆ.

ಯಲದಗುಂಡಿ ಗ್ರಾಮದ ಆರಾಧ್ಯ ದೈವ ಪರಮೇಶ್ವರ ಹಾಗೂ ಹಾರಕೂಡಧೀಶ ಸರ್ವರ ಬದುಕಿನಲ್ಲಿ ಶುಭವನ್ನುಂಟು ಮಾಡಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಹುಮನಾಬಾದ ಮಾಜಿ ಸಚಿವರಾದ ರಾಜಶೇಖರ ಪಾಟೀಲ ಮಾತನಾಡಿ ಶಿಕ್ಷಣ ಮತ್ತು ಧರ್ಮ ಸಂಸ್ಕಾರವಿರುವ ಗ್ರಾಮಗಳಲ್ಲಿ ಇಂತಹ ಅರ್ಥಪೂರ್ಣ ಜಾತ್ರೆಗಳು ಕಾಣಸಿಗುತ್ತವೆ. ಸಂಸ್ಕಾರವಿಲ್ಲದ ಶಿಕ್ಷಣ, ಸಂಸ್ಕಾರವಿಲ್ಲದ ವ್ಯಕ್ತಿಯಿಂದ ಯಾವುದೇ ಸಾತ್ವಿಕ ಫಲ ನಿರೀಕ್ಷಿಸಲು ಸಾಧ್ಯವಿಲ್ಲ.

ಸಂಸ್ಕಾರದಿಂದ ಕೂಡಿದ ವ್ಯಕ್ತಿ, ಕುಟುಂಬ, ಸಮಾಜ, ರಾಷ್ಟ್ರ ಇವು ಮಾನವ ಜನಾಂಗದ ಸರ್ವತೋಮುಖ ವಿಕಾಸದ ಮೂಲ ಆಶಯವಾಗಿದೆ ಎಂದು ನುಡಿದರು. ಕೆ. ಡಿ. ಪಿ .ನಿರ್ದೇಶಕರಾದ ಶಿವಕುಮಾರ ಶಟಗಾರ, ಯುವ ಮುಖಂಡರಾದ ರತಿಕಾಂತ ಕೊಹಿನೂರ, ಪ್ರದೀಪ ವಾತಡೆ ಮಾತನಾಡಿದರು. ಹಿರೇನಾಗಾಂವ ಪೂಜ್ಯಶ್ರೀ ಶಾಂತಲಿಂಗ ಮಹಾಸ್ವಾಮಿಗಳು, ಕಾಡ ಅಧ್ಯಕ್ಷ ಬಾಬು ಹೊನ್ನಾ ನಾಯಕ, ಮಲ್ಲಿನಾಥ ಹಿರೇಮಠ ಹಾರಕೂಡ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಬೋಸಗಾ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಷ್ಮಾ ಚಾವಾಣ, ಶರಣು ಪವಾಡಶೆಟ್ಟಿ, ಸಂತೋಷ ಚವಾಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ ಹಾಡಿದರು. ಪರಮೇಶ್ವರ ಗಿಲಕೆ ಸ್ವಾಗತಿಸಿದರು. ನವಲಿಂಗ ಪಾಟೀಲ ನಿರೂಪಿಸಿದರು. ಮಲ್ಲಪ್ಪ ಕೋಟೆ ವಂದಿಸಿದರು.

# ಶಾಹಿನ್ ಶಿಕ್ಷಣ ಸಂಸ್ಥೆಗೆ ಬಾಲ ವಿಕಾಸ ಆಕಾಡೆಮಿ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ ಬೀದರ್: ಬೆಳಗಾವಿ ಸುವರ್ಣ ಸೌಧದಲ್ಲಿ ಮಂಗಳವಾರ ನಡೆದ ಭವ್ಯ ಸಮಾರಂಭದಲ್ಲಿ ಬೀದರಿನ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹಕ್ಕೆ ಪ್ರತಿಷ್ಠಿತ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಂಸ್ಥೆಯ ಅಧ್ಯಕ್ಷ ಡಾ.ಅಬ್ದುಲ್ ಖದೀರ್ ಅವರು ಅಕಾಡೆಮಿಯ ಪ್ರಶಸ್ತಿ ಸ್ವೀಕರಿಸಿದರು.ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪ್ರಶಸ್ತಿ ಪ್ರದಾನ ಮಾಡಿದರು.ಅಕಾಡೆಮಿ ಅಧ್ಯಕ್ಷ ಸಂಗಮೇಶ್ ಬಬಲೇಶ್ವರ್, ಇತರ ಪ್ರಶಸ್ತಿ ಪುರಸ್ಕಂತರು, ಅಧಿಕಾರಿಗಳು ಮತ್ತು ಇತರರು ಉಪಸ್ಥಿತರಿದ್ದರು.

ಶಾಲೆ ಬಿಟ್ಟ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ನೀಡುವ ಮೂಲಕ ಮುಖ್ಯವಾಹಿನಿಗೆ ತರಲು ಶೈಕ್ಷಣಿಕ ಐಸಿಯು ಎಂಬ ವಿಶೇಷ ಕಲಿಕಾ ವ್ಯವಸ್ಥೆಯನ್ನು ರೂಪಿಸಿರುವ ಶಾಹೀನ್ ಸಂಸ್ಥೆಯ ವಿಶಿಷ್ಟ ಕಾರ್ಯವನ್ನು ಗುರುತಿಸಿ, 2023–24 ನೇ ಸಾಲಿನ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಶಾಹೀನ್ ಸಂಸ್ಥೆಯು ಸುಮಾರು 15 ವರ್ಷಗಳಿಂದ ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳ ಮೇಲೆ ವಿಶೇಷ ನಿಗಾ ಇಡುವ ಅಕ್ಯಾಡೆಮಿಕ್ ಐಸಿಯು ಕಾರ್ಯಕ್ರಮ ನಡೆಸುತ್ತಿದೆ. ಪ್ರತಿ ವರ್ಷ ಸರಾಸರಿ 800 ವಿದ್ಯಾರ್ಥಿಗಳು ಈ ಕಾರ್ಯಕ್ರಮದ ಪ್ರಯೋಜನ ಪಡೆಯುತ್ತಾರೆ. ಅರ್ಧಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಉಚಿತ ಶಿಕ್ಷಣ ನೀಡುತ್ತಿರುವುದು ಈ ಕಾರ್ಯಕ್ರಮದ ವಿಶೇಷ. 12 ರಿಂದ 20 ವರ್ಷ ವಯಸ್ಸಿನ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಬಹುದು

ಯಾವುದೇ ತರಗತಿಯಿಂದ ಹೊರಗುಳಿದ ಯಾವುದೇ ವಿದ್ಯಾರ್ಥಿ ಈ ಕಾರ್ಯಕ್ರಮಕ್ಕೆ ಸೇರಬಹುದು. ಪ್ರವೇಶ ಪರೀಕ್ಷೆ ಇರುವುದಿಲ್ಲ. ಜೊತೆಗೆ ಪ್ರವೇಶಕ್ಕೆ ಸಮಯದ ನಿಗದಿ ಇಲ್ಲ. ವರ್ಷದ ಯಾವುದೇ ಸಮಯದಲ್ಲಿ ಪ್ರವೇಶ ಪಡೆಯಲು ಇಲ್ಲಿ ಅವಕಾಶ ಇದೆ. ವಿದ್ಯಾರ್ಥಿಗಳು ಎಲ್ಲಾ ವಿಷಯಗಳಲ್ಲಿ, ವಿಶೇಷವಾಗಿ ಅವರು ದುರ್ಬಲರಾಗಿರುವ ವಿಷಯಗಳಲ್ಲಿ ಒಂದು ವರ್ಷದ ತೀವ್ರ ತರಬೇತಿಯನ್ನು ಪಡೆಯುತ್ತಾರೆ. ಕರ್ನಾಟಕದ ಹೊರಗಿನ ವಿದ್ಯಾರ್ಥಿಗಳಿಗೆ ಕನ್ನಡದಲ್ಲಿಯೂ ತರಬೇತಿ ನೀಡುವ ವ್ಯವಸ್ಥೆ



ಶಾಹೀನ್ ಸಂಸ್ಥೆಯಲ್ಲಿದೆ.

ತರಬೇತಿ ಮುಗಿದ ನಂತರ, ವಿದ್ಯಾರ್ಥಿಗಳ ವಯಸ್ಸು ಮತ್ತು ಕಲಿಕಾ ಸಾಮರ್ಥ್ಯದ ಆಧಾರದ ಮೇಲೆ ವಿವಿಧ ತರಗತಿಗಳಲ್ಲಿ ಪ್ರವೇಶ ನೀಡಲಾಗುತ್ತದೆ. ಮುಂದಿನ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅವಕಾಶ ನೀಡಲಾಗುವುದು.

ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರ ಈ ವಿದ್ಯಾರ್ಥಿಗಳು ಪಿಯುಸಿ ಸೇರಲು ಸಿದ್ಧರಾಗುತ್ತಾರೆ.

ಶಾಹೀನ್ ಶಿಕ್ಷಣ ಸಂಸ್ಥೆಯು ನಿಧಾನ ಕಲಿಯುವವರಿಗೆ ಮತ್ತು ಮದರಸಾ ಪದವೀಧರರಿಗೆ ಇನ್ನೆರಡು ರೀತಿಯ ಕಾರ್ಯಕ್ರಮಗಳನ್ನು ನಡೆಸುತ್ತದೆ. ಪಿಯುಸಿ ಅಧ್ಯಯನ ಮಾಡಲು ಕಷ್ಟಪಡುತ್ತಿರುವ ವಿದ್ಯಾರ್ಥಿಗಳಿಗಾಗಿ ಫೌಂಡೇಶನ್ ಕೋರ್ಸ್ ಇದೆ. ಮೂಲ ವಿಷಯಗಳಲ್ಲಿ, ವಿಶೇಷವಾಗಿ ಭಾಗಗಳು ಮತ್ತು ಗಣಿತದಲ್ಲಿ ತರಬೇತಿ ನೀಡುವುದು ಫೌಂಡೇಶನ್ ಕೋರ್ಸ್ ವಿಶೇಷತೆಯಾಗಿದೆ.

ಹಿಫ್ಜುಲ್ ಕುರಾನ್ ಪ್ಲಸ್ ಕೋರ್ಸ್ ನಲ್ಲಿ ಮದರಸಾ ಪದವೀಧರರಿಗೆ ವಿಜ್ಞಾನ, ಗಣಿತ ಮತ್ತು ಭಾಗಗಳಂತಹ ಮುಖ್ಯವಾಹಿನಿಯ ವಿಷಯಗಳಲ್ಲಿ ತರಬೇತಿ ನೀಡಲಾಗುತ್ತದೆ. ಆರು ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ನಿಯೋಜಿಸಲಾಗುತ್ತದೆ. ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ನಿಧಾನ ಕಲಿಕೆ ಇರುವ ವಿದ್ಯಾರ್ಥಿಗಳು ಮತ್ತು ಮಧ್ಯದಲ್ಲಿ ಶಾಲೆ ಬಿಟ್ಟವರು ಹೀಗೆ ಎಲ್ಲರ ಮೇಲೆ ಸಮಾನ ಪ್ರಭಾವ ಬೀರುವುದು ಈ ಕೋರ್ಸ್ ನ ಮತ್ತೊಂದು ವಿಶೇಷತೆ.

ಬೀದರ ನಗರದಲ್ಲಿರುವ ಮುಖ್ಯ ಕ್ಯಾಂಪಸ್ ನಲ್ಲಿ ವಿವಿಧ ಕೋರ್ಸ್ ಗಳಲ್ಲಿ ಸುಮಾರು 10,000 ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದಾರೆ. ಇವರನ್ನು ಹೊರತುಪಡಿಸಿ ವಿಶೇಷ ವಿದ್ಯಾರ್ಥಿಗಳಿಗಾಗಿ ಮೂರು ಕಾರ್ಯಕ್ರಮಗಳು ಇದ್ದು, ಇಲ್ಲಿ ಒಟ್ಟು 7500 ವಿದ್ಯಾರ್ಥಿಗಳಿದ್ದಾರೆ. ಶಾಹೀನ್ ಸಂಸ್ಥೆಯು ರಾಜ್ಯ ಸರ್ಕಾರದ ಅಲ್ಪಸಂಖ್ಯಾತ ಇಲಾಖೆಯ ಸಹಯೋಗದೊಂದಿಗೆ ಈ ಕೋರ್ಸ್ ಅನ್ನು ನಡೆಸುತ್ತಿದೆ.

ದೇಶಾದ್ಯಂತದ ಮದರಸಾಗಳಿಂದ ಪದವೀಧರರಾದ ಸುಮಾರು 5,000 ವಿದ್ಯಾರ್ಥಿಗಳು ಹಿಫ್ಜುಲ್ ಕುರಾನ್ ಪ್ಲಸ್ ಕೋರ್ಸ್ ನಲ್ಲಿ ತರಬೇತಿ ಪಡೆಯುತ್ತಿದ್ದಾರೆ. ಈ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಪ್ರಾಯೋಜಕತ್ವ ನೀಡಿದೆ.

# ಜ.2ರಂದು ಅಕ್ಕಮಹಾದೇವಿ ಚಲನ ಚಿತ್ರ ಬಿಡುಗಡೆ: ವಿಷ್ಣುಕಾಂತ ಬಿ.ಜೆ



ಮಲ್ಲಮ್ಮ ನುಡಿ ವಾರ್ತೆ ಬೀದರ್: ಜನೆವರಿ 2ರಂದು ಬೀದರ್ ನಗರದ ಸಪ್ನಾ ಮಲ್ಟಿಪ್ಲೆಕ್ಸ್ ಚಿತ್ರಮಂದಿರದಲ್ಲಿ ಅಕ್ಕಮಹಾದೇವಿಯ ಚಲನಚಿತ್ರ ಬಿಡುಗಡೆಗೊಳ್ಳಲಿದೆ ಎಂದು ಚಿತ್ರದ ನಿರ್ಮಾಪಕ,ನಿರ್ದೇಶಕರು ಹಾಗೂ ನಟ ವಿಷ್ಣುಕಾಂತ ಬಿ.ಜೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಗಳವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈ ತಿಂಗಳ 19ರಂದು ಚಲನಚಿತ್ರ ಬಿಡುಗಡೆಗೊಳಿಸಲು ತಿರ್ಮಾನಿಸಲಾಗಿತ್ತು. ಆದರೆ ನಮ್ಮ ಉತ್ತರ ಕರ್ನಾಟಕ ಭಾಗದಲ್ಲಿ ಎಳ್ಳ ಅಮಾವಾಸ್ಸೆ ಬಹು ಅರ್ಥಪೂರ್ಣ ಅಷ್ಟೆ ಅದ್ದೂರಿಯಾಗಿ ಆಚೆಇಸುವ ಹಿನ್ನೆಲೆಯಲ್ಲಿ ಇದನ್ನು ಮುಂದೂಡಿ ಜನೆವರಿ 2 2026ರಂದು ಕಲ್ಯಾಣ ಕರ್ನಾಟಕದ ಕಿರಿಟ ಬೀದರ್‌ನಿಂದಲೇ ಚಿತ್ರ ಬಿಡುಗಡೆಗೊಳಿಸುವ ಇರಾದೆ ಹೊಂದಿದ್ದೇವೆ. ನಾನು ಕೌಶಿಕ ರಾಜನ ಪಾತ್ರದಲ್ಲಿ ಅಭಿನಯಿಸಿದ್ದು, ನಟಿ ಸುಲಕ್ಷಾ ಅಕ್ಕಮಹಾದೇವಿಯ ಪಾತ್ರದಲ್ಲಿ ಅಭಿನಯಿಸಿದ್ದಾರೆ. ಜುನಿಯರ್ ಅಕ್ಕಮಹಾದೇವಿಯಾಗಿ ದೀಕ್ಷಾ ಹಾಗೂ ನಿಧಿ ಪಾತ್ರ ನಿರ್ವಹಿಸಿದ್ದಾರೆ. ಇವರೆಲ್ಲರು ಬೀದರ್ ಜಿಲ್ಲೆಯವರೆ ಆಗಿದ್ದು, ಸುಮಾರು 30ಕ್ಕೂ ಹೆಚ್ಚು ಕಲಾವಿದರು ಬೀದರ್ ಜಿಲ್ಲೆಯವರಾಗಿರುವುದು ಅಭಿಮಾನದ ಸಂಗತಿ. ಈ ಎಲ್ಲ ಕಲಾವಿದರು ಪಾತ್ರಕ್ಕೆ ತಕ್ಕಂತೆ ಅಭಿನಯಿಸಿದ್ದಾರೆ, ಈ ಕಲಾವಿದರು ಹೊಸಬರಾಗಿದ್ದಾರೆ ಎನ್ನುವುದು ತೆರೆಯಲ್ಲಿ ಕಾಣುವುದಿಲ್ಲ. ಒಳ್ಳೆಯ ಅನುಭವಿ ಕಲಾವಿದರಂತೆ ಅಭಿನಯಿಸಿದ್ದಾರೆ ಎಂದರು.

ಈ ಚಿತ್ರಕ್ಕೆ ಸಂಗೀತ ನೀಡಿರುವ ಪಳನಿ ಡಿ ಸೇನಾಪತಿ ಖ್ಯಾತ ಸಂಗೀತ ನಿರ್ದೇಶಕ ಹಂಸಲೇಖ ಅವರ ಗರಡಿಯಲ್ಲಿ ಸುಮಾರು 25 ವರ್ಷಗಳಿಗೂ ಅಧಿಕ ಕಾಲ ಕಾರ್ಯನಿರ್ವಹಿಸಿದ್ದಾರೆ. ಹೀಗಾಗಿ ಜಗನ್ಮಾತೆ ಅಕ್ಕಮಹಾದೇವಿಯ ಚಲನಚಿತ್ರಕ್ಕೆ ಬೇಕಾಗಿರುವ ನನ್ನ ಅಣತಿಯಂತೆ ಸಂಗೀತ ನೀಡಿರುತ್ತಾರೆ. ಇನ್ನೊಂದು ವಿಶೇಷ ಸಂಗತಿ ಎಂದರೆ, ಈ ಚಲನಚಿತ್ರದಲ್ಲಿ ಬಸವಣ್ಣ ಹಾಗೂ ಅಕ್ಕಮಹಾದೇವಿಯ 22 ವಚನಗಳಿಗೆ ರಾಗ ಸಂಯೋಜನೆ ಮಾಡಲಾಗಿದೆ. ನಾನು ಬರೆದಿರುವ ನಾಲ್ಕು ಸಾಂದರ್ಭಿಕ ಹಾಡುಗಳಿವೆ. ಇದೊಂದು ಸಂಗಿಥ ನಿರ್ದೇಶಕನ ಅತ್ಯತ್ತಮ ಚಿತ್ರವೆಂದು ಪರಿಗಣಿಸಲಾಗಿದೆ. ಖ್ಯಾತ ಗಾಯಕ ರಾಜೇಶ ಕೃಷ್ಣ ಸಹ ಗಾಯನ ಮಾಡಿದ್ದಾರೆ. ಇವರ ಗಾಯನಕ್ಕೆ ಖ್ಯಾತ ಕೋರಿಯೊಗ್ರಾಫರ್ ಮದನ ಹರಡಿಯವರದ್ದಾಗಿದೆ. ಛಾಯಾಗ್ರಾಹಕ ರವಿ ಸೂವರ್ಣ ಸಂಕಲನ ಅಮಿತ ಜವಳಕರ್ ಡಿ.ಐ ಅಮಿತಾವ ಡೆಬ್, ಸಿ ಚಂದ್ರಶೇಖರ ಸೌಂಡ್ ಇಂಜಿನಿಯರ್ ಆಗಿದ್ದಾರೆ. ಪ್ರಸಾದ ಲ್ಯಾಬ್‌ನಲ್ಲಿ ಧ್ವನಿ ಮುದ್ರಣಗೊಂಡಿರುತ್ತದೆ. ನನ್ನ ನಿರ್ದೇಶನದಲ್ಲಿ ನಿರ್ಮಿಸಲ್ಪಟ್ಟ ಈ ಚಲನಚಿತ್ರಕ್ಕೆ ಉಮೇಶ ಸಲಗರ ಸಹ ನಿರ್ದೇಶಕನಾಗಿದ್ದು, ನಿಖಿಲರಾಜ್ ಹಾಗೂ ಕೇದಾರನಾಥ ಸ್ವಾಮಿ ಸಹಾಯಕ ನಿರ್ದೇಶಕರಾಗಿದ್ದಾರೆ. ಅಲ್ಲಮ ಪ್ರಭುವಿನ ಪಾತ್ರದಲ್ಲಿ ಸುಚೇಂದ್ರ ಪ್ರಸಾದ, ಮಂತ್ರ ವಸಂತಕನ ಪಾತ್ರದಲ್ಲಿ ತಬಲಾನಾಣಿ, ಅಕ್ಕಮಹಾದೇವಿಯ ತಾಯಿಯ ಪಾತ್ರದಲ್ಲಿ ಮೈಸೂರು ಹಿಲನ್ ಹಾಗೂ ತಂದೆಯ ವೈಜಿನಥ ಬಿರಾದಾರ ಜ್ಯಾಂತಿ ಅಭಿನಯಿಸಿದ್ದಾರೆ. ಇದು ನನ್ನ ಐದನೇ ಚಲನಚಿತ್ರವಾಗಿದ್ದು, ಇದು ಸಂಪೂರ್ಣ ಶರಣ ಸಂಪ್ರದಾಯ, ಸಮಾಜ ಸುಧಾರಣೆ ಹಾಗೂ ಧಾರ್ಮಿಕ ಚಿಂತನೆಯ ನೆಲಗಟ್ಟಿನಲ್ಲಿ ನಿಂತಿದೆ ಎಂದು ವಿಷ್ಣುಕಾಂತ ತಿಳಿಸಿದರು.

ಭಾರತೀಯ ಬಸವ ಬಳಗದ ರಾಜ್ಯಾಧ್ಯಕ್ಷ ಬಾಬುವಾಲಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ ಚನಶೆಟ್ಟಿ, ರಾಷ್ಟ್ರೀಯ ಬಸವದಳದ ಜಿಲ್ಲಾಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ಬಸವಕೇಂದ್ರ ಜಿಲ್ಲಾಧ್ಯಕ್ಷ ಶರಣಪ್ಪ ಮಿಠಾರೆ, ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ರಾಜೇಂದ್ರಕುಮಾರ ಗಂದಗೆ ಪತ್ರಿಕಾಗೋಷ್ಠಿಯಲ್ಲಿದ್ದರು.


ಕರ್ನಾಟಕ ಸರ್ಕಾರ

ಪ್ರಧಾನ ಮಂತ್ರಿ ಮತ್ತು ಸಂಪದ ಧರ್ತಿ ಆಭಾ ಜನ ಜಾತಿ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ

ಮೀನುಗಾರಿಕೆ ಇಲಾಖೆ, ಬಸವಕಲ್ಯಾಣ ಕಚೇರಿಯಿಂದ

ಅರ್ಜಿ ಅಹ್ವಾನಿಸಲಾಗಿದೆ

ಬೀದರ ಜಿಲ್ಲೆಯ ಬಸವಕಲ್ಯಾಣ,ಹುಮನಾಬಾದ, ಚಿಟ್ಟಗುಪ್ಪಾ, ತಾಲ್ಲೂಕಿನ 2025-26 ನೇ ಸಾಲಿನ ಪ್ರಧಾನ ಮಂತ್ರಿ ಮತ್ತ ಸಂಪದ ಯೋಜನೆಡಿ ಧರ್ತಿ ಆಭಾ ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನದಡಿ ಪರಿಶಿಷ್ಟ ಪಂಗಡದವರಿಗೆ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್ ನೊಂದಿಗೆ ದ್ವಿ ಚಕ್ರ ವಾಹನ, ಐಸ್ ಬಾಕ್ಸ್ ನೊಂದಿಗೆ ತ್ರಿ ಚಕ್ರ ವಾಹನ ಮತ್ತು ಜೀವಂತ ಮೀನು ಮಾರಾಟ ಕೇಂದ್ರಗಳನ್ನು ಪಿ.ಎಂ.ಎಂ.ಎಸ್.ವೈ ಘಟಕ ವೆಚ್ಚದಂತೆ ಸ್ಥಾಪಿಸಲು ಸಹಾಯಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಬಸವಕಲ್ಯಾಣ ತಾಲೂಕಿನ ಗ್ರಾಮಗಳು.1) ಖಾನಾಪೂರ 2)ಗೋರ್ಟಾ3) ಕೌಡಿಯಾಳ 4)ಮಿರ್ಜಾಪೂರ 5) ಹೇಡಾ ಕೆ

ಹುಮನಾಬಾದ ತಾಲೂಕಿನ ಗ್ರಾಮಗಳು.1)ಕಬ್ಬಿರಬಾದವಾಡಿ 2) ಶಂಕರದಗಂಜ 3)ಮಲ್ಕಾಪೂರ 4) ಘಾಟಬೋರಳಾ 5) ಘೋಡವಾಡಿ 6) ಹುಸನಾಳ 7)ಕುಮಾರಚಿಂಚೋಳಿ 8) ಹಂದಿಕೇರಾ 9) ಸುಲ್ತಾನಬಾದ 10)ದುಬಲಗುಂಡಿ 11)ಓತಗಿ 12) ಚಂದನಹಳ್ಳಿ 13) ಸೋನಕೇರಾ 14) ಹುಬ್ಬನಕೇರಾ 15) ಕನಟ್ಟಾ 16) ಸೇಡೋಳ 17) ಚೀನಕೇರಾ 18) ಜಲಸಂಗಿ 19) ನಮದಪೂರ 20) ಸಿಂಧಬಂದಗಿ 21) ಧಾರುಳಗಿ 22)ಅಮೀಬಾದ 23)ಹೀಲಾಪೂರ 24) ಮರಖಲ್ 25) ಆಲೂರ 26) ಬೇನಚಿಂಚೋಳಿ 27) ಮದರಗಾಂವ 28) ನಿಂಬೂರ 29) ಸೀತಳಗೇರಾ 30) ಮೋಳಕೇರಾ 31) ಗಡವಂತಿ 32) ಮಾಣಿಕನಗರ 33) ಧುಮ್ಮನಸೂರ 34) ನಂದಗಾಂವ 35) ಕಪ್ಪರಗಾಂವ 36) ಹುಡಗಿ 37) ಮುಸ್ತಾಪೂರ 38) ಹಳ್ಳಿಖೇಡ ಕೆ 39) ಕಲ್ಲೂರ 40) ಕಟ್ಟಹಳ್ಳಿ 41) ಚಿತಕೋಟಾ 42) ಬೋರಪಳ್ಳಿ 43) ಹಣಕುಣಿ 44) ಸಿಂಧಕೇರಾ.

ಚಿಟ್ಟಗುಪ್ಪಾ ತಾಲೂಕಿನ ಗ್ರಾಮಗಳು 1) ಹಿಪ್ಪರಗಾ 2) ವಡನಕೇರಾ 3) ತಾಳಮಡಗಿ 4) ಕಂದಕೂಳ 5) ಮಾಡಬೂಳ 6) ಶಾಮತಾಬಾದ 7) ಇಟ್ಟಗಿ 8) ವಳಖಿಂಡಿ 9) ರಾಮಪೂರ 10) ಮುದೋಳ 11) ಕೊಂಡಬಲ್ 12) ಮುಸ್ತರಿ 13) ಬೇಳಕೇರಾ 14) ಬನ್ನಳಿ 15) ಮಂಗಲಗಿ 16) ನಾಗಕೇರಾ 17) ನಿರ್ಣಾ 18) ಉಡಬಾಳ 19) ಮುತ್ತಂಗಿ 20) ಬಸಿರಾಪೂರ 21) ಮದರಗಿ 22) ಭಾದಲಾಪೂರ 23) ಬೋರಳಾ 24) ಮುನ್ನಾಖಿ 25) ಮೀನಕೇರಾ 26) ಬೇಮಳಖೇಡಾ 27) ಪೋಳಕಪಳ್ಳಿ 28) ಕರಕಪಳ್ಳಿ 29) ಚಾಂಗಲೇರಾ 30) ಕರಕನಳ್ಳಿ 31) ಉಡಮನಳ್ಳಿ

ಗ್ರಾಮಗಳಿಗೆ ಯೋಜನೆಯಡಿ ಪರಿಶಿಷ್ಟ ಪಂಗಡಕ್ಕೆ (ಎಸ್.ಟಿ) ವರ್ಗಕ್ಕೆ ಸೇರಿದವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ನಿಗದಿತ ಗುರಿಗಳನ್ವಯ ಹಾಗೂ ಕೇಂದ್ರ ಸರ್ಕಾರವು ನೀಡಿರುವ ಪಟ್ಟಿಯಲ್ಲಿರುವ ಗ್ರಾಮಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಆಸಕ್ತರು ಅರ್ಜಿಯನ್ನು ದಿನಾಂಕ:16/12/2025 ರಿಂದ 31/12/2025 ಒಳಗಾಗಿ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಆಸಕ್ತ ಅರ್ಜಿದಾರರು ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ಬಸವಕಲ್ಯಾಣ ರವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಬಸವಕಲ್ಯಾಣ ಮೀನುಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಿ

ಮೀನುಗಾರಿಕೆ ಸಹಾಯಕ ನಿರ್ದೇಶಕರು

ಬಸವಕಲ್ಯಾಣ


# ಎನ್.ಧರ್ಮಸಿಂಗ್ ಕ್ರಿಕೆಟ್ ಟೂರ್ನಮೆಂಟ್ 9ನೇ ಆವೃತ್ತಿಗೆ ಚಾಲನೆ ನೀಡಿರುವ:–ಚಂದ್ರಸಿಂಗ್



ಮಲ್ಲಮ್ಮ ನುಡಿ

ಬೀದರ್ ಡಿ 17:– ಮಾಜಿ ಮುಖ್ಯಮಂತ್ರಿ ಎನ್.ಧರ್ಮಸಿಂಗ್ ಸ್ಮರಣಾರ್ಥ ನಗರದ ನೆಹರೂ ಕ್ರೀಡಾಂಗಣದಲ್ಲಿ ಮಂಗಳವಾರ 9ನೇ ಆವೃತ್ತಿಗೆ ಕ್ರಿಕೆಟ್ ಟೂರ್ನಮೆಂಟಗೆ ಬೀದರ್ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಮುಖಂಡ ಚಂದ್ರಾಸಿಂಗ್ ಅವರು ಚಾಲನೆ ನೀಡಿದರು,

ಈ ಟೂರ್ನಿಯಲ್ಲಿ 32 ಕ್ರಿಕೆಟ್ ತಂಡಗಳು ನೋಂದಾಯಿಸಿಕೊಂಡಿವೆ.

ಸೋಮವಾರದಿಂದ ಆರಂಭವಾಗಿರುವ ಟೂರ್ನಿಯ ಫೈನಲ್ ಪಂದ್ಯ ಡಿ.24ರಂದು ನಗರದ ನೆಹರೂ ಕ್ರೀಡಾಂಗಣದಲ್ಲಿ ಕೊನೆಗೊಳ್ಳಲಿದೆ,

ಫೈನಲ್ ವಿಜೇತ ತಂಡಕ್ಕೆ 1 ಲಕ್ಷ, ರನ್ನರ್ ಅಪ್ ತಂಡಕ್ಕೆ ರೂ.50 ಸಾವಿರ ನಗದು ಹಾಗೂ ಟ್ರೋಫಿ ದೊರೆಯಲಿದೆ ಎಂದು ಚಂದ್ರಾಸಿಂಗ್ ಹೇಳಿದ್ದಾರೆ. ಉತ್ತಮ ಬ್ಯಾಟ್ಸ್‌ಮನ್ ಹಾಗೂ ಉತ್ತಮ ಬೌಲರ್ ಪ್ರಶಸ್ತಿ ಕೂಡ ಕೊಡಲಾಗುವುದು ಎಂದಿದ್ದಾರೆ.

ಇದೇ ಸಂದರ್ಭದಲ್ಲಿ ಹಿರಿಯರಾದ ನಾರಾಯಣರಾವ್ ಭಂಗಿ, ಇಸುಫ್ ಅಲಿ ಜಮಾದಾರ, ಗೌಸುದ್ದೀನ್ ಕಾಮತಾಣಾ, ಮೌಲಾ ಭಾಗ್ವಾನ್ ಮನ್ನಾಎಖೆಟ್ಟಿ, ತಿಪ್ಪಣ್ಣ ಪಾಟೀಲ್, ಮಾರುತಿ ಮಾಸ್ಟರ್, ಮಕಬುಲ್ ನಿರ್ಣಾ, ಲಕ್ಷ್ಮಣ ಸಾತನೂರು, ನಾಸಿರ್ ಭಾಗ್ವಾನ್, ಅರುಣ್ ಆಣದೂರ, ಜೆಮ್ಸ್ ಕೊಳಾರ್, ಶಿವಕುಮಾರ ಕಾಂಗ್ರೆಸ್ ಯೂಥ್ ಲೀಡರ್ ಮನ್ನಾಎಖೆಳ್ಳಿ, ಪ್ರಭಾವತಿ ಕರ್ಕನಳ್ಳಿ, ಗಫೂರ್ ಚಿಟ್ಟಾ, ಅನೇಕ ಕಾಂಗ್ರೆಸ್ ಮುಖಂಡರು ಹಾಗೂ ಚಂದ್ರಸಿಂಗ್ ಅಭಿಮಾನಿಗಳು ಭಾಗವಹಿಸಿದರು,

# ದಲಿತ ಸಂಘರ್ಷ ಸಮಿತಿ ಜಿಲ್ಲಾ ಪದಾಧಿಕಾರಿಗಳ ನೇಮಕ



ಮಲ್ಲಮ್ಮ ನುಡಿ ವಾರ್ತೆ ಬೀದರ್: ದಲಿತ ಸಂಘರ್ಷ ಸಮಿತಿ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳನ್ನು ಇತ್ತೀಚೆಗೆ ಬೀದರ್ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ನೇಮಕ ಮಾಡಲಾಗಿದೆ.

ಸಭೆಯ ನಿರ್ಣಯದಂತೆ ಸಹ ಸಂಚಾಲಕರಾಗಿ ಗುಂಡಪ್ಪಾ ಜ್ಯೋತಿ, ಅನಿಲ್ ಚಾಂಬಳೆ, ಪ್ರಕಾಶ್ ಬಿ ಕೆರೂರಕರ್, ಅನಿಲ್ ಕುಮಾರ್ ಬಡಿಗೇರ್, ಗುಂಡಪ್ಪಾ ದಂಡೆ, ಹಾಗೂ ಖಜಾಂಚಿಯಾಗಿ ದಿಲೀಪ್ ಮೇತ್ರೆ ಅವರನ್ನು ಆಯ್ಕೆ ಮಾಡಲಾಗಿದೆ.

ದಲಿತ ಸಮುದಾಯದ ಹಕ್ಕುಗಳ ರಕ್ಷಣೆ, ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಸಂವಿಧಾನಾತ್ಮಕ ಮೌಲ್ಯಗಳ ಜಾಗೃತಿಗಾಗಿ ಸಂಘಟಿತ ಹೋರಾಟ ನಡೆಸುವ ಬದ್ಧತೆಯನ್ನು ನೂತನ ಪದಾಧಿಕಾರಿಗಳು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಧನರಾಜ ಮುಸ್ತಾಪುರ, ಸಹ ಸಂಚಾಲಕ ವಿಜಯಕುಮಾರ್ ಐಹೊಳೆ, ಔರಾದ ತಾಲೂಕು ಸಂಚಾಲಕ ಜೈಪ್ರಕಾಶ್ ಅಷ್ಟೂರೆ, ಸೇರಿದಂತೆ ಹಿರಿಯ ಮುಖಂಡರು, ಕಾರ್ಯಕರ್ತರು ಹಾಗೂ ಸಮಾಜದ ಗಣ್ಯರು ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಶುಭಾಶಯ ಕೋರಿದರು.

## ಅರ್ಹ ಮಹಿಳಾ ವ್ಯಾನ್ ಚಾಲಕರು ಬೇಕಾಗಿದ್ದಾರೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: 2025-26ನೇ ಸಾಲಿನ ಸರ್ಕಾರಿ ಬಾಲಮಂದಿರದ ಮಕ್ಕಳನ್ನು ಶಾಲಾ/ಕಾಲೇಜು, ಆಸ್ಪತ್ರೆ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಬಾಲಕಿಯರನ್ನು ಕರೆದುಕೊಂಡು ಹೋಗಿ ಬರಲು ಸ್ವಂತ ಒಮಿನಿ ವ್ಯಾನ್ ಉಳ್ಳ ಮಹಿಳಾ ಚಾಲಕಿಯರ ಅವಶ್ಯಕತೆ ಇರುದರಿಂದ ಅರ್ಹ ಮಹಿಳಾ ಚಾಲಕರು 2025ರ ಡಿಸೆಂಬರ್ 20 ರೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಅಧೀಕ್ಷಕರು, ಸರ್ಕಾರಿ ಬಾಲಕಿಯರ ಬಾಲಮಂದಿರ, ಕಲಬುರಗಿ, ಇವರು ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗಾಗಿ ಅಧೀಕ್ಷಕರು. ದೂರವಾಣಿ ಸಂಖ್ಯೆ: 08472-244756 ಮಹಾತ್ಮಾ ಗಾಂಧಿ ಕಾಲೋನಿ, ಎದುರುಗಡೆ, ಪಿ.ಎಫ್.ಎಸ್ ಹಿಂದುಗಡೆ, ಆಳಂದ ರೋಡ, ಸರ್ಕಾರಿ ಬಾಲಕಿಯರ ಬಾಲಮಂದಿರಕ್ಕೆ ಸಂಪರ್ಕಿಸಲು ಕೋರಲಾಗಿದೆ.

## ಬೀದಿ ನಾಯಿಗಳ ಪಾಲನೆ ಮತ್ತು ಪೋಷಣೆಗೆ: ದರಪಟ್ಟಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಸೇಡಂ. ಪುರಸಭೆಯ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳ ಪಾಲನೆ ಮತ್ತು ಪ್ರಾಣಿಗಳ ರಕ್ಷಣಾ ಸೇವೆಗಳನ್ನು ನೀಡಲು ಅನುಭವ ಹೊಂದಿರುವ ಅರ್ಹ ಅನುಭವಿ ಸರ್ಕಾರೇತರ ಸಂಸ್ಥೆಗಳು (ಎನ್‌ಜಿ) ಗಳಿಂದ ಮುಚ್ಚಿದ ಲಕೋಟೆಯಲ್ಲಿ ಸೀಲ್ ಬಂದ ಕೋಟೆಶನಗಳನ್ನು ಆಹ್ವಾನಿಸಲಾಗಿದೆ ಎಂದು ಸೇಡಂ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.ಬೀದಿ ನಾಯಿಗಳಿಗೆ ಪ್ರತಿ ನಿತ್ಯ ಆಹಾರ ಮತ್ತು ನೀರು ನೀಡುವುದು, ಲಸಿಕೆ ನಿಯಮಿತ ಆರೋಗ್ಯ ಪರಿಶಿಲನೆ ಮತ್ತು ಪ್ರಾಥಮಿಕ ಚಿಕಿತ್ಸಾ ವ್ಯವಸ್ಥೆ, ಎಬಿಸಿ ನಿಯಾಮಗಳ ಅನುಸಾರ ಸಂತಾನ ಹರಣ ಶಸ್ತ್ರ ಚಿಕಿತEi (sterilization) ಕಾರ್ಯದ ಸಮನ್ವಯತೆ, ಆಶ್ರಯ ಕೇಂದ್ರದ ನಿರ್ವಹಣೆ ಹಾಗೂ ದಾಖಲಾತಿ ಸಂರಕ್ಷಣೆ, ಪುರಸಭೆಯ ಆರೋಗ್ಯ ವಿಭಾಗಕ್ಕೆ ದೈನಂದಿನ ವರದಿ ನೀಡುವುದು.**ಅರ್ಹತಾ ಮಾನದಂಡಗಳು:** ಭಾರತೀಯ ಪ್ರಾಣಿ ಕಲ್ಯಾಣಿ ಮಂಡಳಿ ಯವರಿಂದ ಪ್ರಮಾಣ ಪತ್ರ ಹೊಂದಿರುವ ನೋಂದಾಯಿತ ಸರಕಾರೇತರ ಸಂಸ್ಥೆಗಳು, ಪ್ರಾಣಿ ಪಾಲನೆ/ಎ.ಬಿ.ಸಿ. ಕಾರ್ಯಕ್ರಮಗಳಲ್ಲಿ ಕನಿಷ್ಠ ವರ್ಷದ ಅನುಭವ ಎನ್.ಜಿ.ಓ. ಅಧಿಕೃತ ಪ್ರತಿನಿಧಿಯ ಮಾನ್ಯತೆ ಹೊಂದಿರುವ ಆಧಾರ ಪ್ರಮಾಣ ಪತ್ರಗಳು ಬ್ಯಾಂಕ್ ಖಾತೆಯ ವಿವರು. Animal birth control (dog) Rules, ಸಲ್ಲಿಕೆ ವಿವರಗಳು, ಅರ್ಹ ಸಂಸ್ಥೆಗಳು ಮುಚ್ಚಿದ ಲಕೋಟೆಯಲ್ಲಿ ಕೋಟೇಶನಗಳನ್ನು ಹಾಗೂ ಅಗತ್ಯ ದಾಖಲೆಗಳನ್ನು ಮುಖ್ಯಾಧಿಕಾರಿ ಪುರಸಭೆಯ ಕಚೇರಿಗೆ 2026ರ ಜನೇವರಿ 01 ರೊಳಗಾಗಿ ಅವಶ್ಯಕ ಇರುವ ದಾಖಲೆಗಳನ್ನು ಸೇಡಂ ಪುರಸಭೆ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪುರಸಭೆಗೆ ಕಛೇರಿ ಸಮಯದಲ್ಲಿ ಸಂಪರ್ಕಿಸಲು ಕೋರಲಾಗಿದೆ.

## ವಿವಿಧ ಸ್ಪರ್ಧೆಗಳ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಪಟ್ಟಣದ ಚನ್ನಬಸವಾಶ್ರಮದಲ್ಲಿ ಲಿಂಗೈಕ್ಯ ಚನ್ನಬಸವ ಪಟ್ಟದ್ದೇವರ 136ನೇ ಜಯಂತ್ಯುತ್ಸವ ಅಂಗವಾಗಿ ಹಿರೇಮಠದ ಹಿರಿಯ ಸ್ವಾಮೀಜಿ ಬಸವಲಿಂಗ ಪಟ್ಟದ್ದೇವರ ಮಾರ್ಗದರ್ಶನದಲ್ಲಿ ಡಿ. 22ರಂದು ಬೆಳಿಗ್ಗೆ 09:30 ಗಂಟೆ ಗೆಭಾಷಣ ಹಾಗೂ ಶರಣರ ಕುರಿತು ಗೀತಗಾಯನ ಸ್ಪರ್ಧೆ ಆಯೋಜಿಸಲಾಗಿದೆ. ಈ ಸ್ಪರ್ಧೆಗಳಲ್ಲಿ ಪ್ರೌಢ ಹಾಗೂ ಕಾಲೇಜು ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಬಹುದು. ಚನ್ನಬಸವ ಪಟ್ಟದ್ದೇವರ ಜೀವನ ಸಾಧನೆ ಭಾಷಣದ ವಿಷಯವಾಗಿದೆ. ವಿಷಯ ಮಂಡನೆಗೆ 5 ರಿಂದ 6 ನಿಮಿಷ ಸಮಯ ಅವಕಾಶ ನೀಡಲಾಗುತ್ತದೆ. ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ವಿಶೇಷ ಬಹುಮಾನ ನೀಡಲಾಗುತ್ತದೆ.



## ಸಿದ್ದಸಿರಿಯಲ್ಲಿ ತೂಕದ ಮೋಸ, ಶುದ್ಧ ಸುಳ್ಳು: ವೀರಣ್ಣ ಗಂಗಾಣಿ

ಮಲ್ಲಮ್ಮ ನುಡಿ ವಾರ್ತೆ ಚಿಂಚೋಳಿ: ಚಿಂಚೋಳಿ ತಾಲ್ಲೂಕಿನ ಸಿದ್ದಸಿರಿ ಇಥೆನಾಲ್ ಕಾರ್ಖಾನೆಯಲ್ಲಿ ರೈತರು ತೆಗೆದುಕೊಂಡು ಬರುವ ಕಬ್ಬಿನ ತೂಕದಲ್ಲಿ ಮೋಸ ಮಾಡಲಾಗುತ್ತಿದೆ ಎನ್ನುವುದು ಶುದ್ಧ ಸುಳ್ಳು ಎಂದು ತಾಲ್ಲೂಕಿನ ರೈತ ಮುಖಂಡ ವೀರಣ್ಣ ಗಂಗಾಣಿ ಯವರು ನುಡಿದರು. ಚಂದಾಪುರ ಪಟ್ಟಣದ ಹೊರವಲದಲ್ಲಿನ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದ್ದ ಪತ್ರಿಕಾ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸಿದ್ದಸಿರಿ ಕಾರ್ಖಾನೆಯಲ್ಲಿ ರೈತರು ಬೆಳೆದ ಕಬ್ಬಿಗೆ ಯಾವುದೇ ರೀತಿಯಿಂದಲೂ ತೂಕದಲ್ಲಿ ಮೋಸ ಮಾಡುತ್ತಿಲ್ಲ ಆದರೂ ಕೆಲವೊಂದಷ್ಟು ಜನ ಕಾರ್ಖಾನೆಯ ಹೆಸರನ್ನು ಹಾಳು ಮಾಡಲು ವಿನಾಕಾರಣ ಸಂಚನ್ನು ರೂಪಿಸಿ ಸುಳ್ಳು ಆರೋಪ ಮಾಡುತ್ತಿದ್ದಾರೆ. ಕಟಾವು ಆದ ಕೂಡಲೇ, ವೇ ಬ್ರಿಡ್ಜ್ ತೂಕ ಮಾಡಿದ್ದು ಮಷಿನ್ ಕಟಿಂಗ್ ನಿಂದ ಕಟಾವು ಆಗಿರುವ ಕಬ್ಬು ಸುಮಾರು(13)ಹದಿಮೂರುಗಂಟೆಗಳ ಕಾಲಗಾಳಿ ಬಿಸಿಲಿನಿಂದ ಕೂಡಿದ್ದು ಸುಮಾರು ಎಂಬತ್ತು ಕಿ. ಮೀ. ದೂರದಿಂದ ಬರುತ್ತಿವೆ. ಅಲ್ಲದೇ ಸಾಗಾಟ ಮಾಡುವ ರಸ್ತೆಗಳು ಸರಿ ಇರದೇ ಇರುವುದರಿಂದ ಹಾಗೂ ರಸ್ತೆಯುದ್ಧಕ್ಕೂ ಗಿಡ-ಗಂಟೆಗಳು ತಾಗಿ ಕಬ್ಬಿನ ತುಕ್ಕಡಿಗಳು ದಾರಿಯುದ್ಧಕ್ಕೂ ಎಲ್ಲೆಂದರಲ್ಲಿ ಬೀಳುವುದಷ್ಟೇ ಅಲ್ಲದೇ ಗಾಳಿ, ಬಿಸಿಲಿನಿಂದಲೂ ಕೂಡ ಕಬ್ಬಿನಲ್ಲಿರುವ ನೀರಿನಾಂಶ ಒಣಗಿ ಹೋಗುವುದರಿಂದ ರೈತರು ಮೊದಲು ಮಾಡಿರುವ ತೂಕಕ್ಕು ಕಾರ್ಖಾನೆಯಲ್ಲಿನ ತೂಕಕ್ಕು ಸ್ವಲ್ಪ ವ್ಯತ್ಯಾಸವಾಗುತ್ತದೆಯಷ್ಟೇ ಹಾಗಾಗಿ ರೈತರು ಇಂತಹ ಸುಳ್ಳು ವದಂತಿಗಳಿಗೆ ಭಯ ಪಡುವ ಅವಶ್ಯಕತೆಯಿಲ್ಲ. ಸ್ವತ: ರೈತರು ಖುದ್ದಾಗಿ ತೂಕ ಪರಿಶೀಲನೆ ನಡೆಸಿ ಕಬ್ಬನ್ನು ಕಂಪನಿಗೆ ನೀಡುವಂತೆ ಕಂಪನಿಯ ವ್ಯವಸ್ಥಾಪಕರು ರೈತರ ಮಂಡಳಿಗೂ ಕೂಡ ತಿಳಿಸಿದ್ದಾರೆ. ಆದ್ದರಿಂದ ರೈತರು ಸುಳ್ಳು ಸುದ್ದಿಗಳಿಗೆ ಕಿವಿಗೊಡದೆ ನಿಶ್ಚಿಂತೆಯಿಂದ ಕಬ್ಬು ಸಾಗಿಸಬಹುದು ಎಂದರು. ಈ ಸಂದರ್ಭದಲ್ಲಿ, ಯುವ ಮುಖಂಡ ವಿರೇಶ ಯಂಪಳ್ಳಿ, ರಮೇಶ ಸಿದ ನಾಕ, ಮಲ್ಲಿಕಾರ್ಜುನ, ಚಂದ್ರಕಾಂತ ಸೇರಿದಂತೆ ಇನ್ನಿತರರಿದ್ದರು.



## ದೇಶ ಸೇವೆ ಮನೋಭಾವನೆ ಬರಲು ಎನ್‌ಎಸ್‌ಎಸ್ ಶಿಬಿರಗಳು ಪೂರಕವಾಗಲಿವೆ: ಚಂದ್ರಶೇಖರ




ಮಲ್ಲಮ್ಮ ನುಡಿ ವಾರ್ತೆ ಬೀದರ್: ವಿದ್ಯಾರ್ಥಿಗಳಲ್ಲಿ ಸಮಾಜ ಸೇವೆ ಹಾಗೂ ದೇಶ ಸೇವೆ ಮನೋಭಾವನೆ ಬರಲು ರಾಷ್ಟ್ರೀಯ ಸೇವಾ ಯೋಜನೆಯಂತಹ ಶಿಬಿರಗಳು ಪೂರಕವಾಗಲಿವೆ ಎಂದು ಕಲಬುರ್ಗಿ ವಿಭಾಗಿಯ ಎನ್‌ಎಸ್‌ಎಸ್ ಅಧಿಕಾರಿ ಚಂದ್ರಶೇಖರ ದೊಡಮನಿ ಹೇಳಿದರು. ತಾಲೂಕಿನ ಮನ್ನಳ್ಳಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜ ಆಯೋಜಿಸಿದ್ದ 2025-26ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಭಾರತ ಸಮನ್ವಯ ನಾಡಾಗಿದೆ. ಶಾಂತಿ, ಸಹಬಾಳ್ವೆ, ಸಹೋದರತೆ ಬಯಸುವ ದೇಶ. ದೇಶದ ಹಿತವೇ ನಮ್ಮ ಹಿತ. ಈ ಭಾವನೆ ಪ್ರತಿಯೊಬ್ಬ ಭಾರತೀಯನಲ್ಲಿ ಬರಬೇಕು. ಯುವಕರು ವೈಯಕ್ತಿಕ ಬೆಳವಣಿಗೆ ಜತೆಗೆ ದೇಶದ ಬೆಳವಣಿಗೆಯಲ್ಲೂ ಒಂದಿಷ್ಟು ಕೊಡುಗೆ ನೀಡಬೇಕು' ಎಂದು ಸಲಹೆ ನೀಡಿದರು. ಉತ್ತಮ ರೀತಿಯಲ್ಲಿ ಶಿಕ್ಷಣ ಪಡೆದು ಒಳ್ಳೆಯ ಫಲಿತಾಂಶ ತರಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ಪಿಎಸ್ಐ ನಂದಿನಿ ಮಾತನಾಡಿ, ಪ್ಲಾಸ್ಟಿಕ್ ಬಳಕೆಯಿಂದ ಪರಿಸರದ ಮೇಲೆ ದುಷ್ಪರಿಣಾಮಗಳು ಬೀರುತ್ತವೆ. ಇದರಿಂದ ಗಾಳಿ, ನೀರು, ಮಣ್ಣು ಮತ್ತು ವಾತಾವರಣ ಕಲುಷಿತಗೊಂಡು ರೋಗಗಳು ಹರಡುತ್ತವೆ. ಹಾಗಾಗಿ ಪ್ರತಿಯೊಬ್ಬರು ಜಾಗೃತರಾಗಿ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು,

ಪ್ರತಿಯೊಬ್ಬರು ಗಿಡ ಮರಗಳನ್ನು ಬೆಳೆಸಿ ಪರಿಸರ ಸಂರಕ್ಷಣೆ ಮಾಡಬೇಕು ಎಂದರು.

ಎನ್‌ಎಸ್‌ಎಸ್ ಅಧಿಕಾರಿ ಸುಭಾಷ ರಾಠೋಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲ ಮಾರುತಿ ರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರೊ.ಶಾಂತರಸ ಹೊಸಮನಿ, ವಿಜಯಕುಮಾರ ದೇವಾ, ಡಾ. ರಜನಿಕಾಂತ್, ಬಾಲಾಜಿ, ರುಕ್ಮಿಣಿ, ಉಷಾ ಉಪಸ್ಥಿತರಿದ್ದರು. ಮೊಯಿಜೋದ್ದಿನ ಕಾರ್ಯಕ್ರಮ ನಿರೂಪಿಸಿದರು ವಂದಿಸಿದರು.

## ಡಿ.20ರಂದು ಉಚಿತ ಆರೋಗ್ಯ ತಪಾಸಣಾ ಶಿಬಿರ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 136ನೆಯ ಜಯಂತ್ಯುತ್ಸವ ನಿಮಿತ್ತ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಆರ್.ಸುರೇಂದ್ರನ್ ಹೇಳಿದರು. ಪಟ್ಟಣದ ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯ(ಬಿಕೆಐಟಿ)ನಲ್ಲಿ ಮಂಗಳವಾರ ಕರೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಪಟ್ಟಣದ ಲಿಂಗೈಕ್ಯ ಲಕ್ಷ್ಮೀಬಾಯಿ ಭೀಮಣ್ಣ ಖಂಡ್ರೆ ಪಬ್ಲಿಕ್ ಶಾಲೆಯಲ್ಲಿ ಡಿ.20ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಉಚಿತ ಆರೋಗ್ಯ ಶಿಬಿರ ನಡೆಯಲಿದ್ದು, ಸಂಸ್ಥೆಯ ಅಧ್ಯಕ್ಷರು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಸಂಸದ ಸಾಗರ ಖಂಡ್ರೆ ಅವರು ಈ ಶಿಬಿರಕ್ಕೆ ಚಾಲನೆ ನೀಡಲಿದ್ದಾರೆ. ಶಿಬಿರದಲ್ಲಿ ಚರ್ಮ, ಕಣ್ಣಿನ ತಪಾಸಣೆ ಜತೆಗೆ ರಕ್ತದಾನ ಶಿಬಿರ ಜರುಗಲಿದೆ ಎಂದರು.

ಗಡಿಭಾಗದ ಪ್ರಗತಿಯಲ್ಲಿ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ ಕೊಡುಗೆ ದೊಡ್ಡದಿದೆ. ಶೈಕ್ಷಣಿಕ, ಧಾರ್ಮಿಕ ಮತ್ತು ಸಾಮಾಜಿಕ ಕ್ಷೇತ್ರದ ಪ್ರಗತಿಗೆ ತಮ್ಮದೆ ಆದ ಕೊಡುಗೆ ನೀಡಿದ್ದಾರೆ. ವಿಶೇಷವಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ಅವರು ನೀಡಿರುವ ಕೊಡುಗೆ ಮರೆಯುವಂತಿಲ್ಲ. ನಿಜಾಂನ ಆಳ್ವಿಕೆಯಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಕಟ್ಟಿ ಶೈಕ್ಷಣಿಕ ಮಹತ್ವ ಸಾರಿದ್ದರು.

ಮಹಿಳೆಯರಿಗಾಗಿ ಪ್ರತ್ಯೇಕ ಶಾಲಾ-ಕಾಲೇಜು ತೆರೆದು ಮಹಿಳಾ ಸಮಾನತೆ ಸಾರಿದರು. ಅಂತಹ ಪೂಜ್ಯರ ಕೊಡುಗೆಯನ್ನು ಇಂದಿನ ಯುವ ಯುವ ಸಮುದಾಯಕ್ಕೆ ಪರಿಚಯಿಸುವುದು ಅಗತ್ಯವಾಗಿದೆ. ಆ ನಿಟ್ಟನಲ್ಲಿ ಉಚಿತ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉಚಿತ ಆರೋಗ್ಯ ತಪಾಸಣೆ ಶಿಬಿರದ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಅಂಕುಶ ಢೋಲೆ, ಪ್ರಾಚಾರ್ಯ ಡಾ.ಉದಯಕುಮಾರ ಕಲ್ಯಾಣೆ, ಗುರು ಕುಡತೆ, ಭೀಮರಾವ ಗಿರಿ ಹಾಜರಿದ್ದರು.

## ಮಹಿಳೆಯರಿಗೆ ಶಕ್ತಿ ತುಂಬಿದ ಗ್ರಾಮಾಭಿವೃದ್ಧಿ ಯೋಜನೆ

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಜಿಲ್ಲೆಯ ಮಹಿಳೆಯರಿಗೆ ಧರ್ಮಸ್ಥಳ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್, ಸಾಮೂಹಿಕ ವರ್ಗದವರು, ಬಡ ಜನರ ಏಳಿಗೆಗೆ ಅನೇಕ ಯೋಜನೆ ರೂಪಿಸುತ್ತಿದೆ



ಗ್ರಾಮಾಭಿವೃದ್ಧಿ ಯೋಜನೆ ಶಕ್ತಿ ತುಂಬುವ ಕೆಲಸ ಮಾಡುತ್ತಿದೆ. ಸ್ವಸಹಾಯ ಸಂಘ ರಚನೆ ಮೂಲಕ ಮಹಿಳೆಯರು ಆರ್ಥಿಕ ಪ್ರಗತಿ ಸಾಧಿಸುತ್ತಿದ್ದಾರೆ. ಪುರುಷರಿಗೆ ಸಾಲ ನೀಡುವಷ್ಟು ಶಕ್ತಿ ಮಹಿಳೆಯರು ಬೆಳೆಸಿಕೊಂಡಿದ್ದಾರೆ ಎಂದು ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಶಿವು ಲೋಖಂಡೆ ಹೇಳಿದರು. ತಾಲೂಕಿನ ಹಲಬರ್ಗಾ ಗ್ರಾಮದ ರಾಚೋಟೇಶ್ವರ ಮಠದ ಕಲ್ಯಾಣ ಮಂಟಪದಲ್ಲಿ ಶ್ರೀ ಶ್ರೀ ಅಷ್ಟ ಲಕ್ಷ್ಮೀ ಪೂಜಾ ಸಮಿತಿ ಮತ್ತು ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಹಲಬರ್ಗಾ ವಲಯದ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ಸಾಮೂಹಿಕ ಶ್ರೀಅಷ್ಟ ಲಕ್ಷ್ಮೀ ಪೂಜೆ ಮತ್ತು ಧಾರ್ಮಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವುದರ ಜತೆಗೆ ದುರ್ಬಲ ಎಂದು ತಿಳಿಸಿದರು.

ಸಮ್ಮುಖ ವಹಿಸಿದ್ದ ವಾಣಿ ಬಹನಜೀ ಮಾತನಾಡಿ, ಸ್ವಸಹಾಯ ಸಂಘದ ಮೂಲಕ ಸಣ್ಣ ಉಳಿತಾಯ

ಆರಂಭಿಸಿದ ಮಹಿಳೆಯರು ಇಂದು ಉತ್ತಮ ಆರ್ಥಿಕ ಪ್ರಗತಿ ಸಾಧಿಸುತ್ತಿದ್ದಾರೆ. ಇದೆಲ್ಲವೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಸಾಧ್ಯವಾಗಿದೆ ಎಂದು ತಿಳಿಸಿದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನಿರ್ದೇಶಕ ಮುರಳಿಧರ ಎಚ್.ಎಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಳಚಾಪೂರ ಸಿದ್ಧಾರೂಢ ಮಠದ ಸದ್ರುಪಾನಂದ ಸಾನ್ನಿಧ್ಯ ವಹಿಸಿ ಮಾತನಾಡಿದರು. ಗ್ರಾಮ ಪಂಚಾಯತಿ ಅಧ್ಯಕ್ಷೆ ಪದ್ಮಿನಿಬಾಯಿ ಠಾಕೂರ್ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಾಪಂ ಅಭಿವೃದ್ಧಿ ಅಧಿಕಾರಿ ಚಂದ್ರಕಾಂತ ಫುಲೆ, ಹಿರಿಯ ಮುಖಂಡ ರಮೇಶ ಪ್ರಭಾ, ಗ್ರಾಪಂ ಸದಸ್ಯರಾದ ಪ್ರಕಾಶ ಪ್ರಭಾ, ರಜನಿಕಾ ಚನ್ನಬಸಪ್ಪ, ದತ್ತಾತ್ರಿ ಪಾಟೀಲ್, ಲಕ್ಷ್ಮೀ ಮಾರುತಿ, ಮೋಹನ ಡಾಂಗೆ, ಶೋಭಾವತಿ ದಿಗಂಬರ ಸೇರಿದಂತೆ ಹಲವರು ಇದ್ದರು.

> ಡಾ.ವೀರೇಂದ್ರ ಹೆಗ್ಗಡೆ ಅವರ ಪರೋಪಕಾರಿ ಜೀವನ ನಮ್ಮೆಲ್ಲರಿಗೂ ಮಾದರಿಯಾಗಿದೆ. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸ್ಥಾಪಿಸಿ ಆ ಮೂಲಕ ಸಮಾಜದಲ್ಲಿನ ಬಡತನ, ಅಜ್ಞಾನವನ್ನು ಹೋಗಲಾಡಿಸುವ ಪ್ರಯತ್ನ ಮಾಡುತ್ತಿರುವುದು ಹೆಮ್ಮೆಯ ಸಂಗತಿ.
> - ಸದ್ರುಪನಾಂದ ಸ್ವಾಮೀಜಿ ಸಿದ್ಧಾರೂಢ ಮಠ ಮಳಚಾಪೂರ

> ಗಡಿ ಜಿಲ್ಲೆ ಬೀದರ್‌ನಲ್ಲಿ ಆರಂಭಿಸಿರುವ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಗೆ 9 ವರ್ಷಗಳು ಪೂರ್ಣಗೊಂಡಿವೆ. 16 ಸಾವಿರ ಸಂಘಗಳನ್ನು ರಚಿಸಿದ್ದು 1.44 ಲಕ್ಷ ಮಹಿಳೆಯರು ಸಂಘದ ಸದಸ್ಯರಾಗಿದ್ದಾರೆ. ಸಣ್ಣ ಉಳಿತಾಯಿಂದ 51 ಕೋಟಿ ರೂ ಮಹಿಳೆಯರು ಉಳಿತಾಯ ಮಾಡಿದ್ದಾರೆ.
> - ಮುರಳಿಧರ ಎಚ್.ಎಲ್
> ನಿರ್ದೇಶಕರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬೀದರ್




ಕಲಬುರಗಿ: ನಗರದ ಜಿಲ್ಲಾ ಜಾತ್ಯತೀತ ಜನತಾದಳ ಪಕ್ಷದ ಕಚೇರಿಯಲ್ಲಿ ಮಾಜಿ ಮುಖ್ಯಮಂತ್ರಿಗಳು,ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷರು, ಭಾರತ ಸರ್ಕಾರದ ಉಕ್ಕು ಮತ್ತು ಭಾರಿ ಕೈಗಾರಿಕೊಧ್ಯಮದ ಸಚಿವರಾದ ಹೆಚ್‌ಡಿ ಕುಮಾರಸ್ವಾಮಿ ರವರ 66 ನೇ ಜನ್ಮದಿನವನ್ನು ಪಕ್ಷದ ಕಚೇರಿಯಲ್ಲಿ ಜಿಲ್ಲಾಧ್ಯಕ್ಷರಾದ ಬಾಲರಾಜ್ ಅಶೋಕ ಗುತ್ತೇದಾರ ರವರು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು. ಕಾರ್ಯಕ್ರಮದ ನಂತರ ಪಕ್ಷದ 25 ನೇ ವರ್ಷದ ರಜತ್ ಮಹೋತ್ಸವ ಕಾರ್ಯಕ್ರವನ್ನು ಜಿಲ್ಲಾದ್ಯಂತ ಆಚರಣೆ ಮಾಡಲು ಪಕ್ಷದ ಮುಖಂಡರ ಸಲಹೆ ಸೂಚನೆಗಳನ್ನು ಆಲಿಸಿ ಪ್ರತಿ ತಾಲೂಕಿನಲ್ಲಿ ರಜತ್ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳೋಲಾಗುವುದು ಎಂದು ತೀರ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಪಕ್ಷದ ಹಿರಿಯ ಮುಖಂಡರು, ಯುವ ಮುಖಂಡರು, ತಾಲೂಕಾ ಅಧ್ಯಕ್ಷರುಗಳು / ಜಿಲ್ಲಾ ಪದಾಧಿಕಾರಿಗಳು, ವಿವಿಧ ಘಟಕದ ಅಧ್ಯಕ್ಷರುಗಳು, ಜೆಡಿಎಸ್ ಅಭಿಮಾನಿಗಳು ಉಪಸ್ಥಿತರಿದ್ದರು.

## ಡಾ.ಅಬ್ದುಲ್ ಖದೀರಗೆ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಗೌರವ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ ಬೀದರ್: ಕರ್ನಾಟಕ ರಾಜ್ಯ ಬಾಲ ವಿಕಾಸ ಅಕಾಡೆಮಿಯು ಬೀದರ್ ಮೂಲದ ಶಾಹೀನ್ ಸಮೂಹ ಸಂಸ್ಥೆಗೆ ಬಾಲ ವಿಕಾಸ ಅಕಾಡೆಮಿ ಪ್ರಶಸ್ತಿಗಳಿಗೆ ಆಯ್ಕೆ ಮಾಡಿದೆ.

ಮಂಗಳವಾರ ಸುವರ್ಣ ವಿಧಾನಸೌಧದಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ಶಾಲೆ ಬಿಟ್ಟ ವಿದ್ಯಾರ್ಥಿಗಳನ್ನು ವಿಶೇಷ ತರಬೇತಿ ನೀಡುವ ಮೂಲಕ ಮುಖ್ಯವಾಹಿನಿಗೆ ತರಲು 'ಶೈಕ್ಷಣಿಕ ವ್ಯವಸ್ಥೆ' ಸ್ಥಾಪಿಸುವ ವಿಶಿಷ್ಟ ಪ್ರಯತ್ನಗಳನ್ನು ನೆರವೇರಿಸಿದರು,

ಶಾಹೀನ್ ಗುಂಪು ಸುಮಾರು 15 ವರ್ಷಗಳಿಂದ ಕಾರ್ಯಕ್ರಮ ನಡೆಸುತ್ತಿದೆ. ಪ್ರತಿ ವರ್ಷ ಸರಾಸರಿ 800 ವಿದ್ಯಾರ್ಥಿಗಳು ಈ ಕಾರ್ಯಕ್ರಮದ ಪ್ರಯೋಜನಪಡೆಯುತ್ತಾರೆ.

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪ್ರಶಸ್ತಿ ಪ್ರದಾನ ಮಾಡಿದರು ಅಕಾಡೆಮಿ ಅಧ್ಯಕ್ಷ ಸಂಗಮೇಶ್ ಬಬಲೇಶ್ವರ್, ಇತರ ಪ್ರಶಸ್ತಿ ಪುರಸ್ಕೃತರು ಮತ್ತು ಅಧಿಕಾರಿಗಳು ಮತ್ತು ಇತರರು ಉಪಸ್ಥಿತರಿದ್ದರು.

## ನಾಡಿನ ಇತಿಹಾಸ, ಶಿಲ್ಪಕಲೆ ಶ್ರೇಷ್ಠವಾದದ್ದು- ಪ್ರೊ.ಬಿ.ಕೆ ರವಿ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ : ನಾಡಿನ ಹಂಪೆ, ಬೇಲೂರು, ಹಳೆಬೀಡು, ಚಿತ್ರದುರ್ಗ, ಕಿತ್ತೂರು, ಕೊಪ್ಪಳದ ಇತಿಹಾಸ, ಶಿಲ್ಪ ಕಲೆ, ಸಾಂಸ್ಕೃತಿಕ ಶ್ರೀಮಂತಿಕೆ ಶ್ರೇಷ್ಠವಾದದ್ದು, ಇತಿಹಾಸ ಪ್ರಸಿದ್ದವಾದದ್ದು, ಇತಿಹಾಸದ ವಿದ್ಯಾರ್ಥಿಗಳು ಇಂತಹ ಇತಿಹಾಸವನ್ನು ಚನ್ನಾಗಿ ಅಧ್ಯಯನ ಮಾಡಿದರೆ, ಒಳ್ಳೆಯ ಅವಕಾಶಗಳು ಕೈ ಬೀಸಿ ಕರೆಯಲಿವೆ. ಉಜ್ವಲ ಭವಿಷ್ಯ ನಿಮ್ಮದಾಗಲಿದೆ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ.ಕೆ.ರವಿಯವರು ಆಶಯ ವ್ಯಕ್ತಪಡಿಸಿದರು.

ಜಿಲ್ಲೆಯ ಬಾನಾಪುರ ಬಳಿಯ ವಿಶ್ವವಿದ್ಯಾಲಯದ ಇತಿಹಾಸ ಹಾಗೂ ಪುರಾತತ್ವ ಅಧ್ಯಯನ ವಿಭಾಗದ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತಕ್ಕಾಗಿ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಂದ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ, ಅವರು ಮಾತನಾಡಿದರು.

ವಿದ್ಯಾರ್ಥಿಗಳು ಮೊಬೈಲು ಗೀಳು ತ್ಯಜಿಸಿ ನಾಡಿನ ಇತಿಹಾಸ, ನಾಡಿನ ಸಮಾಜ ಸುಧಾರಕರು, ಶರಣರು, ದಾಸರು, ದಾರ್ಶನಿಕರು ಸ್ವತಂತ್ರ್ಯ ಯೋಧರ ಇತಿಹಾಸವನ್ನು ಸರಿಯಾಗಿ ಅಧ್ಯಯನ ಮಾಡಿ, ಜನರಿಗೆ ತಿಳಿಸಬೇಕಾದ ಮಹತ್ವದ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದರು. ಇತಿಹಾಸದಲ್ಲಿ ಕೊಪ್ಪಳ ಭಾಗಕ್ಕೆ ತಿರುಳ್ಗನ್ನಡ ನಾಡೆಂಬ ಹೆಸರಿದೆ. ಕವಿರಾಜ ಮಾರ್ಗ ಕೃತಿಯಲ್ಲಿ 'ಕುರಿತೋದೆಯಂ ಕಾವ್ಯ ಪರಿಣಿತ ಮತಿಗಳ್ ಪ್ರದೇಶಂ ಕೊಪಣಾಚಲ ಪ್ರದೇಶಂ' ಎಂಬ ಉಲ್ಲೇಖವಿದೆ. ಈ ಭಾಗಕ್ಕೆ ಒಳ್ಳೆಯ ಇತಿಹಾಸ ಇದೆ, ಇದನ್ನು ಸಮರ್ಪಕವಾಗಿ ಅಧ್ಯಯನ ಮಾಡಿ ನಾಡಿಗೆ ತಿಳಿಸಿಕೊಡಿ ಎಂದರು. ನಾಡಿನ ದಾಸ ಸಾಹಿತ್ಯ, ವಚನ ಸಾಹಿತ್ಯ, ಇತರ ಕೊಡುಗೆಗಳ ಬಗ್ಗೆ ಈ ವೇಳೆ ತಿಳಿಸಿದರು.

ವಿಶ್ವವಿದ್ಯಾಲಯದ ಕುಲ ಸಚಿವರಾದ ಪ್ರೊ.ಎಸ್.ವಿ.ಡಾಣಿಯವರು ಮಾತನಾಡಿ, ಕನ್ನಡ ನಾಡು ಶ್ರೀಮಂತ ಇತಿಹಾಸವನ್ನು ಹೊಂದಿದೆ. ನಾಡಿಗೆ ಸಿಡಿಲ ಮರಿಗಳನ್ನು ನೀಡಿದೆ ಎಂದರಲ್ಲದೇ ಇತಿಹಾಸದಲ್ಲಿನ ಶ್ರೇಷ್ಠ ಅಂಶಗಳನ್ನು ತಿಳಿದುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇತಿಹಾಸ ಅರಿತವರು ಮಾತ್ರ ಇತಿಹಾಸ ನಿರ್ಮಿಸಲು ಸಾಧ್ಯ ಎಂದು ಹೇಳಿದರು.



ವಿಶ್ವವಿದ್ಯಾಲಯದ ಆಡಳಿತಾಧಿಕಾರಿ ಪ್ರೊ. ತಿಮ್ಮಾರೆಡ್ಡಿ ಮೇಟಿಯವರು ಮಾತನಾಡಿ, ವಿದ್ಯಾರ್ಥಿಗಳು ಪರಿಶ್ರಮವಹಿಸಿ ಅಧ್ಯಯನ ಮಾಡಿ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಸನ್ಮಾನ: ಕೆ.ಸೆಟ್ ಪರೀಕ್ಷೆಯಲ್ಲಿ ಈ ಬಾರಿ ವಿಜೇತರಾದ ಪ್ರಕಾಶ, ಬಸವರಾಜ ಜಾಲಿಹಾಳ ಹಾಗೂ ಸ್ಪರ್ಧೆಗಳಲ್ಲಿ ಬಹುಮಾನ ಗಳಿಸಿದ ವಿದ್ಯಾರ್ಥಿಗಳಿಗೆ ಈ ವೇಳೆ ಸನ್ಮಾನಿಸಲಾಯಿತು.

ಕೊಪ್ಪಳ ವಿವಿಯ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ.ಗೀತಾ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಹಲವು ವಿದ್ಯಾರ್ಥಿಗಳು ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ವಿದ್ಯಾರ್ಥಿಗಳಾದ ಸೌಜನ್ಯ ಸ್ವಾಗತಿಸಿದರೆ, ಬಸವರಾಜ ಹಾರ್ನಳ್ಳಿ ನಿರೂಪಿಸಿದರು ಮತ್ತು ಹನುಮಂತ ಯಾದವ ವಂದಿಸಿದರು.

# ಸಂಡೂರಿನಲ್ಲಿ ಕೌಶಲ್ಯಾಭಿವೃದ್ಧಿ ವಿಶ್ವವಿದ್ಯಾಲಯಕ್ಕೆ ಪ್ರಸ್ತಾವನೆ: ಬಸವರಾಜ ರಾಯರಡ್ಡಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಜಿಲ್ಲೆಯ ಸಂಡೂರಿನಲ್ಲಿ ಕೌಶಲ್ಯಾಭಿವೃದ್ಧಿ ವಿಶ್ವವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ಬರುವ ಬಜೆಟ್ ನಲ್ಲಿ ಮುಖ್ಯಮಂತ್ರಿಗಳು ಘೋಷಣೆ ಮಾಡುವ ನಿರೀಕ್ಷೆ ಇದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಹಾಗೂ ಯಲಬುರ್ಗಾ ಶಾಸಕ ಬಸವರಾಜ ರಾಯರಡ್ಡಿ ಅವರು ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತಂತೆ ವಿಧಾನಸಭೆಯಲ್ಲಿ ಚರ್ಚೆ ನಡೆಯುವ ವೇಳೆ ಮಾತನಾಡಿದರು.

ಉತ್ತರ ಕರ್ನಾಟಕದಲ್ಲಿ ಉನ್ನತ ಶಿಕ್ಷಣಕ್ಕೆ ಮತ್ತು ಕೈಗಾರಿಕೆಗಳ ಬೇಡಿಕೆಯನುಸಾರವಾಗಿ ಉತ್ತಮ ತರಬೇತಿ ಹೊಂದಿರುವ ಮಾನವ ಸಂಪನ್ಮೂಲ ಒದಗಿಸಲು ಆದ್ಯತೆ ದೊರಕಿಸುವ ನಿಟ್ಟಿನಲ್ಲಿ ಹಾಗೂ ಈ ಭಾಗದ ಯುವಜನರಿಗೆ ಹೆಚ್ಚಿನ ಉದ್ಯೋಗಾವಕಾಶ ಸಿಗುವಂತೆ ಮಾಡಲು ಬಳ್ಳಾರಿ ಜಿಲ್ಲೆ ಸಂಡೂರಿನಲ್ಲಿ ಕೌಶಲ್ಯಾಭಿವೃದ್ಧಿ ವಿಶ್ವವಿದ್ಯಾಲಯ ಸ್ಥಾಪಿಸುವ ಉದ್ದೇಶ ಹೊಂದಿದ್ದು, ಬರುವ ಬಜೆಟ್ ನಲ್ಲಿ ಮುಖ್ಯಮಂತ್ರಿಗಳು ಇದನ್ನು ಘೋಷಿಸುವ ನಿರೀಕ್ಷೆ ಇದೆ.



ಉತ್ತರ ಕರ್ನಾಟಕದಲ್ಲಿ ಒಟ್ಟು 14 ಜಿಲ್ಲೆಗಳಿದ್ದು, ಈ ಪೈಕಿ ತಲಾ 07 ಜಿಲ್ಲೆಗಳು ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ವ್ಯಾಪ್ತಿಯಲ್ಲಿವೆ. ದಾವಣಗೆರೆಯಿಂದ ಚಾಮರಾಜನಗರದವರೆಗೆ ಮೈಸೂರು ಮಹಾರಾಜರು ಆಡಳಿತ ಕೊಟ್ಟಿದ್ದು, ಶಿಕ್ಷಣ, ಆರೋಗ್ಯ ಮತ್ತು ನೀರಾವರಿಗೆ ಅವರು ಕೊಟ್ಟ ಆದ್ಯತೆಯಿಂದಾಗಿ ಈ ಭಾಗಗಳು ಶಿಕ್ಷಣ, ಆರೋಗ್ಯ ಮತ್ತು ನೀರಾವರಿ ಕ್ಷೇತ್ರದಲ್ಲಿ ಮುಂದಿವೆ. ಆದರೆ ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಪ್ರದೇಶಗಳು ಮದ್ರಾಸ್ ಪ್ರೆಸಿಡೆನ್ಸಿ ಹಾಗೂ ನಿಜಾಮ್ ಆಡಳಿತವಿತ್ತು.

ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ನಿಜಾಮರು ಸುಮಾರು 250 ವರ್ಷ ಆಡಳಿತ ನಡೆಸಿದರು, ಇವರು ಶಿಕ್ಷಣ ಮತ್ತು ನೀರಾವರಿಗೆ ಯಾವುದೇ ಆದ್ಯತೆ ಕೊಡಲಿಲ್ಲ. ಈ ಭಾಗದಲ್ಲಿ ಶಾಲೆ, ಕಾಲೇಜುಗಳನ್ನು ಸ್ಥಾಪಿಸದ ಕಾರಣದಿಂದಾಗಿ ಈ ವ್ಯಾಪ್ತಿಯ ಜಿಲ್ಲೆಗಳು ಶಿಕ್ಷಣದಲ್ಲಿ ತೀವ್ರ ಹಿಂದುಳಿಯಲು ಕಾರಣವಾಯಿತು.

ರಾಜಸ್ಥಾನ ಬಿಟ್ಟರೆ, ಉತ್ತರ ಕರ್ನಾಟಕದ 14 ಜಿಲ್ಲೆಗಳು ಅತ್ಯಂತ ಒಣ ಪ್ರದೇಶ ಹೊಂದಿವೆ. ಇಲ್ಲಿ ಮಳೆ ಹೆಚ್ಚು ಆಗಲ್ಲ, ಹಾಗೂ ಅಂತರ್ಜಲವೂ ಕಡಿಮೆ ಇದೆ. ಸಾಕ್ಷರತೆಯಲ್ಲಿ ರಾಜ್ಯದ ಸರಾಸರಿ 75.36 ಇದ್ದರೆ, ಉತ್ತರ ಕರ್ನಾಟಕ ಜಿಲ್ಲೆಗಳ ಪ್ರಮಾಣ 65 ಕ್ಕಿಂತ ಕಡಿಮೆ ಇದೆ. ಹೀಗಾಗಿ ಉತ್ತರ ಕರ್ನಾಟಕದಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಸಿದ್ದರಾಮಯ್ಯ ಅವರ ನೇತೃತ್ವದ ನಮ್ಮ ಸರ್ಕಾರ ಅನೇಕ ಕ್ರಮಗಳನ್ನು ಕೈಗೊಂಡಿದೆ.

ಏಷ್ಯನ್ ಡೆವಲಪ್ ಮೆಂಟ್ ಬ್ಯಾಂಕ್ ನಿಂದ ಆರ್ಥಿಕ ನೆರವು ಪಡೆದು 500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಿದ್ದು, ಈ ಭಾಗದ ಶಿಕ್ಷಣ ಕ್ಷೇತ್ರದಲ್ಲಿ ಐತಿಹಾಸಿಕ ಕಾರ್ಯವಾಗಿದೆ. ಇದರ ಜೊತೆಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 400 ಹೊಸ ಕೆ.ಪಿ.ಎಸ್. ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಮಕ್ಕಳಿಗೆ ಇಂಗ್ಲೀಷ್ ಭಾಷೆಯ ಜ್ಞಾನ ದೊರಕುವಂತಾಗಲು ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 35 ಎಲ್‌ಕೆಜಿ ಶಾಲೆಗಳನ್ನು ಪ್ರಾರಂಭಿಸಲಾಗುತ್ತಿದೆ. ಹೀಗೆ ಉತ್ತರ ಕರ್ನಾಟಕದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿ, ಈ ಭಾಗದಲ್ಲಿಯೂ ಸಾಕ್ಷರತೆ ಪ್ರಮಾಣವನ್ನು ಹೆಚ್ಚಿಸುವ ಯತ್ನವನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದರು.

ಐಐಟಿ ಯಲ್ಲಿ ರಾಜ್ಯದವರಿಗೆ ಶೇ. 50 ಮೀಸಲು ಕಲ್ಪಿಸಲು ಸಹಕಾರ ನೀಡುವಂತೆ ಬಸವರಾಜ ರಾಯರಡ್ಡಿ ಅವರು ಪ್ರತಿಪಕ್ಷದವರಿಗೆ ಮನವಿ ಮಾಡಿದರು. ಧಾರವಾಡದಲ್ಲಿ ಐಐಟಿ ಅನ್ನು ಪ್ರಾರಂಭಿಸಲು ನಮ್ಮ ರಾಜ್ಯದಿಂದ ಕೇಂದ್ರಕ್ಕೆ 2 ಸಾವಿರ ಕೋಟಿ ರೂಪಾಯಿಗಳೂ ಹೆಚ್ಚಿನ ಮೌಲ್ಯದ ಭೂಮಿಯನ್ನು ಉಚಿತವಾಗಿ ಕೊಟ್ಟಿದ್ದೇವೆ. ಬೇರೆ ರಾಜ್ಯದ ಅಭ್ಯರ್ಥಿಗಳೇ ಹೆಚ್ಚಾಗಿ ಇಲ್ಲಿ ಪ್ರವೇಶ ಪಡೆಯುತ್ತಾರೆ. ಹೀಗಾಗಿ ಐಐಟಿ ಯಿಂದ ಕರ್ನಾಟಕಕ್ಕೆ ಯಾವುದೇ ಉಪಯೋಗ ಆಗುತ್ತಿಲ್ಲ. ರಾಜ್ಯದ ಅಭ್ಯರ್ಥಿಗಳಿಗೆ ಹೆಚ್ಚಿನ ಅವಕಾಶ ಸಿಗುತ್ತಿಲ್ಲ. ಐಐಟಿ ಯಲ್ಲಿ ಶೇ. 50 ರಷ್ಟು ಕರ್ನಾಟಕದ ಅಭ್ಯರ್ಥಿಗಳಿಗೆ ಮೀಸಲು ನೀಡುವಂತೆ ಈ ಹಿಂದೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ ಮನವಿಗೆ ಒಪ್ಪಿಗೆ ದೊರೆಯಲಿಲ್ಲ. ಹೀಗಾಗಿ ಮುಖ್ಯಮಂತ್ರಿಗಳಿಂದ ಕೇಂದ್ರ ಸರ್ಕಾರಕ್ಕೆ ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸಲು ಸಿದ್ಧರಿದ್ದು, ಪ್ರತಿಪಕ್ಷದವರು ಕೇಂದ್ರ ಸರ್ಕಾರದ ಮನವೊಲಿಸಿ, ಒಪ್ಪಿಗೆ ದೊರಕಿಸಿದಲ್ಲಿ, ಕರ್ನಾಟಕದ ಹೆಚ್ಚಿನ ಅಭ್ಯರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಬಸವರಾಜ ರಾಯರಡ್ಡಿ ಹೇಳಿದರು.

ಕಲ್ಯಾಣ ಕರ್ನಾಟಕದ ಹೊಸ ತಾಲ್ಲೂಕುಗಳಲ್ಲಿ ತಾಲ್ಲೂಕು ಆಸ್ಪತ್ರೆ ನಿರ್ಮಾಣಕ್ಕೆ 970 ಕೋಟಿ ರೂ. ಅನುದಾನ ಒದಗಿಸಲಾಗಿದ್ದು, ಈಗಾಗಲೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ನೂತನವಾಗಿ ರಚಿಸಲಾಗಿರುವ ತಾಲ್ಲೂಕುಗಳಿಗೆ 100 ಹಾಸಿಗೆ ಆಸ್ಪತ್ರೆಯನ್ನು ಮಂಜೂರು ಮಾಡಲಾಗಿದೆ. ಅಲ್ಲದೆ ಬಾಣಂತಿಯರಿಗೆ ಉತ್ತಮ ಪೌಷ್ಠಿಕ ಆಹಾರ ನೀಡುವ ವಿಶೇಷ ಯೋಜನೆಯನ್ನು ಜಾರಿಗೊಳಿಸಿದ್ದು, ಇದರಿಂದ ಉತ್ತರ ಕರ್ನಾಟಕದಲ್ಲಿ ಶಿಶು ಮರಣ ಹಾಗೂ ತಾಯಿ ಮರಣ ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರದ ಈ ಕ್ರಮ ಶ್ಲಾಘನೀಯವಾಗಿದೆ ಎಂದು ಬಸವರಾಜ ರಾಯರಡ್ಡಿ ಹೇಳಿದರು.

## ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕಾ ಅದಾಲತ : 204 ಪ್ರಕರಣ ಇತ್ಯರ್ಥ



**ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ :**

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ನಿರ್ದೇಶನದಂತೆ ತಾಲೂಕು ಕಾನೂನು ಸೇವಾ ಸಮಿತಿ ಅಂಕೋಲಾ ಆಶ್ರಯದಲ್ಲಿ ರಾಷ್ಟ್ರೀಯ ಲೋಕ ಅದಾಲತ ಸೋಮವಾರ ಅಂಕೋಲಾ ನ್ಯಾಯಾಲಯದಲ್ಲಿ ನಡೆಯಿತು. ನ್ಯಾಯಾಧೀಶರಾದ ಪ್ರಿಯಾ ಜೊಗಳೇಕರ ಅಧ್ಯಕ್ಷತೆಯಲ್ಲಿ ನ್ಯಾಯಾಲಯದಲ್ಲಿ ಬಾಕಿ ಉಳಿದಿರುವ ಒಟ್ಟೂ 3672 ಪ್ರಕರಣಗಳಲ್ಲಿ 358 ಪ್ರಕರಣಗಳ ವಿಚಾರಣೆ ಕೈಗೊಂಡು 204 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಯಿತು.

ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯದ 97 ಪ್ರಕರಣಗಳಲ್ಲಿ 34 ಪ್ರಕರಣಗಳನ್ನು, ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ 115 ಪ್ರಕರಣಗಳಲ್ಲಿ 75 ಪ್ರಕರಣಗಳನ್ನು ಹಾಗೂ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ. ನ್ಯಾಯಾಲಯದ 146 ಪ್ರಕರಣಗಳಲ್ಲಿ 95 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಯಿತು. ಅಲ್ಲದೆ 16 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು.

ವಕೀಲರಾದ ಪ್ರಕೃತಿ ವಿ. ನಾಯಕ, ತೇಜಾ ಎಸ್. ಬಂಟ ಇವರು ಸಂಧಾನಕಾರರಾಗಿ ಕಾರ್ಯನಿರ್ವಹಿಸಿದರು. ಈ ಸಂದರ್ಭದಲ್ಲಿ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯರು, ವಕೀಲರ ಸಂಘದ ಸದಸ್ಯರು ಸಿಬ್ಬಂದಿಗಳು ಇದ್ದರು.

## ಸಮನ್ವಯ ಸಮಿತಿ ಸಭೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಜಿಲ್ಲೆಯಲ್ಲಿ ಬೆಳೆ ಕಟಾವು ಪ್ರಯೋಗಗಳ ಪ್ರಗತಿ ಪರಿಶೀಲನೆ, ಜನನ-ಮರಣ ನಾಗರಿಕ ನೋಂದಣಿ ಪದ್ಧತಿ, ಬೆಳೆ ಕ್ಷೇತ್ರ ಮರು ಹೊಂದಾಣಿಕೆ ಹಾಗೂ ಇತರೆ ವಿಷಯಗಳ ಕುರಿತು ಚರ್ಚಿಸಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಡಿ.23 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ತಿಳಿಸಿದ್ದಾರೆ.

## ಬೀದಿನಾಯಿ ಪೋಷಿಸಲು ಸಂಪರ್ಕಿಸಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಬೀದಿನಾಯಿಗಳನ್ನು ದತ್ತು ಪಡೆದು ಪೋಷಣೆ ಮಾಡಲು ಇಚ್ಚಿಸುವವರು ಹಾಗೂ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಚಿಸುವ ಪ್ರಾಣಿಗಳ ಸಂರಕ್ಷಣೆ ಸಂಕಲ್ಪ ಹೊಂದಿರುವವರು, ಪ್ರಾಣಿಗಳ ಮೇಲೆ ದಯೆ ಇರುವವರು ಕೂಡಲೇ ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ.

ಬೀದಿನಾಯಿಗಳಿಂದ ಸಾರ್ವಜನಿಕರಿಗೆ ಹಾಗೂ ಸಂಚರಿಸುವ ವಾಹನ ಸವಾರರಿಗೆ ಆಗುವ ತೊಂದರೆ ನಿಯಂತ್ರಿಸಲು ನಗರಸಭೆ ವತಿಯಿಂದ ಹಿಡಿದು ಅವುಗಳನ್ನು ಆಶ್ರಯತಾಣಕ್ಕೆ ಸಾಗಿಸಲಾಗುತ್ತಿದೆ.

ಹಾಗಾಗಿ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಚಿಸುವವರು ಇದ್ದಲ್ಲಿ ಎನ್.ಜಿ.ಓ ಸಂಘ ಸಂಸ್ಥೆಗಳು, ಪ್ರಾಣಿದಯಾ ಸಂಘಗಳು ಹಾಗೂ ಇತರೆ ಪ್ರಾಣಿ ಪ್ರಿಯರು ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಭೆಯ ಪೌರಾಯುಕ್ತ ಗಂಗಾಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಮಾ ಯೋಜನೆಯಡಿ ನೋಂದಣಿ

ಬೀದರ: 2025-26ನೇ ಸಾಲಿನ ಹಿಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನ ಗ್ರಾಮ ಪಂಚಾಯತಿ ಮಟ್ಟದಲ್ಲಿ ಕಡಲೆ (ಮಳೆಯಾಶ್ರಿತ) ಹಾಗೂ ಹೋಬಳಿ ಮಟ್ಟದ ಬೆಳೆಗಳಾದ, ಗೋಧಿ (ನೀರಾವರಿ), ಜೋಳ (ನೀರಾವರಿ), ಕಡಲೆ (ನೀರಾವರಿ) ಬೆಳೆಗಳಿಗೆ ನೋಂದಣಿ ಪ್ರಾರಂಭವಾಗಿದ್ದು, ಡಿಸೆಂಬರ್.31 ಕೊನೆಯ ದಿನಾಂಕವಾಗಿರುತ್ತದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತ ಸಮುದಾಯಕ್ಕೆ ಉಪಯುಕ್ತವಾದ ಯೋಜನೆಯಾಗಿರುವುದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಳೆ ನಷ್ಟ ಪರಿಸ್ಥಿತಿಯಲ್ಲಿ ರೈತರು ಅನುಕೂಲ ಪಡೆಯಬಹುದಾಗಿದೆ. ಈ ಯೋಜನೆಯಲ್ಲಿ ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ರೈತರೂ ಸಹ ಪಾಲ್ಗೊಳ್ಳಬಹುದಾಗಿದೆ. ಈ ಯೋಜನೆ ಅನುಷ್ಠಾನಗೊಳಿಸಲು "ಯೂನಿವರ್ಸಲ್ ಸೋಂಪೊ ಜನರಲ್ ಇಶ್ಯೂರೆನ್ಸ್ ಕಂಪನಿ ಲಿಮಿಟೆಡ್, ಬೆಂಗಳೂರು" ವಿಮಾ ಸಂಸ್ಥೆಯನ್ನು ಆಯ್ಕೆ ಮಾಡಲಾಗಿದೆ.ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಈಖಗಖಖಿಖ ಈಖಆ/ಪಹಣಿ/ಖಾತೆ/ಪಾಸ ಪುಸ್ತಕ, ಆಧಾರ್ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಯನ್ನು ನೀಡಬೇಕು. ಹೆಚ್ಚಿನ ವಿವರಗಳಿಗೆ ಸ್ಥಳೀಯ ವಾಣಿಜ್ಯ/ಗ್ರಾಮೀಣ/ಸಹಕಾರಿ ಬ್ಯಾಂಕುಗಳನ್ನು/ಕಾಮನ್ ಸರ್ವಿಸ್ ಸೆಂಟರ್/ಗ್ರಾಮ ಒನ್ ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಪಟ್ಟ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಸಂಪರ್ಕಿಸಬಹುದೆಂದು ಅವರು ತಿಳಿಸಿದ್ದಾರೆ.

## ಪುತ್ಥಳಿ ಅನಾವರಣ ಕಾರ್ಯಕ್ರಮ ಅದ್ದೂರಿಯಾಗಿಸೋಣ: ಬಿ.ನಾಗೇಂದ್ರ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಬಳ್ಳಾರಿ ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿಯವರು ಏರ್ಪಡಿಸಲಿರುವ ಜ.03, 2026ರಂದು ನಡೆಯುವ ಮಹರ್ಷಿ ಶ್ರೀ ವಾಲ್ಮೀಕಿಯವರ ಪುತ್ಥಳಿಯ ಅನಾವರಣ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸೋಣ ಎಂದು ಮಾಜಿ ಸಚಿವ, ಗ್ರಾಮಾಂತರ ಶಾಸಕ ಬಿ.ನಾಗೇಂದ್ರ ಹೇಳಿದರು.

ಮಂಗಳವಾರ ನಗರದ ತಮ್ಮ ನಿವಾಸದಲ್ಲಿ ತಮ್ಮನ್ನು ಭೇಟಿ ಮಾಡಿದ ಬಳ್ಳಾರಿ ನಗರ-ಜಿಲ್ಲೆಯ ವಾಲ್ಮೀಕಿ ನಾಯಕರ ಸಮಾಜದ ಮುಖಂಡರನ್ನುದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಹಾಗೂ ಜಿಲ್ಲೆಯ ಮುಖಂಡರನ್ನು, ಜನರನ್ನು ಕರೆಸಿ ಸಭೆ ನಡೆಸೋಣ, ಶಾಸಕ ನಾರಾ ಭರತ್ ರೆಡ್ಡಿಯವರ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮವನ್ನು ನಾವೆಲ್ಲರೂ ಸಹಕಾರ ನೀಡಿ ಅದ್ದೂರಿಯಾಗಿ ಯಶಸ್ವಿಗೊಳಿಸೋಣ ಎಂದರು.

ಈ ಸಂದರ್ಭ ಸಮಾಜದ ಮುಖಂಡರು ಮಾಜಿ ಸಚಿವ ನಾಗೇಂದ್ರ ಅವರಿಗೆ ಕಾರ್ಯಕ್ರಮದ ಕರಪತ್ರವನ್ನು ನೀಡಿ, ಸನ್ಮಾನಿಸಿ ಆಹ್ವಾನಿಸಿದರು.

ಈ ವೇಳೆ ವಾಲ್ಮೀಕಿ ನಾಯಕರ ಸಮಾಜದ ಪರಶುರಾಮುಡು, ದೇವಿನಗರ ಹೊನ್ನೂರಪ್ಪ, ಹಗರಿ ಗೋವಿಂದ, ಹಾವಂಭಾವಿ ಲೋಕೇಶ್, ಗಂಗಾಧರ, ಗಂಗಪ್ಪ, ಯರಗುಡಿ ಸೋಮಣ್ಣ, ಮುದಿ ಮಲ್ಲಯ್ಯ, ಪಿ.ಜಗನ್ನಾಥ, ಹುಲಿಯಪ್ಪ, ದುರ್ಗಾ ಮೋಹನ್, ಸತ್ಯನಾರಾಯಣ, ವಿ.ಎನ್.ಶ್ರೀನಾಥ್, ರಾಮಣ್ಣ, ಸೇರಿದಂತೆ ಹಲವರು ಹಾಜರಿದ್ದರು.

## ವೀರಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2025-26ನೇ ಸಾಲಿನಲ್ಲಿ ನಡೆಯುವ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ವೀರಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣನಾಯಕ. ಎಂ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಪ್ರಚಲಿತ ವಿದ್ಯಮಾನಗಳಿಂದ ಮಹಿಳಾ ಕ್ಷೇತ್ರದಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿರುವಂತಹ ಹಾಗೂ ಮಾಧ್ಯಮ ಮತ್ತು ಪತ್ರಿಕೆಗಳಲ್ಲಿ ಪ್ರಕಟಗೊಂಡಂತಹ ಮತ್ತು ಕಳೆದ 5 ವರ್ಷಗಳಿಂದ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸ್ವಯಂಸೇವಾ ಸಂಸ್ಥೆಗಳು ಹಾಗೂ ಇತರೆ 5 ಕ್ಷೇತ್ರಗಳಾದ "ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ" ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಮಹಿಳೆಯರಿಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಹಾಗೂ ಈ ವಿವಿಧ ಕ್ಷೇತ್ರಗಳಲ್ಲದೇ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವಪಾಯದಿಂದ ಪಾರು ಮಾಡಿದಂತಹ ಮಹಿಳೆಗೆ "ವೀರಮಹಿಳೆ" ಪ್ರಶಸ್ತಿಯನ್ನು ನೀಡಲು ಉದ್ದೇಶಿಸಲಾಗಿದೆ.

ಅರ್ಹ ಮಹಿಳೆಯರು ನಿಗದಿತ ನಮೂನೆ ಅರ್ಜಿ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ನಗರದ ಎಸ್‌ಪಿ ವೃತ್ತದ ಹತ್ತಿರ ದೇವಿನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಡಿ.31 ಕೊನೆಯ ದಿನವಾಗಿದೆ.

**ಷರತ್ತುಗಳು:**

18 ರಿಂದ 45 ವರ್ಷ ವಯೋಮಿತಿ ಹೊಂದಿರಬೇಕು. ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ವೇತನ ಪಡೆಯುತ್ತಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ. ವೀರ ಮಹಿಳೆ ಪ್ರಶಸ್ತಿ ಪಡೆಯುವ ಮಹಿಳೆಯು ವಿಶೇಷ ಶೌರ್ಯ ಹಾಗೂ ಸಾಧನೆಯನ್ನು ಮಾಡಿರಬೇಕು. ಈ ಸಾಧನೆಯು ಸಾರ್ವಜನಿಕರ ಗಮನಕ್ಕೆ ಬಂದಿರಬೇಕು ಹಾಗೂ ಈ ಸಾಧನೆಯು ಪ್ರಶಸ್ತಿ ಪಡೆಯುವ ಹಿಂದಿನ ವರ್ಷದ ಜನವರಿ 01 ರಿಂದ ಡಿಸೆಂಬರ್ 31ರ ಒಳಗೆ ಇರಬೇಕು.

ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ದೂ.08392-266219 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಣವಾಳ ಗ್ರಾಮ ಪಂಚಾಯಿತಿಯಲ್ಲಿ ವಿಕಲಚೇತನರ ಸಮನ್ವಯ ಗ್ರಾಮ ಸಭೆ




**ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ:**

ತಾಲೂಕಿನ ಹಣವಾಳ ಗ್ರಾಮ ಪಂಚಾಯಿತಿಯ ಶ್ರೀ ಶರಣಬಸವೇಶ್ವರ ದೇವಸ್ಥಾನದಲ್ಲಿ ವಿಕಲಚೇತನರ ವಿಶೇಷ ಸಮನ್ವಯ ಗ್ರಾಮ ಸಭೆಯನ್ನು ಈ ಕಾರ್ಯಕ್ರಮದ ಕುರಿತು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಾದ ಶ್ರೀಮತಿ ಲಕ್ಷ್ಮಿ ಬಾಯಿ ಮಾತನಾಡಿ ವಿಕಲಚೇತನರಿಗೆ ನಮ್ಮ ಗ್ರಾಮ ಪಂಚಾಯಿತಿಯಿಂದ ಏನು ಸೌಲಭ್ಯಗಳು ಸಿಗಬೇಕಾಗಿದೆ ಅವರಿಗೆ ನ್ಯಾಯಯುತವಾಗಿ ನಮ್ಮ ಗ್ರಾಮ ಪಂಚಾಯಿತಿಯಿಂದ ನೀಡುತ್ತೇವೆ ಮತ್ತು ಉದ್ಯೋಗ ಖಾತ್ರಿಯೋಜನೆ, ವಿಕಲಚೇತನರ ಅನುದಾನವನ್ನು ಖರ್ಚು ಮಾಡುತ್ತೇವೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಗುಂಡೂರು ಗ್ರಾಮ ಪಂಚಾಯಿತಿಯ ಗ್ರಾಮೀಣ ಪುನರ್ವಸತಿ ಕಾರ್ಯಕರ್ತನಾದ ಹುಲಗಪ್ಪ ಕಾಗೇರಿ ಮಾತನಾಡಿ .ನಮ್ಮ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆ ವತಿಯಿಂದ ವಿಕಲಚೇತನರಿಗೆ ಹಲವಾರು ಯೋಜನೆಗಳನ್ನ ಮನಬಾಗಿಲಿಗೆ ಮುಟ್ಟಿಸುವಂತಹ ಕಾರ್ಯ ನಮ್ಮ ಕಾರ್ಯಕರ್ತರು ಮಾಡುತ್ತಿದ್ದಾರೆ ನಮ್ಮ ಇಲಾಖೆಯಿಂದ ವಿಕಲಚೇತನರ ಯುಡಿಐಡಿ ಕಾರ್ಡು. ವಿವಾಹ ಪ್ರೋತ್ಸಾಧನ. ಪೋಷಕರಿಗೆ ಹಾರೈಕೆ ಭತ್ಯ. ಸಾಧನ. ಸಲಕರಣೆಗಳು. ಲ್ಯಾಪ್ ಟಾಪ್. ಯಂತ್ರ ಚಾಲಿತ ವಾಹನ ಇನ್ನು ಮುಂತಾದ ಯೋಜನೆಗಳನ್ನು ನಮ್ಮ ಇಲಾಖೆಯಿಂದ ನೀಡುತ್ತಾರೆ ಆದ್ದರಿಂದ ಗ್ರಾಮೀಣ ಭಾಗದ ವಿಕಲಚೇತನರು ಈ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ಯಂಕಮ್ಮ ಕುರಿ. ತಾಲೂಕ ಎಂ ಆರ್ ಡಬ್ಲ್ಯೂ ಕಾರ್ಯಕರ್ತೆಯಾದ ಶ್ರೀಮತಿ ಮಂಜುಳಾ ಪುರಾಣಿಕ ಮಠ. ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳಾದ ನೂರಸಾಬ್. ಗ್ರಾಮ ಪಂಚಾಯಿತಿಯ ವಿ ಆರ್ ಡಬ್ಲ್ಯೂ ಕಾರ್ಯಕರ್ತೆಯಾದ ಶ್ರೀಮತಿ ಯಂಕಮ್ಮ. ಸಿಬ್ಬಂದಿಗಳಾದ. ವೆಂಕಟೇಶ. ಬಸವರಾಜ. ರಾಜಮ್ಮ. ಗ್ರಾಮದ ವಿಕಲಚೇತನರಾದ. ದೊಡ್ಡಬಸವ. ದುರುಗೇಶ. ಈಶಮ್ಮ ಹುಲಿಗೆಮ್ಮ ಇನ್ನು ಮುಂತಾದ ವಿಕಲಚೇತನರು ಗ್ರಾಮ ಸಭೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.

## ವಿದ್ಯಾರ್ಥಿಗಳು ವಿವಿಧ ಕೌಶಲಗಳನ್ನು ಮೈಗೂಡಿಸಿಕೊಳ್ಳಿ: ಚಂದ್ರಶೇಖರ ದೊಡ್ಡಮನಿ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ವಿದ್ಯಾರ್ಥಿಗಳಿಗೆ ಕೌಶಲ್ಯ ಅತ್ಯವಶ್ಯಕವಾಗಿದೆ. ಕೌಶಲ್ಯ ಕುರಿತು ಸರ್ಕಾರವು ಮನಗಂಡು ಪ್ರೌಢ ಶಾಲಾ ಹಂತದಲ್ಲಿಯೇ ಎನ್‌ಎಸ್‌ಕ್ಯೂಎಫ್‌ನ್ನು ಪರಿಚಯಿಸಲಾಗಿದ್ದು, ವಿದ್ಯಾರ್ಥಿಗಳು ಸರ್ಕಾರಿ ನೌಕರಿಯನ್ನೇ ಅವಲಂಬಿಸದೇ ವಿವಿಧ ಕೌಶಲಗಳನ್ನು ಮೈಗೂಡಿಸಿಕೊಂಡು ಸ್ವಾವಲಂಬಿಗಳಾಗಿ ಬದುಕಬೇಕೆಂದು ಮಾನವಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಚಂದ್ರಶೇಖರ ದೊಡ್ಡಮನಿ ಅವರು ಹೇಳಿದರು.

ಇತ್ತೀಚಿಗೆ ಜಿಲ್ಲೆಯ ಮಾನವಿ ಪಟ್ಟಣದ ಬಸವ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ವತಿಯಿಂದ 2025-26ನೇ ಪಿಎಮ್‌ಎನ್‌ಎಮ್ ಯೋಜನೆಯಡಿಯಲ್ಲಿ ಶಿಶಿಕ್ಷು ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ವಿಶೇಷವಾಗಿ ಗ್ರಾಮೀಣ ಭಾಗದ ಬಡ, ಮದ್ಯಮ ವರ್ಗದ ವಿದ್ಯಾರ್ಥಿಗಳು ಐಟಿಐ ನಂತಹ ವೃತ್ತಿ ಶಿಕ್ಷಣದ ಕಡೆ ಆಸಕ್ತಿ ವಹಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಅವರ ಆರ್ಥಿಕ ಸ್ಥಿತಿಗತಿಯ ಸುಧಾರಣೆಗೆ ಹಾಗೂ ಉತ್ತಮ ಜೀವನ ನಿರ್ವಹಣೆಗೆ ಅನುಕೂಲಕರವಾಗಿದೆ ಎಂದರು.

ಈ ವೇಳೆ ತಾಲೂಕು ನೌಕರರ ಸಂಘದ ಅಧ್ಯಕ್ಷರಾದ ಸುರೇಶ ಕುಮಾರ ಕುರ್ಡಿ ಅವರು ಮಾತನಾಡಿ, ನಾವು ವಿದ್ಯಾರ್ಥಿಗಳಾಗಿದ್ದಾಗ ಜಿಲ್ಲೆಗೆ ಕೇವಲ ಒಂದೇ ಒಂದು ಸರ್ಕಾರಿ ಐಟಿಐ ಕಾಲೇಜು ಇತ್ತು, ಇಂದು ಸರ್ಕಾರ ಪ್ರತಿ ತಾಲೂಕು ಮತ್ತು ಗ್ರಾಮೀಣ ಭಾಗದಲ್ಲಿಯೂ ಕೂಡ ಸರ್ಕಾರಿ ಐಟಿಐ ಕಾಲೇಜುಗಳನ್ನು ಪ್ರಾರಂಬಿಸುವ ಮೂಲಕ ಗ್ರಾಮೀಣ ಭಾಗದ ಬಡ ಮದ್ಯಮ ವರ್ಗಗಳಿಗೆ ಹಾಗೂ ಎಂಬಿಬಿಎಸ್ ಮತ್ತು ಇಂಜಿನೀಯರಿಂಗ್ ನಂತಹ ಉನ್ನತ ಶಿಕ್ಷಣ ಪಡೆಯಲು ಸಾದ್ಯವಾಗಿದೆ. ವಿದ್ಯಾರ್ಥಿಗಳಿಗೆ ಐಟಿಐ ಜೀವನ ಸಂಜೀವಿನಿಯಾಗಿದೆ ಎಂದರು.




ಶಿಶಿಕ್ಷು ಮೇಳದಲ್ಲಿ ಜೆಎಸ್‌ಡಬ್ಲ್ಯೂ ತೋರಣಗಲ್ಲು, ಹೋಂಡಾ ಕಂಪನಿ ಬೆಂಗಳೂರು, ಇ2ಇ ಕನ್ಸಲ್ಟೆನ್ಸಿ ರಾಯಚೂರು ಹಾಗೂ ಇತರ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ಜಿಲ್ಲೆಯ ವಿವಿಧ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ತರಬೇತಿದಾರರು ಮತ್ತು ಪಿಯುಸಿ ಹಾಗೂ ಪದವಿಯಲ್ಲಿ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಮೇಳದಲ್ಲಿ ಭಾಗವಹಿಸಿದ್ದರು.40ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ನೇಮಕಾತಿ ಪತ್ರ: ಪಿಎಮ್‌ಎನ್‌ಎಮ್ ಯೋಜನೆಯಡಿಯಲ್ಲಿ ಶಿಶಿಕ್ಷು ಮೇಳವನ್ನು ಹಮ್ಮಿಕೊಳ್ಳಲಾಗಿತ್ತು. ಮೇಳಕ್ಕೆ ಆಗಮಿಸಿದ್ದ ವಿವಿಧ ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಿದರು. ಮೇಳದಲ್ಲಿ ಸುಮಾರು 60 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ನೇಮಕಾತಿ ಪತ್ರವನ್ನು ನೀಡಲಾಯಿತು.

ಇದೇ ಸಂದರ್ಭದಲ್ಲಿ ಮಾನವಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ರುದ್ರಗೌಡ ಮಾಲಿಪಾಟೀಲ್, ಬಸವ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ತಿಪ್ಪಣ್ಣ ಹೊಸಮನಿ, ತಾಲೂಕು ನೌಕರರ ಸಂಘದ ನಿರ್ದೇಶಕರಾದ ಮುಕ್ಕಣ್ಣ .ಕೆ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಿಬ್ಬಂದಿಗಳಾದ ಗಂಗಪ್ಪ, ಶರಣಪ್ಪ ಹಿಪ್ಪಲದಿನ್ನಿ, ನಾಗರಾಜ ಪಿ. ಸೇರಿದಂತೆ ಜಿಲ್ಲೆಯ ವಿವಿಧ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಇದ್ದರು.

# ವಿವಿಧ ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಸಿಇಓ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲೆಯ ಜಮಖಂಡಿ ತಾಲೂಕಿನ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ಪರಿಶೀಲಿಸಿದರು.

ಹಿಪ್ಪರಗಿ ಗ್ರಾಮದ ವಾಲ್ಮೀಕಿ ವಸತಿ ಪ್ರವೇಶದಲ್ಲಿ ಕೈಗೊಂಡ ಓವರ್ ಹೆಡ್ ಟ್ಯಾಂಕ್ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಗುಣಮಟ್ಟ ಪರಿಶೀಲನೆ ನಡೆಸಿ ನಿಗದಿತ ಅವಧಿಯಲ್ಲಿ ಕೆಲಸ ಪೂರ್ಣಗೊಳಿಸುವಂತೆ ಅಧಿಕಾರಿ ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ವಾಲ್ಮೀಕಿ ವಸತಿ ಪ್ರದೇಶದ ಜನರಿಗೆ ನಿರಂತರ ಹಾಗೂ ಸುರಕ್ಷಿತ ಕುಡಿಯುವ ನೀರು ಒದಗಿಸುವ ಕಾರ್ಯವಾಗಬೇಕು ಎಂದು ತಿಳಿಸಿದರು.

ಹಿಪ್ಪರಗಿ ಗ್ರಾಮದ ಜ್ಯಾಕ್‌ವೆಲ್ ಕಾಮಗಾರಿಯನ್ನು ಪರಿಶೀಲಿಸಿದ ಸಿಇಓ ಅವರು ಜ್ಯಾಕ್‌ವೆಲ್ ಕಾಮಗಾರಿ ಗ್ರಾಮೀಣ ಕುಡಿಯುವ ನೀರು ಪೂರೈಕೆ ವ್ಯವಸ್ಥೆಯ ಪ್ರಮುಖ ಅಂಗವಾಗಿದ್ದು,

ದೀರ್ಘಕಾಲಿನ ನೀರು ಲಭ್ಯತೆಗೆ ಸಹಕಾರಿಯಾಗುತ್ತದೆ. ಕಾಮಗಾರಿಯಲ್ಲಿ ಯಾವುದೇ ವಿಳಂಬವಾಗದಂತೆ ಹಾಗೂ ವಿನ್ಯಾಸದ ಪ್ರಕಾರವೇ ಕೆಲಸ ನಡೆಸುವಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಂತರ ಶುದ್ಧೀಕರಣ ಘಟಕ ಕಾಮಗಾರಿಯನ್ನು ಪರಿಶೀಲಿಸಿದರು. ಘಟಕ ಪೂರ್ಣಗೊಂಡ ನಂತರ ಜನತೆಗೆ ಶುದ್ಧ ಕುಡಿಯುವ ನೀರು ಪೂರೈಸುವ ಕಾರ್ಯವಾಗಬೇಕೆಂದು ತಿಳಿಸಿದರು.

ಇದೇ ವೇಳೆ ಜಮಖಂಡಿಯ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿನ ವಿವೇಕ ಕೊಠಡಿಗಳ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಬಾಲಕಿಯರ ಶಿಕ್ಷಣಕ್ಕೆ ಅನುಕೂಲವಾಗುವಂತಹ ಉತ್ತಮ ಮೂಲಸೌಕರ್ಯ ಒದಗಿಸಿ,

ಸುಸಜ್ಜಿತ ತರಗತಿ ಕೊಠಡಿಗಳು ನಿರ್ಮಾಣವಾಗಬೇಕು ಇದರಿಂದ ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗುತ್ತವೆ. ಕಾಮಗಾರಿಯನ್ನು ಶೀಘ್ರ ಹಾಗೂ ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಭೇಟಿ ಸಮಯದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು & ನೈರ್ಮಲ್ಯ ವಿಭಾಗ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ವಂದೆ, ಜಮಖಂಡಿ ತಾಲೂಕಾ ಕಾರ್ಯನಿರ್ವಾಹಣ ಅಧಿಕಾರಿ ಸಚಿನ್. ಎಂ ಸೇರಿದಂತೆ ಇತರರು ಇದ್ದರು.

# ಹೆಚ್ ಡಿ. ಕುಮಾರಸ್ವಾಮಿ ಜನ್ಮದಿನಾಚರಣೆ ವಿಶೇಷವಾಗಿ ಆಚರಿಸಿದ ಕೆ.ಅಶೋಕ್



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕೇಂದ್ರ ಸಚಿವ ಹಾಗೂ ರಾಜ್ಯದ ಮಾಜಿ ಮುಖ್ಯಮಂತ್ರಿ ಹೆಚ್ ಡಿ. ಕುಮಾರಸ್ವಾಮಿ ಅವರ 67ನೇ ಜನ್ಮದಿನಾಚರಣೆಯನ್ನ ಅರ್ಥಪೂರ್ಣವಾಗಿ ಆಚರಿಸಿದ ಬಳ್ಳಾರಿಯ ಸಂಗನಕಲ್ ಗ್ರಾಮದ ಅಭಿಮಾನಿ ಅಶೋಕ್.

ಸಂಗನಕಲ್ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಅಶೋಕ್ ಅವರು ಶಾಲೆಯ ಐಞರ ಯಿಂದ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ನೂರಾರು ಮಕ್ಕಳಿಗೆ ನೋಟ್ ಪುಸ್ತಕ ವಿತರಿಸುವ ಮೂಲಕ ಕುಮಾರಸ್ವಾಮಿ ಅವರ ಜನ್ಮದಿನಾಚರಣೆಯನ್ನ ಅರ್ಥಪೂರ್ಣವಾಗಿ ಆಚರಿಸಿದ್ದಾರೆ.

ಕಾರ್ಯಕ್ರಮದಲ್ಲಿ ಗ್ರಾಮಪಂಚಾಯತಿ ಅಧ್ಯಕ್ಷ್ಯರಾದ, ಗೋವಿಂದಮ್ಮ ಸದಸ್ಯರಾದ ಮಂಜುನಾಥ ಗೌಡ ಹಾಗೂ ಪುನೀತ್ ನಾಗಿರೆಡ್ಡಿ, ಖಆಒಅ ಅಧ್ಯಕ್ಷ್ಯರಾದ ಲಕ್ಷ್ಮೀಪತಿ, ಶಾಲೆಯ ಮುಖ್ಯ ಗುರುಗಳಾದ, ಅ.ಶಿವಣ್ಣ.

ಶಿಕ್ಷಕರಾದ, ಮಂಜುನಾಥ ಮತ್ತು ಬಸವರಾಜ ಸೇರಿದಂತೆ, ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಲಿಂಗತ್ವ ಅಲ್ಪಸಂಖ್ಯಾತರ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮಾಜಿ ದೇವದಾಸಿ ಪುನರ್ವಸತಿ, ಚೇತನ ಮತ್ತು ಉದ್ಯೋಗಿನಿ ಹಾಗೂ ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಿಗೆ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಜನವರಿ 15 ಕೊನೆಯ ದಿನವಾಗಿದ್ದು, ಬಾಪೂಜಿ ಸೇವಾ ಕೇಂದ್ರ/ ಗ್ರಾಮ ಒನ್/ಬೆಂಗಳೂರು ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು. 2023-24 ಮತ್ತು 2024-25 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆದುಕೊಳ್ಳದವರು ಮತ್ತೆ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಸಲಾಗಿದೆ.

# ಕಾಣೆಯಾಗಿದ್ದಾರೆ.



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಬಾಗಲಕೋಟ ತಾಲೂಕಿನ ಚಿಕ್ಕಗುಳಬಾಳ ಗ್ರಾಮದ ದುರಗಪ್ಪ ಲೆಂಕಪ್ಪ ಮಾದರ ಜೂನ್ 01 ರಂದು ಬೆಳ್ಳಿಗೆ 8.30 ಗಂಟೆಯ ಸುಮಾರಿಗೆ ಚಿಕ್ಕಗುಳಬಾಳ ಗ್ರಾಮದಲ್ಲಿರುವ ಮನೆಯಿಂದ ಎಲ್ಲಿಯೋ ಹೋಗಿ ಕಾಣೆಯಾಗಿರುತ್ತಾರೆ. ಇವರ ವಯಸ್ಸು 60 ವರ್ಷ 5.5 ಅಡಿ ಎತ್ತರ ಮತ್ತು ಬಿಳಿ ಕೂದಲು ಸಾದಕಪ್ಪು ಮೈಬಣ್ಣ ಉದ್ದನೇಯ ಮುಖ ಹಾಗೂ ಮೈಯಿಂದ ತೆಳ್ಳಗೆ ಮೈಕಟ್ಟು ಹೊಂದಿರುತ್ತಾರೆ. ಕನ್ನಡ ಮಾತನಾಡುತ್ತಾರೆ. ಈ ವ್ಯಕ್ತಿ ಎಲ್ಲಾದರೂ ಕಂಡು ಬಂದರೆ ಪಿಎಸ್ಐ ಬಾಗಲಕೋಟ ಗ್ರಾಮೀಣ ಪೋಲೀಸ್ ಠಾಣೆ ಪೋನ್ ನಂ 9480803947, ಬಾಗಲಕೋಟ ಕಂಟ್ರೋಲ್ ರೂಮ್ 08354-220460 ಸಂಪರ್ಕಿಸುವಂಥೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.


**PUBLIC NOTICE**

My name is Rimsha Mantasha Qureshi D/o Abdul Shahid Qureshi but due to oversight my name wrongly mentioned in my 10th CBSE marks card as Rimsha Quadri and my father name was shown as Shahid Quadri and my mother name was also wrongly shown as Benazeer Quadari. I request related authority to correct my name in 10th CBSE marks card as per in my Aadhar Card, Voter ID, Birth Certificate, PAN Card and other documents are having my name is Rimsha Mantasha Qureshi D/o Abdul Shahid Qureshi and also mother name is Benazeer. Vide affadavit Dtd. 20th March, 2025 I sworn the above mentioned name is true. There is no any fraud or misappropriation in this, If i false I will be held responsible for the cause and consequences. Sd/- Rimsha Mantasha Qureshi D/o Abdul Shahid Qureshi, R/o. Basavkalyan (Bidar)


# ಯುವನಿಧಿ : ಸ್ವಯಂ ಘೋಷಣೆಗೆ ಅವಧಿ ವಿಸ್ತರಣೆ

ಬಾಗಲಕೋಟೆ: ಯುವನಿಧಿ ಯೋಜನೆಗೆ ಸಂಬಂದಿಸಿದಂತೆ ಫಲಾನುಭವಿಗಳು ತಮ್ಮ ಸ್ವಯಂ ಘೋಷಣೆಯನ್ನು ಮಾಡಲು ಡಿಸೆಂಬರ 31 ರವರೆಗೆ ವಿಸ್ತರಿಸಲಾಗಿದೆ. ಈ ಮಾಹೆಗೆ ಸಂಬಂದಿಸಿದಂತೆ ಡಿಸೆಂಬರ 31 ರವರೆಗೆ ಸ್ವಯಂ ಘೋಷಣೆಯನ್ನು ಜಾಲತಾಣ http://sevasindhuservices.karnataka.gov.in ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235337ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂಬ್ರಾಡರಿ, ಫ್ಯಾಬ್ರಿಕ್ ಪೆಂಟಿಂಗ್ ತರಬೇತಿ

ಬಾಗಲಕೋಟೆ,: ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಹಳಿಯಾಳ ಸಂಸ್ಥೆಯಲ್ಲಿ 18 ರಿಂದ 50 ವಯಸ್ಸಿನ ಮಹಿಳೆಯರಿಗಾಗಿ 2026 ಜನವರಿ ಎರಡನೇ ವಾರದಲ್ಲಿ 31 ದಿನಗಳ ಹ್ಯಾಂಡ್ ಹಾಗೂ ಮಷೀನ್ ಎಂಬ್ರಾಯಡರಿ ಮತ್ತು ಫ್ಯಾಬ್ರಿಕ್ ಪೆಂಟಿಂಗ್ ಉಚಿತ ತರಬೇತಿ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಪಡೆಯಲು ಆಸಕ್ತಿ ಇರುವ ಮಹಿಳೆಯರು ತಮ್ಮ ಹೆಸರು, ವಿಳಾಸಗಳನ್ನು ಬರೆದು 9483485489 ವಾಟ್ಸಪ್ ಮೂಲಕ ಅರ್ಜಿ ಸಲ್ಲಿಸಬಹುದು. ತರಬೇತಿಯಲ್ಲಿ ಊಟ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿರುತ್ತದೆ. ಮೊದಲ ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಆದ್ಯತೆ ನೀಡಲಾಗುವುದು ಎಂದು ಆರ್‌ಸೆಟ್ ಸಂಸ್ಥೆ ಪ್ರಕಟಣೆಯಲ್ಲಿ ತಿಳಸಿದೆ.

# ಬ್ರಾಹ್ಮಣ ಸಮುದಾಯದವರಿಗೆ ಅರ್ಜಿ ಆಹ್ವಾನ

ಬಾಗಲಕೋಟೆ : ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ರಾಜ್ಯ ಬ್ರಾಹ್ಮಣ ಸಮುದಾಯ ಪ್ರತಿಬಾವಂತ ಪದವೀಧರು ನಾಗರಿಕ ಸೇವೆಗಳಾದ ಐ.ಎ.ಎಸ್. ಹಾಗೂ ಕೆ.ಎ.ಎಸ್ ಸ್ಪರ್ದಾತ್ಮಕ ಪರೀಕ್ಷೆಗಳನ್ನು ಬರೆದು ಭಾರತದ, ಕರ್ನಾಟಕದ ಆಡಳಿತಾತ್ಮಕ ಸೇವೆಗಳಲ್ಲಿ ತೊಡಗಿಸಿಕೊಳ್ಳಲು ಉತ್ತೇಜನ ನೀಡುವ ಸಲುವಾಗಿ ಚಾಣಕ್ಯ ಆಡಳಿತ ತರಬೇತಿ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿಯಲ್ಲಿ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಐ.ಎ.ಎಸ್ ಹಾಗೂ ಕೆ.ಎ.ಎಸ್ ಸ್ಪರ್ದಾತ್ಮಕ ಪರೀಕ್ಷೆಗಳ ತರಬೇತಿ ಪಡೆಯಲು 2025-26 ನೇ ಸಾಲಿನಲ್ಲಿ ಪ್ರವೇಶಾತಿ ಪಡೆದು ಪಾವತಿಸಲಾದ ತರಬೇತಿ ಶುಲ್ಕದ ಮೊತ್ತದಲ್ಲಿ ಗರಿಷ್ಠ ರೂ.1.00 ಲಕ್ಷಗಳಿಗೆ ಮಿತಿಗೊಳಿಸಿ ಡಿಟಿಪಿ ಮೂಲಕ ನೇರವಾಗಿ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿಸಬಹುದಾಗಿದೆ. ಆಸಕ್ತ ಅಭ್ಯರ್ಥಿಗಳು ಚಾಣಕ್ಯ ಆಡಳಿತ ತರಬೇತಿ ಯೋಜನೆನೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿಸೆಂಬರ್ 31 ಆಗಿದೆ. ಅರ್ಜಿಗಳನ್ನು ಅನ್‌ಲೈನ್ https://ksbdb.karnataka.gov.in ಮೂಲಕ ಅರ್ಜಿ ಸಲ್ಲಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಆಶುಭಾಷಣ ಸ್ಪರ್ಧೆ ಶಿಕ್ಷಕ ಸಂಜಯ್ ರಾಜ್ಯಮಟ್ಟಕ್ಕೆ ಆಯ್ಕೆ

**ಮಲ್ಲಮ್ಮ ನುಡಿ ಬಾಗಲಕೋಟೆ:**

ತಾಲ್ಲೂಕಿನ ಶಿರೂರ ಪಟ್ಟಣದ ಸಿದ್ದೇಶ್ವರ ಪ್ರೌಢಶಾಲೆಯ ಶಿಕ್ಷಕ ಸಂಜಯ ನಡುವಿನಮನಿ ಸಹಪಠ್ಯ ಚಟುವಟಿಕೆಗಳ ಆಶುಭಾಷಣ ಸ್ಪರ್ಧೆಯ ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಬಾಗಲಕೋಟೆಯ ಆರ್. ಎಂ.ಎಸ್.ಎ.ವಿದ್ಯಾಲಯದಲ್ಲಿ ಮಂಗಳವಾರ

ಜರುಗಿದ ಪ್ರೌಢಶಾಲಾ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ಜಿಲ್ಲಾ ಮಟ್ಟದ ಆಶುಭಾಷಣ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹತೆ ಪಡೆದರು.



ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸಂಜಯ ನಡುವಿನಮನಿ ಅವರಿಗೆ ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿ ಡಿ.ಎಂ.ಯಾವಗಲ್ ಪ್ರಶಸ್ತಿ ಪತ್ರ ನೀಡಿದರು. ಈ ಸಂದರ್ಭದಲ್ಲಿ

ವಿಷಯ ಪರಿವೀಕ್ಷಕರಾದ ಮಾಡಲಗೇರಿ ಹಾಗೂ ಎಂ.ಎಸ್.ನ್ಯಾಮಗೌಡ, ಆರ್. ಎಂ.ಎಸ್.ಎ.ವಿದ್ಯಾಲಯದ ಉಪ ಪ್ರಾಚಾರ್ಯ ಬಿ.ವಿ.ಪಾಟೀಲ ಇದ್ದರು.

# ಸಂಭ್ರಮದ ಹಳ್ಳೂರ ಬಸವೇಶ್ವರ ಜಾತ್ರೆ



**ಮಲ್ಲಮ್ಮ ನುಡಿ ಬಾಗಲಕೋಟೆ:**

ತಾಲೂಕಿನ ಹಳ್ಳೂರ ಬಸವಣ್ಣನ ರಥೋತ್ಸವ ಮಂಗಳವಾರ ಭಕ್ತ ಜನಸಾಗರದ ಮಧ್ಯೆ ವಿಜೃಂಭಣೆಯಿಂದ ನಡೆಯಿತು.

ರಾಜ್ಯಾದ್ಯಂತ ಭಕ್ತರನ್ನು ಹೊಂದಿರುವ ಹಳ್ಳೂರ ಬಸವಣ್ಣನ ಜಾತ್ರೆ ಐದು ದಿನಗಳ ಕಾಲ ನಡೆಯಲಿದ್ದು, ಮಂಗಳವಾರ ಜರುಗಿದ ರಥೋತ್ಸವದಲ್ಲಿ ಅಪಾರ ಸಂಖ್ಯೆಯ ಭಕ್ತ ಸಮೂಹ ಸೇರಿದ್ದರು. ಚಕ್ಕಡಿ, ಟ್ರ್ಯಾಕ್ಟರ್, ಟಂಟಂ, ಕಾರು ಮತ್ತಿತರ ವಾಹನಗಳಲ್ಲಿ ಆಗಮಿಸಿದ್ದ ಜನಸ್ತೋಮ ತೇರು ಸಾಗಿ ಬರುತ್ತಿದ್ದಂತೆ ಹಣ್ಣು, ಕಾಯಿ, ಉತ್ತತ್ತಿ, ಬೆಂಡು, ಬೆತ್ತಾಸು ಎಸೆದು ಭಕ್ತಿಯ ಹರಕೆ ತೀರಿಸಿದರು.

ಬೆಳಿಗ್ಗೆ ಬಸವೇಶ್ವರ ದೇವಸ್ಥಾನದಲ್ಲಿ ಬಸವೇಶ್ವರ-ನೀಲಾಂಬಿಕೆ ಅಕ್ಷತಾರೋಪಣ ಕಾರ್ಯಕ್ರಮ ಜರುಗಿತು. ನಂತರ ಬಸವಣ್ಣನ ಮೂರ್ತಿಗೆ ವಿವಿಧ ಪೂಜಾ ಕೈಂಕರ್ಯಗಳು ನೆರವೇರಿದವು. ಮುಂಜಾನೆ 8 ಗಂಟೆಯಿಂದ ರಥದ ಕಳಸದ ಉತ್ಸವ ಜರುಗಿತು. ಸೋಮವಾರ ರಾತ್ರಿಯಿಂದ ಬೆಳಗಿನವರೆಗೆ ಬಾಸಿಂಗೋತ್ಸವ ನಡೆಯಿತು. ಜಾತ್ರೆಯ ಅಂಗವಾಗಿ ವಿವಿಧ ಸ್ಪರ್ಧೆಗಳು, ರಸಮಂಜರಿ, ಕುಸ್ತಿ ಪಂದ್ಯ, ಕ್ರಿಕೆಟ್ ಪಂದ್ಯಾವಳಿ ನಡೆಯಲಿವೆ.

# ಆತ್ಮ ನಿರ್ಭರ ಭಾರತದ ಸಂಕಲ್ಪ ಅಭಿಯಾನ



ಬಾಗಲಕೋಟೆ: ಪ್ರತಿ ಮನೆ ಮನೆಯೂ ಸ್ವದೇಶಿಯಾಗಲಿ ಎಂದು ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದ ಕಾರ್ಯಕರ್ತ-ರಿಂದ ಪ್ರತಿ ಮನೆ ಮನೆಗೆ ತೆರಳಿ ಸ್ವದೇಶಿ ಜಾಗೃತಿ ಅಭಿಯಾನ ಯಶಸ್ವಿಯಾಗಿ ಜರುಗಿತು.

ನವನಗರದ 47 ನೇ ಸೆಕ್ಟರ್‌ನಲ್ಲಿ ಪಂಡಿತ ದೀನ ದಯಾಳ ಉಪಾಧ್ಯಯ ಮಹಾಶಕ್ತಿ ಕೇಂದ್ರ 23 ನೇ ವಾರ್ಡಿನಲ್ಲಿ ಆತ್ಮ ನಿರ್ಭರ ಭಾರತ ಅಭಿಯಾನ ಅಂಗವಾಗಿ ಪಕ್ಷದ ಮುಖಂಡರಾದ ಯಲ್ಲಪ್ಪ ಭಜಂತ್ರಿ ಅವರ ಮನೆಯಿಂದ ಚಾಲನೆ ನೀಡಿಲಾಯಿತು, ಮಾಜಿ ಶಾಸಕರಾದ ಡಾ.ವೀರಣ್ಣ ಚರಂತಿಮಠ ಅವರು ಮನೆ ಮನೆಗೆ ಸ್ಟೀಕರ ಹಚ್ಚಿ ಸ್ವದೇಶಿ ಜಾಗೃತಿ ಕರಪತ್ರ ನೀಡುತ್ತಾ ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ವಿಕಸಿತ ಭಾರತ ಕನಸು ಸಾಕಾರಗೊಳಿಸಲು ದೇಶವನ್ನು ಆತ್ಮನಿರ್ಭರ ಭಾರತ ಮಾಡುವುದು ಅಗತ್ಯ, ಈ ನಿಟ್ಟಿನಲ್ಲಿ ಸ್ವದೇಶಿ ವಸ್ತುಗಳ ಬಳಕೆ ಯುವಜನರ ಬದುಕಿನ ಭಾಗವಾಗಬೇಕು, ಆತ್ಮನಿರ್ಭರ ಭಾರತ ನಮ್ಮ ದೇಶಕ್ಕೆ ಹೊಸ ಪರಿಕಲ್ಪನೆಯಲ್ಲ, ಹಿಂದೆ ನಮ್ಮ ಹಳ್ಳಿಗಳು ಸ್ವಾವಲಂಬಿಗಳಾಗಿದ್ದವು, ಹಾಲು ಮೊಸರು, ದವಸ ಧಾನ್ಯ, ಬಟ್ಟೆ ಬರೆ, ಎಲ್ಲವೂ ಸ್ಥಳೀಯವಾಗಿಯೆ ಉತ್ಪಾದನೆಯಾಗುತ್ತಿದ್ದವು, ಬರಬರುತ್ತ ನಾವೆಲ್ಲ

ಪರಾವಲಂಬಿಗಳಾಗುತ್ತ ಬಂದೆವು, ಅವುಗಳ ಪರಿಣಾಮ ಆರೋಗ್ಯ, ಸಮಾಜ, ಅರ್ಥವ್ಯವಸ್ಥೆ ಸೇರಿದಂತೆ ಇಡೀ ದೇಶದ ಮೇಲಾಯಿತು, ಮತ್ತೆ ನಾವು ಸ್ವಾವಲಂಬಿ ಭಾರತ ನಿರ್ಮಿಸಲು ಕೇಂದ್ರ ಸರಕಾರ ಆತ್ಮನಿರ್ಭರ ಭಾರತ ನಿರ್ಮಾಣದ ಉಪಕ್ರಮ ಘೋಷಿಸಿತು, ದೇಶದ ಆರ್ಥಿಕ ಪ್ರಗತಿ, ಆಧುನಿಕತೆಗೆತಕ್ಕಂತೆ ಮೂಲಸೌಕರ್ಯಗಳ ನಿರ್ಮಾಣ, ತಂತ್ರಜ್ಞಾನ ಚಾಲಿತ ವ್ಯವಸ್ಥೆ ರೂಪಿಸುವುದು, ಆತ್ಮ ನಿರ್ಭರ ಭಾರತಕ್ಕೆ ನಾವೆಲ್ಲ ಉಡುಗೆ, ತೊಡುಗೆ, ತಿಂಡಿ, ತಿನಸುಗಳಲ್ಲಿ ಸ್ವದೇಶಿ ನಿರ್ಮಿತ ವಸ್ತು-ಉತ್ಪನ್ನಗಳನ್ನು ಬಳಸಬೇಕು, ಯುವಜನರು ಸ್ವದೇಶಿ ಭಾಷೆ ಹಾಗೂ ಸ್ವಭೂಷಣಗಳನ್ನು ಬದುಕಿನ ಮಂತ್ರಗಳಾಗಿ ಅಳವಡಿಸಿಕೊಳ್ಳಬೇಕು ಎಂದರು.

ಅಭಿಯಾನದಲ್ಲಿ ರಾಜು ರೇವಣಕರ, ಬಸವರಾಜ ಯಂಕಂಚಿ, ಭಾಗೀರತಿ ಪಾಟೀಲ, ಸವಿತಾ ಲಂಕ್ಕೆನ್ನವರ, ಜ್ಯೋತಿ ಭಜಂತ್ರಿ, ನಾಗರತ್ನಾ ಹೆಬ್ಬಳ್ಳಿ, ಸುಜಾತಾ ಶಿಂದೆ, ಬಸವರಾಜ ಅವರಾದಿ, ಯಲ್ಲಪ್ಪ ನಾರಾಯಣಿ, ಶಶಿ ಗುತ್ತನ್ನವರ. ಯಲ್ಲಪ್ಪ ಭಜಂತ್ರಿ., ಬಸವರಾ

ಜ ಹುನಗುಂದ, ಈಶ್ವರ ಸೋರಗಾವಿ, ಶಿವಾನಂದ ರಾಠೋಡ, ಬಸವರಾಜ ಹೆಬ್ಬಳ್ಳಿ, ಶೈಲಜಾ ಸಂಗಳದ, ವಿಜಯ ಚೆಟ್ಟರಕಿ, ಶಿವಬಸು ಬಳ್ಳಾರಿ, ಚೆನ್ನಯ್ಯ ಹಿರೇಮಠ, ರವಿ ಧಾಮಜಿ, ಶಂಕರ ಕದಮ, ರಾಮಣ್ಣ ಜುಮನಾಳ, ಮಲ್ಲಿಕಾರ್ಜುನ ಮಠ, ಸಂಗಯ್ಯ ಸರಗಣಾಚಾರಿ,

ಸಂಗಣ್ಣ ಶಿರೂರ, ಯಮನೂರಿ ಕಮಿತಕರ, ನಿಂಗಯ್ಯ ಹಿರೇಮಠ, ಅಶೋಕ ಪವಾರ, ಚಂದ್ರು ರಾಮವಾಡಗಿ, ನಾಗರಾಜ ನಾರಾಯಣಕರ, ಅಶೋಕ ಪವಾರ, ನೂರ ಅಹ್ಮದ ತೋಟದ, ಕೃಷ್ಣಪ್ಪ ಖಾಕಂಡಕಿ, ಆನಂದ ಕೊಟಗಿ, ಚಂದ್ರು ಸರೂರ, ಚಂದ್ರಕಾಂತ ಖಾತೆದಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ನಿರಂತರ ವಿದ್ಯುತ್ ಪೂರೈಸಲು ಹಾಗೂ ವಿದ್ಯುತ್ ಅವಗಡ ಆಗದಂತೆ ತಡೆಯಲು 110ಕೆವಿ, ವಿದ್ಯುತ್ ಕೇಂದ್ರಗಳ ಮಾರ್ಗ ನಿರ್ವಹಣೆ ಮತ್ತು ಹಾಟ್ ಲೈನ್ ಒಬ್ಸರ್ವಷನ್ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಹಿನ್ನೆಲೆ 2025ರ ಡಿಸೆಂಬರ್ 18ರ ಗುರುವಾರ ರಂದು ಬೆಳಿಗ್ಗೆ 9 ರಿಂದ ಸಂಜೆ 5.30 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಸುರಪುರ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನಾ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು (ವಿ) ರಾಜಶೇಖರ್ ಬಿಳವಾರ್ ಅವರು ತಿಳಿಸಿದ್ದಾರೆ.

ಸದರಿ 110/33/11 ಕೆವಿ ಶಹಾಪೂರ, 110/11ಕೆವಿ ದಿಗ್ಗಿ, 33ಕೆವಿ ಬಿಪಿಸಿಎಲ್, 33ಕೆವಿ ಸಗರ ಹಾಗೂ 33ಕೆವಿ ಗೋಗಿ ವಿದ್ಯುತ್ ವಿತರಣಾ ಕೇಂದ್ರಗಳಿಂದ ಹೊರ ಹೋಗುವ ಎಲ್ಲಾ 11ಕೆವಿ ಮಾರ್ಗಗಳು ಹಾಗೂ ಐಪಿಪಿ ಮಾರ್ಗಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು, ಶಹಾಪೂರ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಹಾಗೂ ಗ್ರಾಹಕರು ಜೆಸ್ಕಾಂಗೆ ಸಹಕರಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತನರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳು ಸಕಾಲದಲ್ಲಿ ಸಿಗುವಂತಾಗಲಿ

**ಮಲ್ಲಮ್ಮ ನುಡಿ ವಾರ್ತೆ ಬೀದರ:**

ಸರ್ಕಾರದಿಂದ ವಿಕಲಚೇತನರಿಗೆ ಸಿಗುವಂತಹ ಸೌಲಭ್ಯಗಳು ಸಕಾಲದಲ್ಲಿ ಸಿಗುವಂತಾಲಿ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಸೋಮವಾರ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳುರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಬೀದರ ಜಿಲ್ಲಾ ಪಂಚಾತ ಸಭಾಂಗಣದಲ್ಲಿ ಆಯೋಜಿಸಿದ್ದ "ಮಕ್ಕಳ ಸಂರಕ್ಷಣೆ" ವಿಷಯದ ಕುರಿತು ವಿಕಲಚೇತನರ ತಾಲ್ಲೂಕಾ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಹಾಗೂ ಗ್ರಾಮೀಣ ಮತ್ತು ನಗರ ಪುನರ್ವಸತಿ ಕಾರ್ಯಕರ್ತರಿಗೆ ಜಿಲ್ಲಾ ಮಟ್ಟದಲ್ಲಿ ಒಂದು ದಿನದ ಅರಿವಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬೀದರನಿಂದ ಚಾಮರಾಜ ನಗರದವರೆಗೆ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿ ವಿಕಲಚೇತನರಿಗೆ ಗುರುತಿಸುವಂತ ಕೆಲಸ ಆಗಬೇಕಾಗಿದ್ದು, ಬೀದರ ಜಿಲ್ಲೆಯಿಂದ ಪರಿಣಾಮಕಾರಿಯಾಗಿ ಪ್ರಾರಂಭವಾಗಿ ರಾಜ್ಯದ ಉದ್ದಗಲಕ್ಕೂ ಮಾಡಿ ಪ್ರತಿಯೊಂದು ಸಮಾಜದಲ್ಲಿರುವಂತಹ ಕಟ್ಟ ಕಡೆಯ ವಿಕಲಚೇತನರಿಗೆ ಸರ್ಕಾರದ ಸೌಲಭ್ಯ ಸಿಗುವಂತೆ ಮಾಡುವ ಉದ್ದೇಶವಾಗಿದ್ದು ಮತ್ತು ವಿಕಲಚೇತನರಿಗೆ ಮೀಸಲಿಟ್ಟ ಅನುದಾನ ದುರ್ಬಳಕೆ ಆಗದಂತೆ ಅವರ ಸೌಲಭ್ಯಗಳಿಗೆ ಬಳಕೆಆಗಬೇಕಾಗಿದೆ ಎಂದರು. ಸಂಪನ್ಮೂಲ ವ್ಯಕ್ತಿಯಾಗಿ ಕಾರ್ಯಕ್ರಮ ವ್ಯವಸ್ಥಾಪಕರು, ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ, ಜಿಲ್ಲಾಧಿಕಾರಿಗಳ ಕಛೇರಿ ಕೊಪ್ಪಳದ ಹರೀಶ್ ಜೋಗಿ ಅವರು ವಿಕಲಚೇತನರ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಸೂರ್ಯಕಾಂತ ಬಿರಾದಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಶ್ರೀಧರ ಎಮ್.ಎಸ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ರೂಪಾ ಎಸ್., ಮಕ್ಕಳ ಕಲ್ಯಾಣ ಸಮಿತಿ ಬೀದರನ ಅಧ್ಯಕ್ಷರಾದ ಸೀಮಪ್ಪಾ, ಬಾಲ ನ್ಯಾಯ ಮಂಡಳಿ ಸದಸ್ಯರಾದ ಸಂಜೀವಕುಮಾರ, ಮಕ್ಕಳ ರಕ್ಷಣಾ ಅಧಿಕಾರಿ ಗೌರಿಶಂಕರ ಸೇರಿದಂತೆ ತಾಲ್ಲೂಕಾ, ನಗರದ ಪುನರ್ವಸತಿ ಕಾರ್ಯಕರ್ತರು ಹಾಗೂ ವಿವಿಧ ಇಲಾಖೆಯ ಅದಿಕಾರಿಗಳು ಉಪಸ್ಥಿತರಿದ್ದರು.

# ವಿಶ್ವ ಮಾನವ ದಿನಾಚರಣೆ ಪೂರ್ವಸಿದ್ಧತಾ ಸಭೆಗೆ ಸೂಚನೆ

**ಯಾದಗಿರಿ:** 2025ರ ಡಿಸೆಂಬರ್ 29 ರಂದು ವಿಶ್ವ ಮಾನವ ದಿನಾಚರಣೆ ಆಚರಿಸುವ ಹಿನ್ನೆಲೆ ಪೂರ್ವಸಿದ್ಧತಾ ಸಭೆಯನ್ನು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರ ಅಧ್ಯಕ್ಷತೆಯಲ್ಲಿ 2025ರ ಡಿಸೆಂಬರ್ 19 ರಂದು ಮಧ್ಯಾಹ್ನ 3.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ವಿಶ್ವ ಮಾನವ ದಿನಾಚರಣೆಯನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿಯನ್ನು ಆಚರಿಸುವ ಸಲುವಾಗಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜವಬ್ದಾರಿಯಿಂದ ನುಣುಚಿಕೊಳ್ಳುತ್ತಿರುವ ಖಂಡ್ರೆ: ಖೂಬಾ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ತನ್ನ ಅಧಿಕಾರ ಬಲದಿಂದ ಜಿಲ್ಲೆಯ ರೈತರಿಗೆ ಕಬ್ಬಿನ ಬೆಲೆ ಕೊಡಿಸಲು ಆಗಿಲ್ಲಾ, ಫಸಲ್ ಬಿಮಾ ಯೋಜನೆಯಡಿ ಸರಿಯಾದ ಪರಿಹಾರ ಕೊಡಿಸಲು ಆಗುತ್ತಿಲ್ಲಾ, ಎಲ್ಲಿ ರೈತರು ನನಗೆ ನನ್ನ ಮಗನಿಗೆ ಮುಂದಿನ ದಿನಗಳಲ್ಲಿ ಪ್ರಶ್ನೆ ಮಾಡುತ್ತಾರೋ ಎನ್ನುವ ಭಯದಿಂದ ವಿಧಾನಸೌಧದಲ್ಲಿ ಫಸಲ್ ಬಿಮಾ ಯೋಜನೆ ಬಗ್ಗೆ ಸುಳ್ಳು ಹೇಳಿ ತಪ್ಪಿಸಿಕೊಳ್ಳುವ ಪ್ರಯತ್ನ ಮಾಡಿದ್ದರು, ನಾನು ಖಂಡ್ರೆ ಷಡ್ಯಂತ್ರ ಬಯಲು ಮಾಡಿರುವ ಕಾರಣ, ನನ್ನ ವಿರುದ್ಧ ಅರ್ಥಹಿನ ಹೇಳಿಕೆ ನೀಡಿ, ತನ್ನ ಜವಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ, ಇಂತವರು ಅಧಿಕಾರದಲ್ಲಿರುವುದೆ ಜಿಲ್ಲೆಯ ಜನರ ದುರ್ದೈವ ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ತಿರುಗೇಟು ನೀಡಿದ್ದಾರೆ.

ಖಂಡ್ರೆ ಹೇಳುವಂತೆ ಫಸಲ್ ಬಿಮಾ ಯೋಜನೆಯಡಿ ಕಂಪನಿಗಳಿಗೆ ಲಾಭವಾಗುವುದಾದರೆ ರಾಜ್ಯದಲ್ಲಿ ಇವರದ್ದೆ ಸರ್ಕಾರವಿದೆ, ಇವರ ಸರ್ಕಾರವೆ ಟೆಂಡರ್ ಮಾಡಿ, ಕಂಪನಿಗಳಿಗೆ ನಿಯೂಕ್ತಿ ಮಾಡುತ್ತದೆ, ಆವಾಗ್ಯಾಕೆ ಇವರು ಪ್ರಶ್ನಿಸುವುದಿಲ್ಲಾ. ಈ ವರ್ಷ ಕಲಬುರಗಿ ಜಿಲ್ಲೆಗೆ ಬರುತ್ತಿರುವ 585 ಕೋಟಿ ಪರಿಹಾರದಂತೆ, ಬೀದರ ಜಿಲ್ಲೆಗೆ ಪರಿಹಾರ ಕೊಡಿಸಲು ಆಗದೆ ಇರುವುದರಿಂದ ಖಂಡ್ರೆ ಅಯೋಗ್ಯರಂತೆ ವರ್ತಿಸುತ್ತಿದ್ದಾರೆ.



ಕಳೆದ ವಾರವೆ ಇನ್ಸುರೆನ್ಸ್ ಕಂಪನಿಯಿಂದ ಮಧ್ಯ ಋತುವಿನ ಪ್ರತಿಕೂಲ ಪರಿಸ್ಥಿತಿಯಡಿ ರೂ. 36.75 ಕೋಟಿ ಪರಿಹಾರ ಜಿಲ್ಲೆಯ ರೈತರಿಗೆ ಬಂದಿದೆ, ತಂದೆ ಮಗ ಇಬ್ಬರು ಸೋಷಿಯಲ್ ಮೇಡಿಯಾದಲ್ಲಿ ಹಾಕೊಂಡು ಬಡಾಯಿ ಕೊಚ್ಚಿಕೊಂಡರು, ಇವಾಗ ಇವರೆ ಅಪಪ್ರಚಾರ ಮಾಡುತ್ತಿದ್ದಾರೆ, ಉಂಡ ಮನೆಗೆ ಎರಡು ಬಗೆಯುವ ಗುಣ ನಿಲ್ಲಿಸಬೇಕು ಎಂದಿದ್ದಾರೆ.

ಇನ್ಸೂರೇನ್ಸ್ ಕಂಪನಿಗಳಿಂದ ನಾನು ರೈತರಿಗೆ 600 ಕೋಟಿಗೂ ಅಧಿಕ ಪರಿಹಾರ ಕೊಡಿಸಿದ್ದೆ, ಇವರಿಂದ ಆಗುತಿಲ್ಲಾ ಯಾಕೆ ? ಇನ್ಸುರೇನ್ಸ್ ಕಂಪನಿಗಳು ರೈತರಿಂದ, ರಾಜ್ಯ ಮತ್ತು ಕೇಂದ್ರದಿಂದ ಒಟ್ಟು 14% ಪ್ರಿಮಿಯಮ್ ಪಡೆದು, ಬೆಳೆ ನಷ್ಟವಾದಾಗ 94% ಇಂದ 96% ಪರಿಹಾರ ರೂಪದಲ್ಲಿ ವಾಪಸ್ಸು ನೀಡುತ್ತದೆ, ಈ ನಿಯಮ ಖಂಡ್ರೆಗೂ ಗೊತ್ತಿದೆ, ಆದರೂ ಸಹ ತನ್ನ ವೈಫಲ್ಯ ಮುಚ್ಚಿಕೊಳ್ಳಲು ಸುಳ್ಳು ಹೇಳುತ್ತಿದ್ದಾರೆ.

ದೇಶದ ಜನರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಮತ್ತು ರಾಜ್ಯ ಸರ್ಕಾರ ಎಷ್ಟೋ ಸಾಮಾಜಿಕ ಸುರಕ್ಷತಾ ಯೋಜನೆಗಳಿಗೆ ಹಣ ಖರ್ಚು ಮಾಡುತ್ತವೆ, ಅದೇ ರಿತಿ ರೈತರ ಸಂಕಷ್ಟಕ್ಕೆ ಸಹಾಯವಾಗಲಿ ಎಂದು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಫಸಲ್ ಬಿಮಾ ಯೋಜನೆಯನ್ನು ದೇಶದ ಎಲ್ಲಾ ರಾಜ್ಯ ಸರ್ಕಾರಗಳು ಒಪ್ಪಿಕೊಂಡಿವೆ ಇದರ ಸದೂಪಯೋಗ ಪಡೆದುಕೊಳ್ಳುತ್ತಿವೆ. ಆದರೆ ಯಾವುದೇ ಕಾರಣಕ್ಕೂ ರೈತರಿಗೆ ಒಳ್ಳೆಯದಾಗಬಾರದು ಎನ್ನುವ ಕಾರಣಕ್ಕೆ ಈಶ್ವರ ಖಂಡ್ರೆ ಇಂತಹ ಸುಳ್ಳು ಹೇಳಿಕೆ ನೀಡುತ್ತಿದ್ದಾರೆ ಎಂದು ಟೀಕಿಸಿದ್ದಾರೆ.

ನಾನು ಎಂದಿಗೂ ಈಶ್ವರ ಖಂಡ್ರೆಯಂತೆ ರಾಜಕೀಯವನ್ನು ಉದ್ಯಮವಾಗಿ ನೋಡಿಲ್ಲಾ, ಹಣ ಕೊಟ್ಟು, ಬಕೇಟ್ ಹಿಡಿದು ರಾಜಕೀಯ ಮಾಡಿದವನ್ನಲ್ಲಾ, ನಾನು ನಿರುದ್ಯೋಗಿ ಎಂದಾದರೆ ದೇಶದೆಲ್ಲೆಡೆ ಕಾಂಗ್ರೇಸ್ ಪಕ್ಷದವರು ಕಳೆದ ಒಂದು ದಶಕದಿಂದ ಸೋಲುತ್ತಿದ್ದಾರೆ, ಅವರ ಅಧ್ಯಕ್ಷರಾಗಿರುವ ಖರ್ಗೆಯವರು ಸಹ ಸೋತಿದ್ದಾರೆ ಅವರು ಕೂಡ ನಿರುದ್ಯೋಗಿನಾ ಎಂಬುದು ಈಶ್ವರ ಖಂಡ್ರೆ ಉತ್ತರಿಸಬೇಕೆಂದು ಒತ್ತಾಯಿಸಿದ್ದಾರೆ.

ಈಶ್ವರ ಖಂಡ್ರೆಯವರ ಹೇಳಿಕೆಗಳು ಅಯೋಗ್ಯತನ ತೋರಿಸುತ್ತಿದೆ. ಅರಣ್ಯ ಸಚಿವರಾಗಿ, ಉಸ್ತುವಾರಿಯಾಗಿ ಉತ್ತಮ ಆಡಳಿತ ನೀಡಲು ವಿಫಲರಾಗಿದ್ದಾರೆ, ಕೇವಲ ಎರಡೆ ವರ್ಷದಲ್ಲಿ ಜನರಿಗೆ ಭಾರವಾಗಿದ್ದಾರೆ, ಎಲ್ಲಾ ಅಧಿಕಾರ ಮನೆಯಲ್ಲಿಟ್ಟುಕೊಂಡು ತಮ್ಮ ಜವಬ್ದಾರಿ ಅರಿತುಕೊಂಡು ಕೆಲಸ ಮಾಡಬೇಕು ಅದು ಬಿಟ್ಟು ಜವಬ್ದಾರಿಯಿಂದ ಓಡಿಹೊಗುವುದು ನಿಲ್ಲಿಸಬೇಕೆಂದಿದ್ದಾರೆ. ನಾನು ಅಧಿಕಾರವನ್ನು ಜನರ ಸೇವೆಗಾಗಿ ಮುಡಿಪಾಗಿಟ್ಟು ಕೆಲಸ ಮಾಡಿದ್ದೇನೆ, ಇವರಂತೆ ಉದ್ಯಮವಾಗಿ ನೋಡಿದ್ದರೆ ಚುನಾವಣೆಯಲ್ಲಿ ಎಲ್ಲರನ್ನು ಖರೀದಿಯೂ ಮಾಡುತ್ತಿರಲಿಲ್ಲಾ, ಬೇರೆಯವರಂತೆ ಬಿಕರಿಯೂ ಆಗುತ್ತಿರಲಿಲ್ಲಾ ಎಂದು ತಿರುಗೇಟು ನೀಡಿದ್ದಾರೆ.

# ವಿದ್ಯಾರ್ಥಿನಿಯರ ಮಾನಸಿಕ ಆರೋಗ್ಯ: ಮಹಿಳಾ ವಿವಿಯಲ್ಲಿ ಕಾರ್ಯಾಗಾರ



**ವಿಜಯಪುರ:** ವಿದ್ಯಾರ್ಥಿನಿಯರಲ್ಲಿ ಹೆಚ್ಚುತ್ತಿರುವ ಮೊಬೈಲ್ ಬಳಕೆ ಮಾನಸಿಕ ಸ್ಥಿರತೆಯನ್ನು ಹಾಳು ಮಾಡುತ್ತಿದೆ ಎಂದು ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಹೇಳಿದರು.ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿ ಕ್ಷೇಮ ಪಾಲನ ನಿರ್ದೇಶನಾಲಯ ಮತ್ತು ಸಮಾಜಶಾಸ್ತ್ರ ವಿಭಾಗದ ಸಹಯೋಗದಲ್ಲಿ ಇತ್ತೀಚಿಗೆ ಹಮ್ಮಿಕೊಂಡಿದ್ದ ಮಾನಸಿಕ ಆರೋಗ್ಯ ಕುರಿತ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ ವಿದ್ಯಾರ್ಥಿನಿಯರು ಮೊಬೈಲ್‌ಗೆ ಅತಿಯಾಗಿ ಅವಲಂಬಿತರಾಗುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಅಷ್ಟೇ ಅಲ್ಲದೇ ಮೊಬೈಲ್ ಅಡಿಕ್ಷನ್‌ನಿಂದಾಗಿ ಏಕಾಗ್ರತೆ ಕುಂದಿ ಮಾನಸಿಕ ಅಸ್ಥಿರತೆ ಎದುರಾಗುತ್ತಿದೆ. ಮೊಬೈಲ್ ಬಳಕೆಯನ್ನು ಅಗತ್ಯಕ್ಕೆ ಮಾತ್ರ ಸೀಮಿತಗೊಳಿಸಿ, ಶಿಕ್ಷಣ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಹೆಚ್ಚು ಗಮನ ಹರಿಸಬೇಕು ಎಂದು ಹೇಳಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಮನೋವೈದ್ಯ ಡಾ. ಮಂಜುನಾಥ ಮಸಳಿ ಮಾತನಾಡಿ, ಮಾನಸಿಕ ಆರೋಗ್ಯದ ಮಹತ್ವ ಕುರಿತು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಇನ್ನೋರ್ವ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಆಹಾರ ತಜ್ಞೆ ಗಿರಿಜಾ ಜಂಡರ್ ಮಾತನಾಡಿ, ಆಹಾರ ಹಾಗೂ ಪೌಷ್ಟಿಕತೆಯ ಅಗತ್ಯತೆ ಕುರಿತು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಮತ್ತಿತರಿದ್ದರು.

ವಿದ್ಯಾರ್ಥಿನಿ ಕ್ಷೇಮ ಪಾಲನ ನಿರ್ದೇಶನಾಲಯದ ನಿರ್ದೇಶಕಿ ಪ್ರೊ. ಜ್ಯೋತಿ ಉಪಾಧ್ಯಾಯ ಸ್ವಾಗತಿಸಿದರು. ಆಪ್ತ ಸಮಾಲೋಚಕಿ ಡಾ. ಸುರೇಖಾ ರಾಠೋಡ ನಿರೂಪಿಸಿದರು. ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಡಾ. ರಶ್ಮಿ ವಂಶಕೃತಮಠ ವಂದಿಸಿದರು.

# ಕ್ಷೇತ್ರದ ಅಭಿವೃದ್ಧಿಯೇ ಮುಖ್ಯ ಗುರಿ: ಶಾಸಕ

• ಮಲ್ಲಮ್ಮ ನುಡಿ ವಾರ್ತೆ ಪೀಣ್ಯ ದಾಸರಹಳ್ಳಿ



ಹುಟ್ಟುಹಬ್ಬ ಆಚರಣೆ ಕೇವಲ ನೆಪವಷ್ಟೇ. ಆದರೆ ಸಾರ್ವಜನಿಕರಿಗೆ ಮತ್ತು ಕ್ಷೇತ್ರದ ಜನತೆಗೆ ವಿವಿಧ ಸೇವಾ ಕಾರ್ಯಕ್ರಮಗಳನ್ನು ನೆರವೇರಿಸುವ ಮೂಲಕ ಜನ ಸಾಮಾನ್ಯ ರೊಂದಿಗೆ ಬೆರೆಯುವ ಸುವರ್ಣಾವಕಾಶ ಎಂದು ಶಾಸಕ ಎಸ್ ಮುನಿರಾಜು ತಿಳಿಸಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಬಾಗಲಗುಂಟೆ ವಾರ್ಡ್ ನ ಶೇಶಾದ್ರಿ ಲೇಔಟ್ ನಲ್ಲಿ ಡಾ.ಮುರಳಿ ಬಿ.ಅವರ ನೇತೃತ್ವದಲ್ಲಿ ಶಾಸಕ ಎಸ್ ಮುನಿರಾಜು ಹುಟ್ಟುಹಬ್ಬದ ಪ್ರಯುಕ್ತ ಗಿಡ ನೆಡುವ ಮೂಲಕ ಹಾಗೂ ಸಸಿಗಳನ್ನು ನೀಡುವ ಮೂಲಕ ವಿಶಿಷ್ಟವಾಗಿ ಹುಟ್ಟುಹಬ್ಬದ ಆಚರಣೆಯನ್ನು ಆಚರಿಸಲಾಯಿತು. ಕ್ಷೇತ್ರದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುವುದು ನನ್ನ ಮುಖ್ಯ ಗುರಿ.ನಮ್ಮ ಕ್ಷೇತ್ರದಲ್ಲಿ ಹಲವಾರು ಸಾಕಷ್ಟು ಸಮಸ್ಯೆಗಳಿದ್ದು ಅವುಗಳನ್ನು ಬಗೆಹರಿಸಿ ನಮ್ಮ ಕ್ಷೇತ್ರವನ್ನು ಅಭಿವೃದ್ಧಿ ಹೊಂದಿದ ಕ್ಷೇತ್ರವನ್ನಾಗಿ ಮಾಡುವುದೆ ನಮ್ಮ ಗುರಿ ಎಂದರು.

ಬಳಿಕ ಮಾತನಾಡಿದ ಬಿಜೆಪಿ ಹಿರಿಯ ಮುಖಂಡ ಡಾ.ಮುರುಳಿ ಬಿ ಶಾಸಕರವರ ನೇತೃತ್ವದಲ್ಲಿ ವಿಶೇಷ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಈಸಂದರ್ಭದಲ್ಲಿ ಮಹಿಳೆಯರಿಗೆ ಉಚಿತವಾಗಿ ಸೀರೆ ವಿತರಣೆ ಅನ್ನದಾನ, ಆಟೋ ಚಾಲಕರಿಗೆ ಸಮವಸ್ತ್ರ ಗಿಡ ನೆಡುವ ಮೂಲಕ ವಿಶಿಷ್ಟ ಅಚರಿಸಲಾಯಿತು ಬಂದಿದ್ದ ಸಾರ್ವಜನಿಕರಿಗೆ ಉಚಿತವಾಗಿ ಗಿಡಗಳನ್ನು ವಿತರಿಸಲಾಯಿತು. ಈ ಮೂಲಕ ಶಾಸಕರ ಹುಟ್ಟುಹಬ್ಬವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು ಎಂದು ತಿಳಿಸಿದರು.

ಸಮಾಜಮುಖಿ ಕಾರ್ಯಕ್ರಮ:ಶಾಸಕರ ಜನುಮದಿನದ ಪ್ರಯುಕ್ತ ಕ್ಷೇತ್ರದ ಹಲವಾರು ವಾರ್ಡ್‌ಗಳಲ್ಲಿ ವೈವಿಧ್ಯಮಯ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಉಚಿತ ಆರೋಗ್ಯ ಶಿಬಿರ ಮತ್ತು ರಕ್ತದಾನ ಶಿಬಿರ, ಉಚಿತ ದಾಸೋಹ ಹಾಗೂ ಸಮವಸ್ತ್ರ ವಿತರಣೆ ತಳ್ಳೋಗಾಡಿ ವಿತರಣೆಯನ್ನು ಮಾಡಲಾಯಿತು.

# ರಸ್ತೆ ಅಪಘಾತದಲ್ಲಿ ಭಾರತಿ ಸಾವು

## ಮೃತರ ಕುಟುಂಬಕ್ಕೆ ಎರಡು ಲಕ್ಷ ಪರಿಹಾರ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ತಾಲ್ಲೂಕು ಸಿ.ಬಿ.ಟಿ. ಕಾಲೋನಿ ಹಾಗೂ ತರಿಕಲ್ಲು ಗ್ರಾಮದ ಕೆಲವು ಕೂಲಿ ಕಾರ್ಮಿಕರು ಎಂದಿನಂತೆ ಕೂಲಿ ಬಯಸಿ ಮತ್ತೊಂದು ಊರಿಗೆ ಶುಂಟಿ ಕೆಲಸಕ್ಕಾಗಿ ಪ್ರತಿದಿನದಂತೆ ಹೋಗುತ್ತಿದ್ದ ಗೂಡ್ಸ್ ವಾಹನದಲ್ಲಿ ವಾಪಸ್ ಬರುವಾಗ ಗದ್ದಿಗೆ ಮುಖ್ಯರಸ್ತೆ, ಬಸವನಹಳ್ಳಿ ಸಮೀಪ ಭೀಕರ ರಸ್ತೆ ಅಪಘಾತಕ್ಕೊಳಗಾಗಿ, ಗೂಡ್ಸ್ ವಾಹನದಲ್ಲಿದ್ದ ಇಪ್ಪತ್ತನಾಲ್ಕು ಜನರ ಪೈಕಿ ಶ್ರೀಮತಿ ಭಾರತಿ ಕೋಂ. ಶಿವರಾಜು ಎಂಬುವವರು ಮೃತಪಟ್ಟಿರುತ್ತಾರೆ.

ಮಾನವೀಯ ದೃಷ್ಟಿಯಿಂದ ಮೃತರ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿ ನೀಡುವಂತೆ ಮಾಜಿ ಶಾಸಕರಾದ ಹೆಚ್.ಪಿ.ಮಂಜುನಾಥ್ ರವರು ಮನವಿ ಮೇರೆಗೆ ಮೃತರ ಕುಟುಂಬಕ್ಕೆ ರೂ. ಎರಡು ಲಕ್ಷಗಳನ್ನು ಪರಿಹಾರವಾಗಿ ಮಂಜೂರು ಮಾಡಿರು ಚೆಕ್ ಆರ್.ಟಿ.ಜಿ.ಎಸ್. ಮುಖಾಂತರ ಚೆಕ್ಕು ಜಿಲ್ಲಾಧಿಕಾರಿಗಳ ಜೆ ಲಕ್ಷ್ಮಿಕಾಂತ್ ರೆಡ್ಡಿ ಹಾಗೂ ಮಾಜಿ ಎಚ್ ಪಿ ಮಂಜುನಾಥ್ ಮುರ್ತಾಪಟ್ಟ ಕುಟುಂಬಕ್ಕೆ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಯ ಅಧ್ಯಕ್ಷರಾದ ರಾಘು ರಾಘು ಅಕ್ರಮ ಸಕ್ರಮ ಸಮಿತಿಯ ಸದಸ್ಯರಾದ ಅಂಕನಹಳ್ಳಿ ಕುಮಾರ್ರ ಗ್ರಾಮದ ಯಜಮಾನ್ರು ಹಾಜರಿದ್ದರು.

# ಇಎಸ್‌ಐನಲ್ಲಿ ಹೆಸರು ನೋಂದಾಯಿಸಿಕೊಳ್ಳುವುದು ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಕೆಲಸಗಾರರು ಮತ್ತು ಉದ್ಯೋಗದಾತರು ಕಡ್ಡಾಯವಾಗಿ ಇಎಸ್‌ಐನಲ್ಲಿ ಹೆಸರು ನೋಂದಣಿ ಮಾಡಿ ಕೆಲಸಗಾರರಿಗೆ ಆರೋಗ್ಯ ಭದ್ರತೆಯ ಜೊತೆಯಲ್ಲಿ ಮಕ್ಕಳಿಗೆ ವೈದ್ಯಕೀಯ ಶಿಕ್ಷಣದ ಸೀಟು ಪಡೆಯಲು ನೆರವಾಗಬೇಕು ಎಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಇಎಸ್‌ಐ 'ಸ್ಪ್ರೀ – 2025–(ಎಸ್‌ಪಿಆರ್‌ಇಇ)'ರ ಹೆಸರು ನೋಂದಣಿಯ ವಿಶೇಷ ಯೋಜನೆಯನ್ನು ಬಿಡಿಸಿಸಿಐನ ಸಭಾಂಗಣದಲ್ಲಿ ಮಂಗಳವಾರ ಉದ್ಘಾಟಿಸಿದ ಅವರು, 'ಸ್ಪ್ರೀ–2025–(ಎಸ್‌ಪಿಆರ್‌ಇಇ)' ವಿಶೇಷ ಹೆಸರು ನೋಂದಣಿ ಯೋಜನೆಯು ಉದ್ಯೋಗದಾತರು ಮತ್ತು ಕೆಲಸಗಾರರ ಸ್ನೇಹಿಯಾಗಿದೆ. ಕಾರಣ ಪ್ರತಿಯೊಂದು ಸಂಸ್ಥೆಯು ಕೆಲಸಗಾರರನ್ನು ಇಎಸ್‌ಐ ವ್ಯಾಪ್ತಿಯಲ್ಲಿ ನೋಂದಣಿ ಮಾಡಿಸಬೇಕು ಎಂದರು.

ಇಎಸ್‌ಐನಲ್ಲಿ ಹೆಸರು ನೋಂದಣಿ ಮಾಡಿಕೊಂಡ ನೌಕರರು–ಕೆಲಸಗಾರರ ಮಕ್ಕಳಿಗೆ ಕೆಲ ನಿಯಮಗಳ ಪ್ರಕಾರ – ಷರತ್ತುಗಳಿಗೆ ಒಳಪಟ್ಟು ವೈದ್ಯಕೀಯ, ಡೆಂಟಲ್ ಮತ್ತು ಪ್ಯಾರಾ ಮೆಡಿಕಲ್ ಸೀಟುಗಳನ್ನು ಪಡೆಯಲು ಸೌಲಭ್ಯಗಳಿವೆ. ಈ ಸೌಲಭ್ಯಗಳು ಸಾಮಾನ್ಯರಿಗಿಂತಲೂ ವಿಶೇಷವಾಗಿ ಪರಿಗಣಿಸಲ್ಪಟ್ಟಿವೆ. ಬಡ ಮತ್ತು ಮಧ್ಯಮವರ್ಗದ ಕುಟುಂಬದ ವಿದ್ಯಾರ್ಥಿಗಳಿಗೆ ನೆರವಾಗಲು ಇಎಸ್‌ಐನಲ್ಲಿ ನೋಂದಣಿ ಮಾಡಿ ನೆರವಾಗಿರಿ ಎಂದರು.

ಇಎಸ್‌ಐನ ಸಮಾಜಿಕ ಭದ್ರತೆಯ ಕಲ್ಬುರ್ಗಿ ವಿಭಾಗೀಯ ಅಧಿಕಾರಿ ಹನೀಫ್ ಕೆ. ಶೇಖ್ ಅವರು, ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡು, ಇಎಸ್‌ಐ ಯೋಜನೆ ಮತ್ತು ಸೌಲಭ್ಯಗಳು, ಇಎಸ್‌ಐನ ನಿಯಮಗಳು – ಷರತ್ತುಗಳ ಉಲ್ಲಂಘನೆ ಮತ್ತು ಇಎಸ್‌ನ ನೋಂದಣಿ ವ್ಯಾಪ್ತಿಯ ಪರಿಭಾಷೆಯನ್ನು ಸಮಗ್ರವಾಗಿ ವಿವರಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ಕಾರ್ಯಕ್ರಮ ನಿರೂಪಿಸಿದರು. ಇಎಸ್‌ಐ ಬಳ್ಳಾರಿ ಕಚೇರಿಯ ವ್ಯವಸ್ಥಾಪಕಿ ಶ್ರೀಮತಿ ಅನೂರಾಧ ಅವರು ವಂದನಾರ್ಪಣೆ ಸಲ್ಲಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್.ದೊಡ್ಡನಗೌಡ, ಉಪಾಧ್ಯಕ್ಷರಾದ ಗಿರಧರ ಸೊಂತ, ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ಖಜಾಂಚಿಗಳಾದ ನಾಗಳ್ಳಿ ರಮೇಶ್ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಪಾಲ್ಗೊಂಡಿದ್ದರು.

ಬಳ್ಳಾರಿ ಜಿಲ್ಲಾ ಅನುದಾನ ರಹಿತ ಖಾಸಗಿ ಶಾಲೆಗಳ ಸಂಘದ ಮರಿಸ್ವಾಮಿ ರೆಡ್ಡಿ, ಬೆಸ್ಟ್ ಶಾಲೆಯ ಎಂ. ಶ್ರೀನಿವಾಸ, ವಿವಿಧ ಶಿಕ್ಷಣ ಸಂಸ್ಥೆಗಳವರು – ಕೈಗಾರಿಕೆಗಳವರು ಹಾಗೂ ವಿವಿಧ ಸಂಘ – ಸಂಸ್ಥೆಗಳವರು ಸಭೆಯಲ್ಲಿ ಪಾಲ್ಗೊಂಡು, ಇಎಸ್‌ಐನಲ್ಲಿ ಹೆಸರು ನೋಂದಣಿ ಮಾಡುವ ಕುರಿತು ನಡೆದ ಪ್ರಶ್ನೋತ್ತರ ಚರ್ಚೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಮಾತು ಕೊಟ್ಟು ಮರೆತ ಸಿಎಂ ಸಿದ್ಧರಾಮಯ್ಯ: ಶರಣಪ್ಪ ಕಟ್ಟಿಮನಿ

**ಮುದಗಲ್:** ಮುದಗಲ್ ಪಟ್ಟಣ ತಾಲೂಕು ರಚನೆಗೆ ಜನಪ್ರತಿನಿಧಿಗಳ ನಿರ್ಲಕ್ಷ್ಯ ಧೋರಣೆಯಿಂದ ಕಂಡ ಕನಸು ಗಗನ ಕುಸುಮವಾಗಿದೆ ಎಂದು ದಲಿತ ಸಂಘರ್ಷ ಸಮಿತಿ ತಾಲ್ಲೂಕು ಸಂಚಾಲಕ ಶರಣಪ್ಪ ಕಟ್ಟಿಮನಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಶನಿವಾರ ರಂದು ಪತ್ರಿಕೆಗೆ ಹೇಳಿಕೆ ನೀಡಿದ ಅವರು ರಾಜ್ಯದಲ್ಲಿ ಕಾಂಗ್ರೆಸ್ ಬಿಜೆಪಿ ಮತ್ತು ಜೆಡಿಎಸ್ ಮೂರು ಪಕ್ಷಗಳು ಅಧಿಕಾರದ ಚುಕ್ಕಾಣಿ ಹಿಡಿದು ಆಡಳಿತ ಮಾಡಿದೆ ಆಯಾ ಪಕ್ಷಗಳ ಅಧಿಕಾರಕ್ಕೆ ಬಂದಾಗ ಮುದಗಲ್ ತಾಲೂಕು ರಚನೆಗೆ ಮುನ್ನೆಲೆಗೆ ಬಂದಿದೆ ಆದರೆ ಇದುವರೆಗೂ ಯಾವೊಬ್ಬ ಸರ್ಕಾರ ಮುದಗಲ್ ತಾಲೂಕು ಕೇಂದ್ರ ರಚನೆಗೆ ಹಿಂದೇಟು ಹಾಕುತ್ತಿರುವದು ಬೇಡಿಕೆಗೆ ಮಾನ್ಯತೆ ಸಿಗದೆ ಸ್ಥಳೀಯರಲ್ಲಿ ನಿರಾಸೆ ಮೂಡಿಸಿದೆ.

ಪಟ್ಟಣ ಜನರ ಕನಸು ಭಗ್ನಗೋಳಿಸಿದ್ದಾರೆ.ಕಳೆದ ಒಂದೂವರೆ ದಶಕದಿಂದ ನಾಗರಿಕರು ಸರ್ಕಾರಕ್ಕೆ ಬೇಡಿಕೆ ಸಲ್ಲಿಸುತ್ತ ಬರುತ್ತಿದ್ದರೂ ಇದುವರೆಗೂ ಬೇಡಿಕೆಗೆ ಮಾನ್ಯತೆ ಸಿಗದೆ ಸ್ಥಳೀಯರಲ್ಲಿ ನಿರಾಸೆ ಮೂಡಿಸಿದೆ.ಪ್ರತಿ ಚುನಾವಣೆಯಲ್ಲಿ ಮುದಗಲ್ ಪಟ್ಟಣವನ್ನು ತಾಲೂಕ ಕೇಂದ್ರವನ್ನಾಗಿ ಮಾಡುವ ಬಗ್ಗೆ ಚರ್ಚೆ ನಡೆಯುತ್ತದೆ. ಜೊತೆಗೆ ಇದೆ ವಿಷಯ ಚುನಾವಣೆಯಲ್ಲಿ ರಾಜಕಾರಣಿಗಳು ಅಸ್ತ್ರವಾಗಿ ಬಳಸಿಕೊಂಡು ಭರವಸೆಯನ್ನು ಹೇಳಿ ಚಪ್ಪಾಳೆ ಗಿಟ್ಟಿಸಿಕೊಳ್ಳುವದಾಗಿದೆ.ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಹಿನ್ನೆಲೆಯಲ್ಲಿ ಪಟ್ಟಣದ ಪುರಸಭೆ ರಂಗಮಂದಿರದಲ್ಲಿ ಏರ್ಪಡಿಸಿದ್ದ ಪ್ರಚಾರದ ಸಮಾವೇಶದಲ್ಲಿ ನಮ್ಮ ಸರ್ಕಾರ ರಚನೆ ಆದ ಕೂಡಲೆ ಮೊಟ್ಟ ಮೊದಲು ಮುದಗಲ್ ಪಟ್ಟಣವನ್ನು ತಾಲೂಕ ಕೇಂದ್ರವಾಗಿ ಘೋಷಿಸುವದಾಗಿ ಭರವಸೆ ನೀಡಿದ್ದರುಆದರೆ ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರದಲ್ಲಿ ಸಿದ್ದರಾಮಯ್ಯನವರೆ ರಾಜ್ಯದ ಮುಖ್ಯಮಂತ್ರಿಗಳಾಗಿದ್ದು ಮುದಗಲ್ ಪಟ್ಟಣವನ್ನು ತಾಲೂಕು ಮಾಡದೆ ಕೊಟ್ಟ ಮಾತು ಮರೆತುಬಿಟ್ಟಿದ್ದಾರೆ.ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಮುದಗಲ್ ತಾಲೂಕು ರಚನೆ ಬಗ್ಗೆ ಜನಪ್ರತಿನಿಧಿಗಳು ಚರ್ಚಿಸಿ ಮುದಗಲ್ ತಾಲೂಕು ರಚನೆಗೆ ಮುಂದಾಗಬೇಕು ಇಲ್ಲವಾದರೆ ಮುಂದಿನ ದಿನಗಳಲ್ಲಿ ಪಟ್ಟಣದಲ್ಲಿ ಎಲ್ಲಾ ಸಂಘಟನೆಗಳು ಮತ್ತು ನಾಗರಿಕರು ಸೇರಿ ಉಗ್ರವಾದ ಹೋರಾಟ ನಡೆಸಲಾಗುವದು ಎಂದು ಎಚ್ಚರಿಕೆ ನೀಡಿದ್ದಾರೆ.

# 21ರಿಂದ ಉದ್ಯಾನಗಿರಿಯಲ್ಲಿ ತೋಟಗಾರಿಕೆ ಮೇಳ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಮುಖ್ಯ ಆವರಣ ಉದ್ಯಾನಗಿರಿಯಲ್ಲಿ ಡಿಸೆಂಬರ 21 ರಿಂದ 23 ವರೆಗೆ ಮೂರು ದಿನಗಳ ಕಾಲ ತೋಟಗಾರಿಕೆ ಮೇಳವನ್ನು "ಮೌಲ್ಯವರ್ಧನೆ ಮತ್ತು ರಫ್ತು ಅವಕಾಶಗಳಿಗಾಗಿ ನಿಖರ ತೋಟಗಾರಿಕೆ" ಎಂಬ ಧ್ಯೇಯ್ಯವಾಕ್ಯದೊಂದಿಗೆ ಆಯೋಜಿಸಲಾಗುತ್ತಿದೆ ಎಂದು ತೋವಿವಿಯ ಕುಲಪತಿ ಡಾ.ವಿಷ್ಣುವರ್ಧನ ಹೇಳಿದರು.

ತೋವಿವಿಯ ಪ್ರೇಕ್ಷಾಗೃಹದಲ್ಲಿ ಮಂಗಳವಾರ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ, ಮಾತನಾಡಿದ ಅವರು ಮೇಳದಲ್ಲಿ ರಾಜ್ಯಾದ್ಯಂತ 5 ಲಕ್ಷಕ್ಕೂ ಅಧಿಕ ರೈತರು, ಉದ್ಯಮಿಗಳು, ಪಾಲುದಾರರು ಮತ್ತು ಗಣ್ಯರು ಭಾಗವಹಿಸಲಿದ್ದು, ತೋಟಗಾರಿಕೆಯಲ್ಲಿ ವ್ಯಾಪಾರವನ್ನು ಉತ್ತೇಜಿಸಲು ರಫ್ತುದಾರರ ಮತ್ತು ಮಾರಾಟಗಾರರ ನಡುವಿನ ಮಾರುಕಟ್ಟೆ ಸಂಪರ್ಕವನ್ನು ಬಲಪಡಿಸಲು ವಿನ್ಯಾಸಗೊಳಿಸಲಾದ ನಿಖರ ತೋಟಗಾರಿಕೆ ತಂತ್ರಜ್ಞಾನಗಳು, ಮೌಲ್ಯವರ್ಧನೆ, ರಫ್ತು ಸಮಾವೇಶ ಮತ್ತು ಖರೀದಿದಾರರ–ಮಾರಾಟಗಾರರ ಸಭೆ ಈ ಮೇಳದ ಪ್ರಮುಖ ಅಂಶಗಳಾಗಿದೆ. ಸಚಿವರು, ಸಂಸದರು, ಶಾಸಕರು ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆಂದರು.

ತೋಟಗಾರಿಕೆ ಮೇಳವು ತಂತ್ರಜ್ಞಾನ ಪ್ರಸರಣದ ಅತ್ಯಂತ ಪರಿಣಾಮಕಾರಿ ಕಾರ್ಯಕ್ರಮವಾಗಿದ್ದು, ಒಂದೇ ಸೂರಿನಡಿ ಪ್ರತಿ ವರ್ಷ ರೈತ ಸಮುದಾಯಕ್ಕೆ ನವೀನ, ಸಮಯೋಜಿತ ತಂತ್ರಜ್ಞಾನಗಳನ್ನು ವರ್ಗಾವಣೆ ಮಾಡಲು ತೋಟಗಾರಿಕೆ ಮೇಳವನ್ನು ಆಯೋಜಿಸಲಾಗುತ್ತಿದೆ. ಮೇಳದ ಪ್ರತಿದಿನವೂ ಸಾಧಕ ರೈತರು ತಮ್ಮ ಅನುಭವಗಳನ್ನು ಇತರೇ ರೈತರೊಂದಿಗೆ ಹಂಚಿಕೊಳ್ಳಲಿದ್ದಾರೆ. ಹಿರಿಯ ವಿಜ್ಞಾನಿಗಳು ಮತ್ತು ಪ್ರಗತಿಪರ ರೈತರೊಂದಿಗೆ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತದೆ.

ವಿಶ್ವವಿದ್ಯಾಲಯ ವ್ಯಾಪ್ತಿಯ 24 ಜಿಲ್ಲೆಗಳಿಂದ ಗುರುತಿಸಲ್ಪಟ್ಟ ಫಲಶ್ರೇಷ್ಠರನ್ನು ತೋಟಗಾರಿಕೆ ಮೇಳದಲ್ಲಿ ಪ್ರತಿ ದಿನ 8 ಜನರಂತೆ ಮೂರು ದಿನಗಳಲ್ಲಿ ಸನ್ಮಾನಿಸಲಾಗುತ್ತಿದೆ ಎಂದು ತಿಳಿಸಿದರು.

ಮೇಳದಲ್ಲಿ 400ಕ್ಕೂ ಹೆಚ್ಚು ಸರ್ಕಾರಿ, ಖಾಸಗಿ ಸಂಘ ಸಂಸ್ಥೆಗಳ ಮಳಿಗೆಗಳು ಮತ್ತು ಯಾಂತ್ರೀಕರಣ ಮಳಿಗೆಗಳನ್ನು ಸಜ್ಜುಗೊಳಿಸಲಾಗಿದೆ. ಮಳಿಗೆಗಳಲ್ಲಿ 150 ಹೈಟೆಕ್, 150 ಸಾಧಾ ಮಳಿಗೆ, 40 ಇತರೆ 20 ಯಂತ್ರೋಪಕರಣಗಳ ಮಳಿಗೆ, 10 ನರ್ಸರಿ ಮಳಿಗೆ, 10 ಜಾನುವಾರಗಳ ಪ್ರದರ್ಶನ ಮಳಿಗೆ ಹಾಗೂ 20 ಆಹಾರ ಮಹಿಳೆಗಳನ್ನು ಹಾಕಲಾಗುತ್ತಿದೆ. ಒಳಾಂಗಣ ಪ್ರದರ್ಶನದಲ್ಲಿ ವಿವಿಧ ದೇಶಿ, ವಿದೇಶಿ ಜಾತಿಯ ಹಣ್ಣು, ತರಕಾರಿ, ಹೂವಿನ ಬೆಳೆಗಳ ತಳಿಗಳು, ಬೀಜಗಳು ಮತ್ತು ವಿವಿಧ ಮೌಲ್ಯವರ್ಧಿತ ಉತ್ಪನ್ನಗಳ ಪ್ರದರ್ಶನ, ವಿಶ್ವವಿದ್ಯಾಲಯದಲ್ಲಿ ಉತ್ಪಾದಿಸಿದ ವಿವಿಧ ಸಸಿಗಳು, ಬೀಜಗಳು, ಜೈವಿಕ ಉತ್ಪನ್ನಗಳು, ಮೌಲ್ಯವರ್ಧಿತ ಉತ್ಪನ್ನಗಳು, ಪರಿಕರಣಗಳನ್ನು ಮಾರಾಟ ಮಾಡಲು ವ್ಯವಸ್ಥೆ ಮಾಡಲಾಗಿದೆ ಎಂದರು.

ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ನಿಖರ ತೋಟಗಾರಿಕೆ ಮೌಲ್ಯವರ್ಧನೆ ಹಾಗೂ ರಫ್ತು ಅವಕಾಶಗಳಿಗಾಗಿ ವಿವಿಧ ವಿಷಯಾಧಾರಿತ ಸಮುಚ್ಚಯಗಳನ್ನು ಏರ್ಪಡಿಸಿ, ಸಮಗ್ರ ಮಾಹಿತಿ ನೀಡಲು ನುರಿತ ವಿಜ್ಞಾನಿ ಮತ್ತು ಸಂಪನ್ಮೂಲ ವ್ಯಕ್ತಿಗಳಿಂದ ವಿಚಾರಗೋಷ್ಠಿಗಳನ್ನು ಸಹ ಏರ್ಪಡಿಸಲಾಗುತ್ತಿದೆ. ಹೆಚ್ಚಿನ ಪ್ರಮಾಣದಲ್ಲಿ ರೈತರು ಮೇಳದಲ್ಲಿ ಪಾಲ್ಗೊಂಡು ಇದರಸದುಪಯೋಗ ಪಡೆದುಕೊಳ್ಳುವಂತೆ ತೋವಿವಿಯ ಕುಲಪತಿಗಳು ಕೋರಿದರು.

ಪತ್ರಿಕಾಗೋಷ್ಠಿಯಲ್ಲಿ ತೋವಿವಿಯ ವಿಸ್ತರಣಾ ನಿರ್ದೇಶಕ ಹಾಗೂ ತೋಟಗಾರಿಕೆ ಮೇಳದ ಅಧ್ಯಕ್ಷ ಡಾ.ವೆಂಕಟೇಶಲು, ಸಂಶೋಧನ ನಿರ್ದೇಶಕ ಹಾಗೂ ಮೇಳದ ಉಪಾಧ್ಯಕ್ಷ ಡಾ.ಬಿ.ಫಕ್ರುದೀನ, ಪ್ರಚಾರ ಸಮಿತಿಯ ಶಾಂತಪ್ಪ ತಿರಕನ್ನವರ, ಡಾ.ಶಶಿಕುಮಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)